ಸಂಪುಟ: ೦೭/ ಸಂಚಿಕೆ: ೧೨೭/ಗುರುವಾರ ದಿನಾಂಕ : ೦೩-೦೭-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 127/ THURSDAY Date : 03-07-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಎತ್ತಿನಹೊಳೆ ಯೋಜನೆ ಎರಡು ವರ್ಷಗಳಲ್ಲಿ ಕುಡಿಯುವ ನೀರು ಪೂರೈಕೆ : ಮುಖ್ಯಮಂತ್ರಿ

ಚಿಕ್ಕಬಳ್ಳಾಪುರ(ನಂದಿ ಗಿರಿಧಾಮ) : ಎತ್ತಿನಹೊಳೆ ಯೋಜನೆಗೆ ಒಟ್ಟು 23,251 ಕೋಟಿ ರೂ. ಪರಿಷ್ಕೃತ ಅಂದಾಜು ಮಾಡಲಾಗಿದ್ದು, ಇಲ್ಲಿಯವರೆಗೂ 17,147ಕೋಟಿ ರೂ.ಖರ್ಚಾಗಿದೆ. ಎರಡು ವರ್ಷಗಳಲ್ಲಿ ಉದ್ದೇಶಿತ ಜಿಲ್ಲೆ ಹಾಗೂ ತಾಲೂಕುಗಳಿಗೆ ಕುಡಿಯುವ ನೀರು ಪೂರೈಸುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬುಧವಾರ ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಗಿರಿಧಾಮದಲ್ಲಿನ ಮಯೂರ ಸಭಾಂಗಣದಲ್ಲಿ ತಮ್ಮ ಅಧ್ಯಕ್ಷತೆಯಲ್ಲಿ ನಡೆದ ಬೆಂಗಳೂರು ಕಂದಾಯ ವಿಭಾಗದ ವಿಶೇಷ ಸಚಿವ ಸಂಪುಟ ಸಭೆಯ ಬಳಿಕ ಅವರು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಮೂಲತಃ ಕುಡಿಯುವ ನೀರಿನ ಯೋಜನೆ ಇದಾಗಿದೆ. ಕೆರೆಗಳಿಗೆ ನೀರು ತುಂಬಿಸುವುದು ನಂತರದ ಆದ್ಯತೆ. 24.1 ಟಿಎಂಸಿ ನೀರಿನಲ್ಲಿ ಕುಡಿಯುವ ನೀರಿಗೆ 14 ಟಿಎಂಸಿ ಬೇಕಾಗಿದೆ. ಆದುದರಿಂದ, ಮೊದಲು ಕುಡಿಯುವ ನೀರನ್ನು ಕೊಡುವ ಯೋಜನೆ ಮುಗಿಸಲು ಸಂಪುಟ ಸಭೆ ತೀರ್ಮಾನಿಸಿದೆ. ಎರಡು ವರ್ಷಗಳಲ್ಲಿ ಉದ್ದೇಶಿತ ಜಿಲ್ಲೆ, ತಾಲ್ಲೂಕುಗಳಿಗೆ ನೀರು ಕೊಡುತ್ತೇವೆ ಎಂದು ಅವರು ಹೇಳಿದರು.



9807 ಕೋಟಿ ರೂ. ಮೊತ್ತದಲ್ಲಿ ಗ್ರಾವಿಟಿ ಮುಖ್ಯ ಕೆನಲ್‌ನ ಕೆಲಸ ಶೇ. 85ರಷ್ಟು ಮಗಿದಿದೆ. ಹೆಚ್ಚುವರಿಯಾಗಿ ಇದಕ್ಕೆ 8 ಸಾವಿರ ಕೋಟಿ ರೂ. ಬೇಕಾಗಿದೆ. ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಉತ್ತರ, ತುಮಕೂರು, ಹಾಸನ ಸೇರಿದಂತೆ ಒಟ್ಟು 9 ಜಿಲ್ಲೆಗಳ 75 ಲಕ್ಷ ಜನರಿಗೆ ಕುಡಿಯುವ ನೀರು ಕೊಡುತ್ತೇವೆ ಎಂದು ಮುಖ್ಯಮಂತ್ರಿ ಹೇಳಿದರು.

ಈ ಸಂಪುಟ ಸಭೆಯಲ್ಲಿ ಸುದೀರ್ಘ ಚರ್ಚೆಯಾಗಿದೆ. ಮುಂದಿನ ಸಂಪುಟ ಸಭೆಯಲ್ಲಿ ನಿರ್ಣಯಿಸಲು ತೀರ್ಮಾನಿಸಲಾಗಿದೆ ಎಂದು ಸಿದ್ದರಾಮಯ್ಯ ತಿಳಿಸಿದರು. ಶೇ.90 ರಷ್ಟು ಬೆಂಗಳೂರು ವಿಭಾಗದ ವಿಷಯಗಳನ್ನೇ ಈ ವಿಶೇಷ ಸಂಪುಟ ಸಭೆಯಲ್ಲಿ ಚರ್ಚಿಸಿ ನಿರ್ಣಯ ಕೈಗೊಂಡಿದ್ದೇವೆ. ಒಟ್ಟು 3400 ಕೋಟಿ ರೂ. ಮೊತ್ತದ ಯೋಜನೆಗಳನ್ನು ಮಂಜೂರು ಮಾಡಿದ್ದೇವೆ. ಇದರಲ್ಲಿ, 2050 ಕೋಟಿ ರೂ. ಬೆಂಗಳೂರು ವಿಭಾಗದ ಜಿಲ್ಲೆಗಳಿಗೆ ಕೊಟ್ಟಿದ್ದೇವೆ ಎಂದು ಸಿದ್ದರಾಮಯ್ಯ ಹೇಳಿದರು.

ಪ್ರತೀ ಜಿಲ್ಲೆಯಲ್ಲಿ ಕಾರ್ಮಿಕರ ಮಕ್ಕಳಿಗೆ ವಸತಿ ಶಾಲೆ ನಿರ್ಮಿಸಲು ತೀರ್ಮಾನಿಸಲಾಗಿದ್ದು ಇದಕ್ಕೆ 1125.25 ಕೋಟಿ ರೂ. ಮಂಜೂರು ಮಾಡಲಾಗಿದೆ. ಶಿಕ್ಷಣ, ಆರೋಗ್ಯ, ಕುಡಿಯುವ ನೀರು, ನೀರಾವರಿ ಯೋಜನೆ, ಕೆರೆ ತುಂಬಿಸುವ ಯೋಜನೆಗಳನ್ನೇ ಪ್ರಮುಖವಾಗಿ ಚರ್ಚಿಸಲಾಗಿದೆ ಎಂದು ಅವರು ಹೇಳಿದರು.

ಹಿಂದುಳಿದ ವರ್ಗದ ಅಭ್ಯರ್ಥಿಗಳು ಐಎಎಸ್, ಐಆರ್‌ಎಸ್, ಐಪಿಎಸ್ ಸೇರಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ನೀಡಲು 10 ಕೋಟಿ ರೂ. ವೆಚ್ಚದಲ್ಲಿ ಎರಡು ವಸತಿ ಶಾಲೆ ಬೆಂಗಳೂರಿನಲ್ಲಿ ನಿರ್ಮಿಸಲಾಗುವುದು. ಶಿಕ್ಷಣಕ್ಕೆ 1627.25 ಕೋಟಿ ರೂ ನೀಡಿದ್ದೇವೆ. ಇದರಲ್ಲಿ ಕಾಲೇಜು, ವಿಶ್ವವಿದ್ಯಾಲಯಗಳ ಮೂಲಭೂತ ಸೌಕರ್ಯ ಒದಗಿಸುತ್ತಿದ್ದೇವೆ ಎಂದು ಅವರು ಹೇಳಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇಲ್ಲದ ಹೊಸ ತಾಲ್ಲೂಕುಗಳಲ್ಲಿ ಸಮುದಾಯ ಆರೋಗ್ಯ ಕೇಂದ್ರಗಳನ್ನು ಆರಂಭಿಸಲು ತೀರ್ಮಾನ ಮಾಡಿದ್ದೇವೆ ಎಂದು ಸಿದ್ದರಾಮಯ್ಯ ತಿಳಿಸಿದರು.

ನಾವು ಆಡಳಿತವನ್ನು ಬೆಂಗಳೂರು ಕೇಂದ್ರಿತ ಎಂಬುದನ್ನು ತಪ್ಪಿಸಿ ವಿಕೇಂದ್ರೀಕರಣ ಮಾಡುವುದಕ್ಕಾಗಿಯೆ ಆಯಾ ಭಾಗದ ಸಮಸ್ಯೆಗಳ ಮೇಲೆ ಗಮನ ಹರಿಸಿ ಅವುಗಳಿಗೆ ಚಿಕಿತ್ಸಕ ಪರಿಹಾರ ನೀಡುವ ಉದ್ದೇಶದಿಂದ ಸಚಿವ ಸಂಪುಟ ಸಭೆಗಳನ್ನು ರಾಜ್ಯದ ಬೇರೆ ಬೇರೆ ಭಾಗಗಳಲ್ಲಿ ನಡೆಸುತ್ತಿದ್ದೇವೆ ಎಂದು ಅವರು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಎಚ್.ಕೆ.ಪಾಟೀಲ್, ಕೆ.ಎಚ್. ಮುನಿಯಪ್ಪ, ಡಾ.ಜಿ.ಪರಮೇಶ್ವರ್, ಡಾ.ಎಂ.ಸಿ.ಸುಧಾಕರ್, ಬಿ.ಎಸ್.ಸುರೇಶ್, ಶಾಸಕ ಪ್ರದೀಪ್ ಈಶ್ವರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಬೆಂಗಳೂರು ಗ್ರಾಮಾಂತರ ನಾಮ ಬದಲಾವಣೆಗೆ ಸಚಿವ ಸಂಪುಟ ಅಸ್ತು



ಚಿಕ್ಕಬಳ್ಳಾಪುರ: ಹಲವರ ವಿರೋಧದ ನಡುವೆಯೂ ರಾಮನಗರ ಜಿಲ್ಲೆ ಹೆಸರನ್ನು ಬೆಂಗಳೂರು ದಕ್ಷಿಣ ಎಂದು ಮರುನಾಮಕರಣ ಮಾಡಲಾಗಿದೆ. ಇದರ ಬೆನ್ನಲ್ಲೇ ಇದೀಗ ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ಬೆಂಗಳೂರು ಉತ್ತರ ಜಿಲ್ಲೆಯನ್ನಾಗಿ ಮಾಡಲು ಸಿದ್ದರಾಮಯ್ಯ ಸರ್ಕಾರ ಮುಂದಾಗಿದ್ದು, ಈ ಪ್ರಸ್ತಾವನೆಗೆ ಬುಧವಾರದಂದು ಚಿಕ್ಕಬಳ್ಳಾಪುರದ ನಂದಿ ಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಸಹ ಗ್ರೀನ್ ಸಿಗ್ನಲ್ ನೀಡಿದೆ. ಇದರ ಜೊತೆಗೆ ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಹೆಸರು ಬದಲಾವಣೆಗೂ ಒಪ್ಪಿಗೆ ಸೂಚಿಸಿದ್ದು, ಭಾಗ್ಯನಗರ ಎಂದು ಮರು ನಾಮಕರಣಕ್ಕೆ ಸಚಿವ ಸಂಪುಟ ಅನುಮೋದನೆ ನೀಡಿದೆ.

ಪ್ರತಿಪಕ್ಷಗಳ ವಿರೋಧದ ನಡುವೆಯೂ ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಸರ್ಕಾರ ಬದಲಾವಣೆ ಮಾಡಿತ್ತು. ಇದರ ಬಳಿಕ ತುಮಕೂರು ಜಿಲ್ಲೆಗೆ ಬೆಂಗಳೂರು ಉತ್ತರ ಜಿಲ್ಲೆ ಎಂದು ಹೆಸರಿಸಬೇಕೆಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೇರಿ ಕೆಲವರು ಒತ್ತಾಯಿಸಿದ್ದರು. ಆದರೆ, ಸರ್ಕಾರ ಇದೀಗ ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ಬೆಂಗಳೂರು ಉತ್ತರ ಜಿಲ್ಲೆ ಎಂದು ಹೆಸರು ಬದಲಾಯಿಸುವ ಸಂಬಂಧ ಇಂದಿನ ಸಚಿವ ಸಂಪುಟದಲ್ಲಿ ಚರ್ಚೆ ನಡೆದಿದ್ದು, ಅಂತಿಮವಾಗಿ ಹೆಸರು ಬದಲಾವಣೆಗೆ ಒಪ್ಪಿಗೆ ಸೂಚಿಸಿದೆ.

1986ರಲ್ಲಿ ಬೆಂಗಳೂರು ನಗರ ಜಿಲ್ಲೆಯಿಂದ ಪ್ರತ್ಯೇಕವಾಗಿ ಬೆಂಗಳೂರು ಗ್ರಾಮಾಂತ ಎಂದು ಹೊಸ ಜಿಲ್ಲೆಯಾಗಿ ರೂಪುಗೊಂಡಿತ್ತು. ದೊಡ್ಡಬಳ್ಳಾಪುರ, ಹೊಸಕೋಟೆ, ನೆಲಮಂಗಳ, ರಾಂನಗರ, ಮಾಗಡಿ, ಕನಕಪುರ, ಚನ್ನಪಟ್ಟಣ ತಾಲೂಕು ಒಳಗೊಂಡು ಪ್ರತ್ಯೇಕ ಜಿಲ್ಲೆ ಅಸ್ತಿತ್ವಕ್ಕೆ ಬಂದಿತ್ತು. ಆದ್ರೆ, 2007ರಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ಮತ್ತೆ ರಾಮನಗರ ಜಿಲ್ಲೆಯಾಗಿ ವಿಭಜಿಸಲಾಗಿತ್ತು. ಬೆಂಗಳೂರು ಗ್ರಾಮಾಂತರ ವ್ಯಾಪ್ತಿಗೆ ಬರುವ ದೊಡ್ಡಬಳ್ಳಾಪುರ, ಹೊಸಕೋಟೆ, ದೇವನಹಳ್ಳಿ ಒಳಗೊಂಡಿದ್ದು, ಇದುವರೆಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಯಾವುದೇ ಜಿಲ್ಲಾ ಕೇಂದ್ರ ಇಲ್ಲ. ಹೀಗಾಗಿ ಜಿಲ್ಲಾ ಕೇಂದ್ರವೇ ಇಲ್ಲದ ರಾಜ್ಯದ ಏಕೈಕ ಜಿಲ್ಲೆ ಬೆಂಗಳೂರು ಗ್ರಾಮಾಂತರ ಎನಿಸಿಕೊಂಡಿದೆ.

ವ್ಯಾಪಕ ವಿರೋಧದ ನಡುವೆಯೂ ರಾಮನಗರ ಜಿಲ್ಲೆಯ ಹೆಸರನ್ನು ಬೆಂಗಳೂರು ದಕ್ಷಿಣ ಎಂದು ಬದಲಾವಣೆ ಮಾಡಲಾಗಿತ್ತು. ಬೆಂಗಳೂರಿನ ಬ್ರ್ಯಾಂಡ್ ಹೆಚ್ಚಿಸಲು ಈ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸಮಜಾಯಿಷಿ ನೀಡಿದ್ದರು. ಇದೀಗ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೆಸರನ್ನು 'ಬೆಂಗಳೂರು ಉತ್ತರ' ಎಂದು ಮರುನಾಮಕರಣ ಮಾಡಲು ನಿರ್ಧರಿಸಲಾಗಿದೆ. ರಾಮನಗರ ಜಿಲ್ಲೆಯ ಹೆಸರು ಬದಲಾವಣೆಗೆ ಏನು ಕಾರಣ ಕೊಡಲಾಗಿತ್ತೋ, ಇಲ್ಲೂ ಅದೇ ಕಾರಣವನ್ನು ನೀಡಲಾಗಿದೆ.

ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯ ಬಾಗೇಪಲ್ಲಿಯ ಹೆಸರನ್ನೂ ಬದಲಾಯಿಸಲು ಸ್ಥಳೀಯ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ಬಾಗೇಪಲ್ಲಿಯ ಹೆಸರು 'ಭಾಗ್ಯನಗರ' ಎಂದು ಬದಲಾವಣೆ ಮಾಡಬೇಕೆಂದು ಸರ್ಕಾರಕ್ಕೆ ಮನವಿ ಮಾಡಿದ್ದರು. ಇದೀಗ ಈ ಪ್ರಸ್ತಾವನೆಗೂ ಸಹ ಇಂದಿನ ಸಚಿವ ಸಂಪುಟ ಅನುಮೋದನೆ ನೀಡಿದ್ದು, ಬಾಗೇಪಲ್ಲಿ ಇನ್ಮುಂದೆ 'ಭಾಗ್ಯನಗರ' ಎಂದು ಬದಲಾಗಲಿದೆ.

ಈ ಸಂದರ್ಭದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ, ಸಚಿವರಾದ ಎಂ.ಬಿ. ಪಾಟೀಲ, ಆರ್.ಬಿ. ತಿಮ್ಮಾಪೂರ, ಲಕ್ಷ್ಮಿ ಹೆಬ್ಬಾಳಕರ್, ಜಿ. ಪರಮೇಶ್ವರ, ಹೆಚ್.ಕೆ. ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## 5.5 ವರ್ಷಗಳಲ್ಲಿ 82 ಹುಲಿಗಳ ಸಾವು ಸಮಗ್ರ ವರದಿಗೆ ಸಚಿವ ಈಶ್ವರ್ ಖಂಡ್ರೆ ಸೂಚನೆ

ಬೆಂಗಳೂರು: ರಾಜ್ಯದಲ್ಲಿ ಕಳೆದ ಐದೂವರೆ ವರ್ಷಗಳಲ್ಲಿ 82 ಹುಲಿಗಳು ಮೃತಪಟ್ಟಿರುವುದಕ್ಕೆ ಆಘಾತ ವ್ಯಕ್ತಪಡಿಸಿರುವ ಸಚಿವ ಈಶ್ವರ್ ಖಂಡ್ರೆ ಅವರು, ಈ ಎಲ್ಲಾ ಹುಲಿಗಳ ಸಾವಿನ ಬಗ್ಗೆ ವರದಿ ಸಲ್ಲಿಸುವಂತೆ ಅರಣ್ಯಾಧಿಕಾರಿಗಳಿಗೆ ಮಂಗಳವಾರ ಸೂಚನೆ ನೀಡಿದ್ದಾರೆ.

ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಈ ಸಂಬಂಧ ಸೂಚನೆ ನೀಡಿರುವ ಸಚಿವರು, ಸಾವನ್ನಪ್ಪಿರುವ 82 ಹುಲಿಗಳ ಪೈಕಿ ಎಷ್ಟು ಹುಲಿಗಳು ಸಹಜವಾಗಿ ಸಾವನ್ನಪ್ಪಿವೆ? ಎಷ್ಟು ಹುಲಿಗಳು ಅಸಹಜವಾಗಿ ಮೃತಪಟ್ಟಿವೆ? ಅಸಹಜವಾಗಿ ಮೃತಪಟ್ಟ ಹುಲಿಗಳ ಸಾವಿಗೆ ಕಾರಣವೇನು? ಎಂಬ ಬಗ್ಗೆ ತನಿಖೆ ನಡೆದು ವರದಿ ಬಂದಿದೆಯೇ? ಎಂದು ಪ್ರಶ್ನಿಸಿದ್ದಾರೆ.

ಮೃತಪಟ್ಟ ಯಾವುದಾದರೂ ಹುಲಿಗಳ ಅಂಗಾಂಗ ಅಂದರೆ ಉಗುರು, ಹಲ್ಲು ಇತ್ಯಾದಿ ತೆಗೆಯಲಾಗಿತ್ತೆ? ಹುಲಿಗಳ ಹತ್ಯೆ ಆಗಿದ್ದಲ್ಲಿ ನಿರ್ಲಕ್ಷ್ಯ ತೋರಿದ ಸಿಬ್ಬಂದಿ, ಅಧಿಕಾರಿಗಳ ವಿರುದ್ಧ ಕ್ರಮ ಆಗಿದೆಯೇ? ಎಷ್ಟು ಹುಲಿ ಹತ್ಯೆ ಪ್ರಕರಣದಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ? ಎಂಬ ವಿವರವನ್ನೂ ಕೇಳಿದ್ದಾರೆ.

ಈವರೆಗೆ ಹುಲಿ ಹತ್ಯೆ ಪ್ರಕರಣಗಳಲ್ಲಿ ಎಷ್ಟು ಜನರಿಗೆ ಶಿಕ್ಷೆ ಆಗಿದೆ? ಎಷ್ಟು ಪ್ರಕರಣಗಳು ತನಿಖಾ ಹಂತದಲ್ಲಿದೆ. ಯಾವ ಕಾರಣಕ್ಕೆ ತನಿಖೆ ವಿಳಂಬವಾಗಿದೆ ಎಂಬ ಸಂಪೂರ್ಣ ವಿವರವನ್ನು 10 ದಿನಗಳ ಒಳಗಾಗಿ ಸಲ್ಲಿಸಲು ಸೂಚಿಸಿದ್ದಾರೆ.

ಸಚಿವರ ಸೂಚನೆ ಕುರಿತು ಪ್ರತಿಕ್ರಿಯೆ ನೀಡಿರುವ ಅರಣ್ಯಾಧಿಕಾರಿಗಳು, ಇದು ಸಚಿವರ ನಿಯಮಿತ ವಿಚಾರಣೆಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಹುಲಿ ವಿಷಪ್ರಾಶನ ಪ್ರಕರಣವು ಸುಮಾರು ಮೂರು ವರ್ಷಗಳ ಹಿಂದೆ ನಾಗರಹೊಳೆ ಹುಲಿ ಮೀಸಲು ಪ್ರದೇಶದಲ್ಲಿ ವರದಿಯಾಗಿತ್ತು, ನಂತರ ಮಲೆ ಮಹದೇಶ್ವರ ಬೆಟ್ಟ ವನ್ಯಜೀವಿ ಅಭಯಾರಣ್ಯದಲ್ಲಿ ವರದಿಯಾಗಿತ್ತು. ಈ ಮಾಹಿತಿಗಳನ್ನು ಒಟ್ಟುಗೂಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು, ಜೊತೆಗೆ ಎಲ್ಲವನ್ನೂ ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರದೊಂದಿಗೆ (ಎನ್‌ಟಿಸಿಎ) ಹಂಚಿಕೊಳ್ಳಲಾಗುವುದು ಎಂದು ಹೇಳಿದರು.

ಎನ್‌ಟಿಸಿಎ ದತ್ತಾಂಶದ ಪ್ರಕಾರ, 2012–24ರ ಅವಧಿಯಲ್ಲಿ, ರಾಜ್ಯದಲ್ಲಿ 179 ಹುಲಿಗಳ ಸಾವುಗಳನ್ನು ವರದಿಯಾಗಿದ್ದು, ಈ ಪೈಕಿ 68 ಸಾವು 2021–25 ಜುಲೈನಲ್ಲಿ ವರದಿಯಾಗಿದೆ. 2012–24ರ ಅವಧಿಯಲ್ಲಿ, ನಾಗರಹೊಳೆ ಹುಲಿ ಮೀಸಲು ಪ್ರದೇಶದಲ್ಲಿ 68 ಹುಲಿಗಳ ಸಾವುಗಳ ವರದಿಯಾಗಿದೆ.

## ಶಿವಮೊಗ್ಗ- ಚಿತ್ರದುರ್ಗ- ದಾವಣಗೆರೆ ಜಿಲ್ಲೆಗಳ ನೀರಾವರಿ ಯೋಜನೆಗಳಿಗೆ ಸಚಿವ ಸಂಪುಟ ಅನುಮೋದನೆ



ಚಿಕ್ಕಬಳ್ಳಾಪುರ (ನಂದಿ ಗಿರಿಧಾಮ) : ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲೂಕಿನ ತೊರೆಬೀರನಹಳ್ಳಿ ಮತ್ತು ಬೆಳಗೆರೆ ಗ್ರಾಮಗಳ ನಡುವೆ ವೇದಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣಕ್ಕಾಗಿ 28 ಕೋಟಿ ರೂ.ಮೊತ್ತದ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಂದಿ ಗಿರಿಧಾಮದಲ್ಲಿ ನಡೆದ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ.

ಗುಡಿಹಳ್ಳಿ ಮತ್ತು ತಪ್ಪಗೊಂಡನಹಳ್ಳಿ ಗ್ರಾಮಗಳ ನಡುವೆ ವೇದಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣಕ್ಕಾಗಿ 31.40 ಕೋಟಿ ರೂ. , ಗೋಸಿಕೆರೆ ಗ್ರಾಮದ ಸಮೀಪ ವೇದಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣಕ್ಕಾಗಿ 34.50 ಕೋಟಿ ರೂ. ಮಂಜೂರು ಮಾಡಲು ನಿರ್ಧರಿಸಲಾಗಿದೆ.

ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲೂಕಿನ ಗೋಣಿಬೀಡು ಗ್ರಾಮದ ಹತ್ತಿರ ಭದ್ರಾ ನದಿಯಿಂದ 0.19 ಟಿಎಂಸಿ ನೀರನ್ನೆತ್ತಿ ಕಂಬದಾಳ್ ಹೊಸೂರು ಮತ್ತು ಸುತ್ತಮುತ್ತಲಿನ ಗ್ರಾಮಗಳ 22 ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ 54 ಕೋಟಿ ರೂ.ಗಳನ್ನು ಮಂಜೂರಾತಿ ನೀಡಲಾಗಿದೆ.

ಭದ್ರಾ ನದಿಯ ಎಡ ಮತ್ತು ಬಲದಂಡೆಗಳಲ್ಲಿ ಪ್ರವಾಹ ಪೀಡಿತ ಪ್ರದೇಶಗಳನ್ನು ರಕ್ಷಿಸಲು ತಡೆಗೋಡೆ ನಿರ್ಮಾಣ ಕಾಮಗಾರಿಯನ್ನು 50 ಕೋಟಿ ರೂ. ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಭದ್ರಾವತಿ ಪಟ್ಟಣದ ಭದ್ರಾ ನದಿಗೆ ಅಡ್ಡಲಾಗಿ ರಸ್ತೆ ಸೇತುವೆ ನಿರ್ಮಾಣ ಮತ್ತು ದೊಣಬಘಟ್ಟ, ಕಾಗೆಕೊಡಮಗ್ಗೆ, ಹೊಳೆಹೊನ್ನೂರು ಗ್ರಾಮದ ಭದ್ರಾವತಿ ಮುಖ್ಯ ರಸ್ತೆ ನಡುವೆ ಸಂಪರ್ಕ ರಸ್ತೆ ಸುಧಾರಣೆ ಕಾಮಗಾರಿಯನ್ನು 35 ಕೋಟಿ ರೂ. ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಶಿವಮೊಗ್ಗ ಜಿಲ್ಲೆಯ ಸೊರಬ ತಾಲೂಕಿನ ಯಡಗೊಪ್ಪ ಗ್ರಾಮದ ಹತ್ತಿರ ದಂಡಾವತಿ ನದಿಗೆ ಬ್ಯಾರೇಜ್ ನಿರ್ಮಿಸಿ 15 ಕೆರೆಗಳನ್ನು ತುಂಬಿಸುವ 38.50 ಕೋಟಿ ರೂ.,

ಗುಡವಿ ಗ್ರಾಮದ ಹತ್ತಿರ ವರದಾ ನದಿಗೆ ಅಡ್ಡಲಾಗಿ ಬ್ಯಾರೇಜ್ ನಿರ್ಮಿಸಿ, 0.2017 ಟಿಎಂಸಿ ನೀರನ್ನೆತ್ತಿ 32 ಕೆರೆಗಳನ್ನು ತುಂಬಿಸುವ 75.60 ಕೋಟಿ ರೂ.ಗಳ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ದಂಡಾವತಿ ಮತ್ತು ವರದಾ ನದಿಗಳಿಗೆ ಅಡ್ಡಲಾಗಿ ಬ್ಯಾರೇಜ್/ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸುವ 54.70 ಕೋಟಿ ರೂ.ಗಳ ಯೋಜನೆಗೆ ಅನುಮೋದನೆ ನೀಡಲಾಗಿದೆ.

ದಾವಣಗೆರೆ ಜಿಲ್ಲೆಯ ಹೊನ್ನಾಳಿ ತಾಲೂಕಿನ ಹೊಸಹಳ್ಳಿ ಗ್ರಾಮದ ಹತ್ತಿರ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ಚನ್ನಗಿರಿ ತಾಲೂಕಿನ ಕೊಡತಕೆರೆ, ಮಾವಿನಹೊಳೆಕೆರೆ ಸೇರಿದಂತೆ ಸುತ್ತಮುತ್ತಲಿನ 41 ಕೆರೆಗಳನ್ನು ತುಂಬಿಸಲು 365 ಕೋಟಿ ರೂ. ಮೊತ್ತದ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಬೆಳಗಾವಿ ಜಿಲ್ಲೆಯ ಬೈಲಹೊಂಗಲ, ವಿಜಯನಗರ ಜಿಲ್ಲೆಯ ಹರಪನಹಳ್ಳಿ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ನಿರ್ಧರಿಸಲಾಗಿದೆ. ಕೊಪ್ಪಳ ಜಿಲ್ಲೆಯ ಹನುಮ ಸಾಗರ ಗ್ರಾಮ ಪಂಚಾಯತಿ ಅನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ ಏರಿಸಲು ನಿರ್ಧರಿಸಲಾಗಿದೆ.

## ಶ್ರೀ ಮಹಾಲಕ್ಷ್ಮೀದೇವಿಯರಿಗೆ ವಿಶೇಷ ಪೂಜೆ



ಗೋಕಾಕ: ಗ್ರಾಮ ದೇವತೆಯರ ಜಾತ್ರಾ ಮಹೋತ್ಸವದ ಎರಡನೇ ದಿನವಾದ ಮಂಗಳವಾರದಂದು ಗ್ರಮ ದೇವತೆಯರು ಸೇರಿದಂತೆ ನಗರದ ಎಲ್ಲ ದೇವಸ್ಥಾನಗಳಲ್ಲ ಪುರ ಜನರಿಂದ ನೈವೇದ್ಯ ಅರ್ಪಣೆ ಜರುಗಿತು.

ಮುಂಜಾನೆ 3ಗಂಟೆಯಿಂದಲೇ ಪ್ರಾರಂಭವಾದ ಪುರ ಜನತೆಯ ನೈವೇದ್ಯ ಅರ್ಪಣೆ ಕಾರ್ಯಕ್ರಮದ ಸಂಜೆಯವರೆಗೂ ಜರುಗಿತು. ಸಾವಿರಾರು ಸಂಖ್ಯೆಯಲ್ಲಿ ಮಹಿಳೆಯರು ಭಕ್ತಿ ಭಾವದಿಂದ ಶ್ರೀದೇವಿಯರಿಗೆ ನೈವೇದ್ಯ ಅರ್ಪಿಸಿ ದೇವಿಯರ ಅನುಗ್ರಕ್ಕೆ ಪಾತ್ರರಾದರು.

ನಗರದ ಎರಡು ಶ್ರೀ ಮಹಾಲಕ್ಷ್ಮೀದೇವಿಯರಿಗೆ ಮುಂಜಾನೆ 6ರಿಂದ 8ರವರೆಗೆ ಅಭಿಷೇಕ ಮತ್ತು ವಿಶೇಷ ಪೂಜಾ ಸಮಾರಂಭ ಜರುಗಿತು. ಸಂಜೆ 4ರಿಂದ ಶ್ರೀ ಮಹಾಲಕ್ಷ್ಮೀ ದೇವಿಯರ ಪಲ್ಲಕ್ಕಿ ಹಾಗೂ ಮುತ್ತೈದೇಯರು ಮತ್ತು ಪುರ ಜನತೆ ಕೂಡಿ ಊರೋಳಗಿನ ಶ್ರೀ ಮಹಾಲಕ್ಷ್ಮೀ ದೇವಸ್ಥಾನದಿಂದ ಸಕಲ ವಾದ್ಯಮೇಳದೊಂದಿಗೆ ವಿಜೃಂಭಣೆಯಿಂದ ನಗರದ ಮುಖ್ಯ ಬೀದಿಗಳಲ್ಲಿ ಸಂಚರಿಸಿ ಶ್ರೀ ದ್ಯಾಮವ್ವನ ಗುಡಿಗೆ ಆಗಮಿಸಿ ಪುನಃ ಶ್ರೀ ಮಹಾಲಕ್ಷ್ಮೀ ಗುಡಿಗೆ ತಲುಪಿತು. ನಗರದ ಎಲ್ಲೇಡೆ ಮಹಿಳೆಯರು ಮಕ್ಕಳು ದೇವ ಮಂದಿರಗಳಲ್ಲಿ ಕಂಡು ಬಂದರು.

ನೈವೇದ್ಯ ಅರ್ಪಣೆ ಮತ್ತು ಉಡಿ ತುಂಬುವ ಸ್ಥಳಗಳಲ್ಲಿ ಪೋಲಿಸ್ ಇಲಾಖೆಯಿಂದ ಬ್ಯಾರಿಕೇಡಗಳನ್ನು ಅಳವಡಿಸಿ ಸುವ್ಯವಸ್ಥೆಯಿಂದ ದೇವಿಯರ ದರ್ಶನ ಮಾಡಲು ಅವಕಾಶ ಕಲ್ಪಿಸಿದ್ದರು. ನಗರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪುರಜನರಿದ್ದರು ಶಾಂತಿಯುತವಾಗಿ ಭಕ್ತಿಭಾವದಿಂದ ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಂಡಿದ್ದರು. ನಗರದಲ್ಲಿ ಟ್ರಾಫೀಕ್ ಸಮಸ್ಯೆಯಾಗದಂತೆ ಪ್ರಮುಖ ದೇವಾಲಗಳಿಗೆ ಸಾಗುವ ರಸ್ತೆಗಳಿಗೆ ಸುಮಾರು ಅರ್ಧ ಕೀಲೊ ಮೀಟರ್‌ನಷ್ಟು ಮೊದಲೇ ಬ್ಯಾರಿಕೇಡ ಅಳವಡಿಸಿ ವಾಹನಗಳ ಒಡಾಟವನ್ನು ನಿಷೇಧಿಸಲಾಗಿತ್ತು.

ಶಾಸಕ ಹಾಗೂ ಶ್ರೀ ಮಹಾಲಕ್ಷ್ಮೀದೇವಿ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ರಮೇಶ ಜಾರಕಿಹೊಳಿ, ಹಿರಿಯ ರಾಜಕೀಯ ಮುಖಂಡ ಅಶೋಕ ಪೂಜಾರಿ ಸೇರಿದಂತೆ ಗಣ್ಯರು ಗ್ರಾಮ ದೇವತೆಯರ ದರ್ಶನ ಪಡೆದರು.

## ಬೆಳಗಾವಿ ಜಿಲ್ಲೆ ವಿಭಜನೆಗೆ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಒತ್ತಾಯ

ಬೆಳಗಾವಿ: 2025ರ ಡಿಸೆಂಬರ್ 31ರೊಳಗೆ ಕ್ರಮವಹಿಸಿ ಹೊಸ ಜಿಲ್ಲೆಗಳನ್ನು ಘೋಷಣೆ ಮಾಡದೇ ಹೋದರೆ ಈ ಸರ್ಕಾರದ ಅವಧಿಯಲ್ಲಿ ಜಿಲ್ಲಾ ರಚನೆ ಮರೀಚಿಕೆ ಆಗುತ್ತದೆ. ಮುಖ್ಯಮಂತ್ರಿಗಳು, ಕಂದಾಯ ಸಚಿವರು ಹಾಗೂ ಜಿಲ್ಲೆಯ ಇಬ್ಬರು ಸಚಿವರು ಜನರ ಮೂಗಿಗೆ ತುಪ್ಪ ಹಚ್ಚುವುದನ್ನು ಬಿಟ್ಟು ಬೆಳಗಾವಿ ಜಿಲ್ಲೆಯನ್ನು ವಿಭಜಿಸುವಂತೆ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಒತ್ತಾಯಿಸಿದರು.

ಬೆಳಗಾವಿಯಲ್ಲಿ ಇಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕೇಂದ್ರದ ಜನಗಣತಿ ಇಲಾಖೆ ಒಂದು ಆದೇಶ ಹೊರಡಿಸಿದ್ದು, ಎಲ್ಲಾ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳಿಗೆ ಸುತ್ತೋಲೆ ಕಳಿಸಿದ್ದಾರೆ. 2026ರ ಎಪ್ರೀಲ್ 1ರಿಂದ ಜನಗಣತಿ ಕುರಿತು ಅಧಿಕೃತವಾಗಿ ಕಾರ್ಯ ಆರಂಭಿಸುತ್ತಿದ್ದು, ಮೊದಲ ಹಂತದಲ್ಲಿ ಜನವಸತಿ ಪ್ರದೇಶಗಳು ಮತ್ತು ಮನೆಗಳ ಸಮೀಕ್ಷೆ ಮಾಡಲಿದ್ದೇವೆ. ಅದಾದ ಬಳಿಕ 2027ರ ಫೆಬ್ರವರಿಯಿಂದ ಜನಸಂಖ್ಯೆ ಗಣತಿ ಆರಂಭಿಸುತ್ತೇವೆ. ಇದಕ್ಕೆ ಎರಡು ವರ್ಷ ಬೇಕಾಗುತ್ತದೆ. ರಾಜ್ಯ ಸರ್ಕಾರಗಳು ತಮ್ಮ ಗ್ರಾಮ, ತಾಲೂಕು, ಜಿಲ್ಲೆ, ಉಪವಿಭಾಗಾಧಿಕಾರಿ ಕಚೇರಿಯ ಗಡಿಗಳನ್ನು ಬದಲಾವಣೆ ಮಾಡುವುದಿದ್ದರೆ ಇದೇ ವರ್ಷ ಡಿ.31ರೊಳಗೆ ಮಾಡಬೇಕು. ನಂತರದ ದಿನಗಳಲ್ಲಿ ಮಾಡಲು ತಮಗೆ ಅವಕಾಶ ಇಲ್ಲ. ಯಾಕೆಂದರೆ ಜನಗಣತಿಗೆ ತೊಂದರೆ ಆಗುತ್ತದೆ ಎಂದು ಸ್ಪಷ್ಟವಾಗಿ ಸುತ್ತೋಲೆಯಲ್ಲಿ ತಿಳಿಸಿದ್ದಾರೆ ಎಂದು ವಿವರಿಸಿದರು.



ಜನಗಣತಿ ಒಮ್ಮೆ ಪ್ರಾರಂಭವಾದರೆ ಎರಡು ವರ್ಷ 2028ರವೆಗೆ ನಡೆಯುತ್ತದೆ. ಅದಕ್ಕೆ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಬೇಕಾಗುತ್ತದೆ. 2028ಕ್ಕೆ ಮತ್ತೆ ವಿಧಾನಸಭೆ ಚುನಾವಣೆ ಬರಲಿದೆ. ಹಾಗಾಗಿ, ಬೆಳಗಾವಿ ಜಿಲ್ಲೆ ಆಡಳಿತಾತ್ಮಕ ದೃಷ್ಟಿಯಿಂದ ನರಳುತ್ತಿದೆ. ಒಬ್ಬರೆ ಒಬ್ಬ ಡಿಸಿ, ಎಸ್ಪಿ, ಜಿ.ಪಂ.ಸಿಇಓ ಹೀಗೆ ಜಿಲ್ಲಾ ಸ್ಥರದ ಅಧಿಕಾರಿಗಳು ಇಷ್ಟು ದೊಡ್ಡ ಜಿಲ್ಲೆಯನ್ನು ನಿಭಾಯಿಸಲು ಹರಸಾಹಸ ಪಡುತ್ತಿದ್ದಾರೆ. ಅಭಿವೃದ್ಧಿ ದೃಷ್ಟಿಯಿಂದಲೂ ಹಿನ್ನಡೆಯಾಗುತ್ತಿದೆ ಎಂದು ಈರಣ್ಣ ಕಡಾಡಿ ಬೇಸರ ಹೊರ ಹಾಕಿದರು.

1973ರಲ್ಲಿ ಸರ್ಕಾರವೇ ನೇಮಕ ಮಾಡಿದ ವಾಸುದೇವ ಆಯೋಗ, 1984ರ ಹುಂಡೇಕಾರ ಆಯೋಗ, 1986ರ ಬಿ.ಸಿ.ಗದ್ದಿಗೌಡರ ಆಯೋಗ, 2008ರ ಎಂ.ಪಿ.ಪ್ರಕಾಶ ಆಯೋಗ. ಈ ನಾಲ್ಕು ಆಯೋಗಗಳು ಜಿಲ್ಲೆ ವಿಭಜನೆ ಕುರಿತು ಸಲ್ಲಿಸಿರುವ ವರದಿಯನ್ನು ಕಸದ ಬುಟ್ಟಿಗೆ ಹಾಕಿ, ಅದನ್ನು ನಿರಂತರವಾಗಿ ಚರ್ಚೆಯಲ್ಲಿ ಇಡುವುದರಲ್ಲಿ ಅರ್ಥವೇನಿದೆ ಎಂದು ಈರಣ್ಣ ಕಡಾಡಿ ಪ್ರಶ್ನಿಸಿದರು.

ಇತ್ತಿಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಜಿಲ್ಲಾ ರಚನೆನೆಗೆ ಪೂರಕವಾದ ಹೇಳಿಕೆ ಕೊಟ್ಟಿದ್ದಾರೆ. ಹಾಗಾಗಿ, ನಿಮಗೆ ಏನಾದರೂ ಇಚ್ಛಾಶಕ್ತಿ ಇದ್ದರೆ ಡಿ.31ರೊಳಗೆ ಘೋಷಿಸುವ ಮೂಲಕ ಹೊಸ ಆಡಳಿತಕ್ಕೆ, ಹೊಸ ಜಿಲ್ಲೆಗಳಿಗೆ ನಾಂದಿ ಹಾಡುವಂತೆ ಈರಣ್ಣ ಕಡಾಡಿ ಒತ್ತಾಯಿಸಿದರು.

ಬೆಳಗಾವಿ ಜಿಲ್ಲಾ ವಿಭಜನೆಗೆ ಶಾಸಕರ ಸಹಮತ ಬೇಕು ಎಂಬ ಕಂದಾಯ ಸಚಿವ ಕೃಷ್ಣಭೈರೇಗೌಡ ಹೇಳಿಕೆಗೆ, ಜಿಲ್ಲಾ ವಿಭಜನೆಯಿಂದ ಆಗಲಿರುವ ಸಾಧಕ-ಭಾದಕಗಳ ಕುರಿತು ಚರ್ಚಿಸಲು ಮುಖ್ಯಮಂತ್ರಿ ಆಗಲಿ, ಕಂದಾಯ ಸಚಿವರಾಗಲಿ, ಜಿಲ್ಲಾ ಉಸ್ತುವಾರಿ ಸಚಿವರಾದರೂ ಜಿಲ್ಲೆಯ ಜನಪ್ರತಿನಿಧಿಗಳನ್ನು ಚರ್ಚೆಗೆ ಒಮ್ಮೆಯಾದರೂ ಕರೆದಿದ್ದಾರಾ ಎಂದು ಪ್ರಶ್ನಿಸಿದರು. ಹಿಂದೆ ಜೆ.ಎಚ್.ಪಟೇಲರ ಕಾಲದಿಂದಲೂ ನಾವು ಹೋರಾಟದಲ್ಲಿದ್ದೇವೆ ಎಂದರು.

ಸರ್ಕಾರ ನೇಮಕ ಮಾಡಿದ ಆಯೋಗಗಳು ಕೊಟ್ಟ ವರದಿಯಲ್ಲಿ ಯಾವ ತಾಲ್ಲೂಕುಗಳನ್ನು ಜಿಲ್ಲೆ ಮಾಡಬೇಕು ಎಂಬ ಬಗ್ಗೆ ಸಾರ್ವಜನಿಕ ಚರ್ಚೆಗೆ ಇಡಬೇಕಿದೆ. ರಾಜಕೀಯ ಬಲಾಬಲದ ಮೇಲೆ ರಚನೆ ಮಾಡುತ್ತೀರೋ.? ಆಡಳಿತಾತ್ಮಕ ವ್ಯವಸ್ಥೆಯನ್ನು ಸರಿ ಪಡಿಸಲು ಮಾಡುತ್ತಿರೋ..? ಆಯಾ ತಾಲ್ಲೂಕಿನವರು ತಮ್ಮದು ಜಿಲ್ಲೆ ಆಗಲಿ ಅಂತಾ ಬೇಡಿಕೆ ಇಡುವುದು ಸಹಜ ಅದು ತಪ್ಪಲ್ಲ. ಆದ-'ರೆ, ಯಾಕೆ ವಿಳಂಬ ಮಾಡುತ್ತಿದ್ದಿರಿ ಎಂದು ಪ್ರಶ್ನಿಸಿದರು.

ಗಡಿ ವಿಷಯ ಬೇರೆ. ಆಡಳಿತಾತ್ಮಕ ದೃಷ್ಟಿಯಿಂದ ಜಿಲ್ಲೆಗಳ ರಚನೆ ಎರಡೂ ಬೇರೆ ಬೇರೆ. ಎರಡಕ್ಕೂ ತಳಕು ಹಾಕುವ ಮೂಲಕ ಜಿಲ್ಲೆಯ ಅಭಿವೃದ್ಧಿಗೆ ಹಿನ್ನಡೆ ಆಗುತ್ತಿರುವುದನ್ನು ಯಾರೂ ಗಮನಿಸುತ್ತಿಲ್ಲ. ಇನ್ನು ಜಿಲ್ಲಾ ವಿಭಜನೆಯಿಂದ ಗಡಿ ವಿವಾದಕ್ಕೆ ಯಾವುದೇ ರೀತಿ ಹಿನ್ನಡೆ ಆಗುವುದಿಲ್ಲ. ಗಡಿ ವಿವಾದ ಮುಗಿದು ಹೋದ ಅಧ್ಯಾಯ ಎಂದು ಸ್ಪಷ್ಟಪಡಿಸಿದರು.

ವ್ಯಕ್ತಿಗಳ ಹಿತಾಸಕ್ತಿ ಗಮನಿಸಿ ಜಿಲ್ಲೆಗಳ ರಚನೆ ಮಾಡಲು ಆಗಲ್ಲ. ಸಾರ್ವತ್ರಿಕ ಹಿತಾಸಕ್ತಿಯನ್ನು ಗಮನದಲ್ಲಿ ಇಟ್ಟುಕೊಂಡು ಮಾಡಬೇಕಾಗುತ್ತದೆ. ಕೆಲವು ರಾಜಕೀಯ ಶಕ್ತಿಗಳಿಗೆ ದೊಡ್ಡ ಜಿಲ್ಲೆಯನ್ನು ತಮ್ಮ ನಿಯಂತ್ರಣದಲ್ಲಿ ಇಟ್ಟುಕೊಳ್ಳುವ ಅಪೇಕ್ಷೆ ಇದ್ದರೆ ಆ ಬಗ್ಗೆ ಚರ್ಚಿಸಬೇಕಾಗುತ್ತದೆ ಎಂದು ಒತ್ತಾಯಿಸಿದರು.

ನಮ್ಮ ತಾಲೂಕು ಜಿಲ್ಲೆ ಆಗಬೇಕು ಎಂಬುದು ನಮ್ಮ ಅಭಿಪ್ರಾಯ. ಅದೇ ರೀತಿ ಬೇರೆ ತಾಲ್ಲೂಕುಗಳು ಜಿಲ್ಲೆಯಾಗಲು ಕೂಡ ನಮ್ಮ ತಕರಾರಿಲ್ಲ. ಆದರೆ, ಗೋಕಾಕ್ ಜಿಲ್ಲೆಯಾಗಲು ಯಾರೂ ವಿರೋಧಿಸಬೇಡಿ ಎಂದು ಕಡಾಡಿ ಹೇಳಿದರು.

## ಹಾಸನ ಜಿಲ್ಲೆಯಲ್ಲಿ ಸರಣಿ ಹೃದಯಾಘಾತ ಪ್ರಕರಣ
### 10 ದಿನಗಳಲ್ಲಿ ಅಧ್ಯಯನ ವರದಿ ನೀಡಲು ಮುಖ್ಯಮಂತ್ರಿ ಸೂಚನೆ

ಬೆಂಗಳೂರು: ಕಳೆದೊಂದು ತಿಂಗಳಿನಲ್ಲಿ ಹಾಸನ ಜಿಲ್ಲೆಯೊಂದರಲ್ಲೇ 20ಕ್ಕೂ ಅಧಿಕ ಮಂದಿ ಹೃದಯಾಘಾತಕ್ಕೆ ಒಳಗಾಗಿ ಸಾವಿಗೀಡಾದ ವಿಚಾರವನ್ನು ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ. ಈ ಸರಣಿ ಸಾವುಗಳಿಗೆ ನಿಖರ ಕಾರಣ ಪತ್ತೆಹಚ್ಚಿ, ಅದಕ್ಕೆ ಪರಿಹಾರ ಮಾರ್ಗೋಪಾಯಗಳನ್ನು ಕಂಡುಕೊಳ್ಳಲು ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕ ಡಾ. ರವೀಂದ್ರನಾಥ್ ನೇತೃತ್ವದಲ್ಲಿ ತಜ್ಞರ ಸಮಿತಿ ರಚಿಸಿ, 10 ದಿನಗಳ ಒಳಗಾಗಿ ಅಧ್ಯಯನ ವರದಿ ನೀಡುವಂತೆ ಸೂಚಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕಳೆದ ಫೆಬ್ರವರಿಯಲ್ಲೇ ರಚನೆ ಆಗಿದೆ ಸಮಿತಿ: ಈ ಸಂಬಂಧ ಎಕ್ಸ್ ಪೋಸ್ಟ್ ಮಾಡಿರುವ ಅವರು, ರಾಜ್ಯದಲ್ಲಿ ಎಳೆಯ ವಯಸ್ಸಿನವರ, ಯುವ ಜನರ ಹಠಾತ್ ನಿಧನಕ್ಕೆ ಕಾರಣಗಳೇನು? ಕೋವಿಡ್ ಲಸಿಕೆಯ ದುಷ್ಪರಿಣಾಮಗಳೇನಾದರೂ ಇರಬಹುದೇ? ಎಂದು ಕೂಲಂಕಷವಾಗಿ ಅಧ್ಯಯನ ನಡೆಸಲು ಇದೇ ಸಮಿತಿಗೆ ಕಳೆದ ಫೆಬ್ರವರಿ ತಿಂಗಳಲ್ಲೇ ಆದೇಶ ನೀಡಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಹೃದ್ರೋಗಿಗಳನ್ನು ಪರಿಶೀಲನೆಗೊಳಪಡಿಸಿ, ವಿಶ್ಲೇಷಣೆ ಮಾಡುವ ಕಾರ್ಯ ಕೂಡ ಪ್ರಗತಿಯಲ್ಲಿದೆ ಎಂದಿದ್ದಾರೆ.

ಯುವ ಜನತೆ ಬಗ್ಗೆ ನಮಗೂ ಕಾಳಜಿ ಇದೆ: ಬದುಕಿ ಬಾಳಬೇಕಾದ ಚಿಕ್ಕಮಕ್ಕಳು, ಯುವಜನರು, ಅಮಾಯಕರ ಜೀವಗಳ ಬೆಲೆ, ಅವರ ಕುಟುಂಬಸ್ಥರ ಕಾಳಜಿ ನಮಗೂ ಇದೆ. ಇಂತಹ ವಿಚಾರಗಳನ್ನು ಕೂಡ ತಮ್ಮ ರಾಜಕೀಯ ಸಾಧನೆಗೆ ಬಳಕೆ ಮಾಡಿಕೊಳ್ಳುತ್ತಿರುವ ಬಿಜೆಪಿ ನಾಯಕರ ನಡೆಯನ್ನು ನಾನು ಖಂಡಿಸುತ್ತೇನೆ. ಆತುರಾತುರದಲ್ಲಿ ಕೊರೊನಾ ಲಸಿಕೆಗೆ ಅಧಿಕೃತ ಅನುಮೋದನೆ ಕೊಟ್ಟು, ಜನರಿಗೆ ಹಂಚಿದ್ದು ಕೂಡ ಈ ಸಾವುಗಳಿಗೆ ಕಾರಣವಿರಬಹುದು ಎಂಬುದನ್ನು ಅಲ್ಲಗಳೆಯಲಾಗದು, ಕಾರಣ ವಿಶ್ವದ ಅನೇಕ ಅಧ್ಯಯನಗಳು ಇತ್ತೀಚೆಗೆ ಹೆಚ್ಚಾಗಿರುವ ಹೃದಯ ಸ್ತಂಭನಕ್ಕೆ ಕೊವಿಡ್ ಲಸಿಕೆ ಕಾರಣ ಎಂಬುದನ್ನು ಹೇಳಿವೆ. ಈ ವಿಚಾರದಲ್ಲಿ ಬಿಜೆಪಿಯವರು ನಮ್ಮನ್ನು ಟೀಕಿಸುವ ಮುನ್ನ ಆತ್ಮಸಾಕ್ಷಿಯನ್ನೊಮ್ಮೆ ಕೇಳಿಕೊಳ್ಳಲಿ ಎಂದು ತಿಳಿಸಿದ್ದಾರೆ.

ತಜ್ಞರ ವರದಿ ಆಧರಿಸಿ ಕ್ರಮ ಎಂದು ಸಿಎಂ ಅಭಯ: ಹಾಸನ ಜಿಲ್ಲೆಯು ಸೇರಿದಂತೆ ರಾಜ್ಯದಲ್ಲಿ ಸಂಭವಿಸುತ್ತಿರುವ ಹಠಾತ್ ಸರಣಿ ಸಾವುಗಳಿಗೆ ನೈಜ ಕಾರಣ ಪತ್ತೆಮಾಡಿ, ತಡೆಯುವ ನಿಟ್ಟಿನಲ್ಲಿ ನಾವು ಸಂಪೂರ್ಣ ಬದ್ಧರಿದ್ದೇವೆ. ಈ ಉದ್ದೇಶದಿಂದಲೇ ಹೃದಯ ಜ್ಯೋತಿ ಮತ್ತು ಗೃಹ ಆರೋಗ್ಯದಂತಹ ಯೋಜನೆಗಳನ್ನು ಈಗಾಗಲೇ ಜಾರಿಗೆಕೊಟ್ಟು, ಸಾರ್ವಜನಿಕರ ಆರೋಗ್ಯದ ಮೇಲೆ ನಿಗಾ ವಹಿಸಲಾಗಿದೆ. ಡಾ. ರವೀಂದ್ರನಾಥ್ ಅವರ ನೇತೃತ್ವದ ತಜ್ಞರ ಸಮಿತಿ ವರದಿ ಆಧರಿಸಿ ಅಗತ್ಯ ಕ್ರಮಗಳನ್ನು ಕೂಡ ಕೈಗೊಳ್ಳಲಾಗುವುದು ಎಂದಿದ್ದಾರೆ.

ಜನರ ಆರೋಗ್ಯ ರಕ್ಷಣೆಗಾಗಿ ಒಂದು ಸರ್ಕಾರವಾಗಿ ಸಾಧ್ಯವಿರುವ ಎಲ್ಲಾ ಪ್ರಯತ್ನಗಳನ್ನು ನಾವು ಮಾಡುತ್ತಿದ್ದು, ಸಾರ್ವಜನಿಕರು ಎದೆನೋವು, ಉಸಿರಾಟದ ತೊಂದರೆ ಕಂಡುಬಂದರೆ ಅಲಕ್ಷ್ಯ ತೋರದೆ ತಕ್ಷಣವೇ ಸಮೀಪದ ಆರೋಗ್ಯ ಕೇಂದ್ರಗಳಿಗೆ ತೆರಳಿ ಪರೀಕ್ಷೆಗೆ ಒಳಗಾಗಬೇಕು ಎಂದು ಮನವಿ ಮಾಡಿದ್ದಾರೆ.

## ತಾತ್ಕಾಲಿಕ ಮೇರಿಟ್ ಪಟ್ಟಿ ಪ್ರಕಟ

ಹಾವೇರಿ: : ಎನ್.ಎಚ್.ಎಂ. ರಾಷ್ಟ್ರೀಯ ಮಾನಸಿಕ ಆರೋಗ್ಯ ಕಾರ್ಯಕ್ರಮದಡಿಯಲ್ಲಿ ಮನೋವೈದ್ಯಕೀಯ ಸಮಾಜ ಸೇವಕ **(Psychiatric social worker)** ಹುದ್ದೆ ಗುತ್ತಿಗೆ ಹಾಗೂ ಮೇರಿಟ್ ಆಧಾರದ ತಾತ್ಕಾಲಿಕ ಪಟ್ಟಿಯನ್ನು ಜಿಲ್ಲೆಯ ಅಧೀಕೃತ ವೆಬ್‍ಸೈಟ್ ತಿತಿತಿ.ಜಿಚಿತಜಡು. ಟಿಛಿ.ಟಿ ನಲ್ಲಿ ಪ್ರಕಟಿಸಲಾಗಿದೆ.

ಆಕ್ಷೇಪಣೆಗಳಿದ್ದಲ್ಲಿ ಅಭ್ಯರ್ಥಿಗಳು ದಿನಾಂಕ 08–07–2025ರ ಸಾಯಂಕಾಲ 5 ಗಂಟೆಯೊಳಗಾಗಿ ಕಚೇರಿಗೆ ಸಲ್ಲಿಸಬೇಕು. ನಂತರ ಬಂದ ಆಕ್ಷೇಪಣೆ ಅರ್ಜಿ ಪರಿಗಣಿಸಲಾಗುವುದಿಲ್ಲ ಎಂದು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಕ ಅದಾಲತ್ ಮೂಲಕ 9000 ಪ್ರಕರಣ ಇತ್ಯರ್ಥಪಡಿಸುವ ಗುರಿ: ನ್ಯಾ.ದಿವ್ಯಶ್ರೀ

ಕಾರವಾರ, : ಜಿಲ್ಲೆಯಲ್ಲಿ ಜುಲೈ 12 ರಂದು ನಡೆಯುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ರಾಜಿಯಾಗಬಹುದಾದ 9000 ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನು ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ.ಎಂ ಹೇಳಿದರು.

ಅವರು ಮಂಗಳವಾರ ಜಿಲ್ಲಾ ನ್ಯಾಯಾಲಯದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಜಿಲ್ಲೆಯಲ್ಲಿ ಪ್ರಸ್ತುತ ವಿವಿಧ ಹಂತದ ನ್ಯಾಯಾಲಯಗಳಲ್ಲಿ 39,270 ಪ್ರಕರಣಗಳು ಬಾಕಿ ಇದ್ದು, ಇದರಲ್ಲಿ 9,000 ಪ್ರಕರಣಗಳನ್ನು ಪಕ್ಷಗಾರರಿಗೆ ಹೊರೆಯಾಗದಂತೆ ಶೀಘ್ರವಾಗಿ ಇತ್ಯರ್ಥ ಮಾಡುವ ಗುರಿ ಹೊಂದಲಾಗಿದ್ದು, ಕಳೆದ ಬಾರಿ ನಡೆದ ಲೋಕ್ ಅದಾಲತ್‌ನಲ್ಲಿ 6,111 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದ್ದು, ಕಳೆದ ಬಾರಿಗಿಂತ ಈ ಬಾರಿ ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥ ಪಡಿಸುವ ಗುರಿ ಹೊಂದಲಾಗಿದೆ ಎಂದರು.

ರಾಜ್ಯ ಮಟ್ಟದಲ್ಲಿ ಹಾಗೂ ವಲಯ ಮಟ್ಟದಲ್ಲಿ ಲೋಕ್ ಅದಾಲತ್ ಕುರಿತು ಸಭೆಗಳನ್ನು ನಡೆಸಲಾಗಿದ್ದು, ಪ್ರಕರಣಗಳನ್ನು ಶೀಘ್ರ ಇತ್ಯರ್ಥಕ್ಕೆ ಸಹಕರಿಸುವಂತೆ ಬ್ಯಾಂಕ್ ಮತ್ತು ವಿಮಾ ಕಂಪನಿಗಳಿಗೆ ಮಾಹಿತಿ ನೀಡಲಾಗಿದೆ ಹಾಗೂ 90 ದಿನಗಳ ಕಾಲ ಮೀಡಿಯೇಶನ್ ಡ್ರೈವ್ ಅಭಿಯಾನ ನಡೆಯುತ್ತಿದ್ದು, ಸಂಧಾನದ ಮುಖಾಂತರ ಹೆಚ್ಚು ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಪ್ರಯತ್ನ ಮಾಡಲಾಗುತ್ತಿದೆ. ಸಾರ್ವಜನಿಕರು ಲೋಕ್ ಅದಾಲತ್ ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ರಾಜಿಯಾಗಬಲ್ಲ ಪ್ರಕರಣಗಳನ್ನು ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಬಗೆಹರಿಸಿಕೊಳ್ಳುವ ಮೂಲಕ ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರದಿಂದ "ಸಾಥಿ" ಎಂಬ ಅಭಿಯಾನ ನಡೆಸಲಾಗುತ್ತಿದ್ದು, ಪರಿತ್ಯಕ್ತ ಮಕ್ಕಳಿಗೆ ಗುರುತಿನ ಚೀಟಿ / ಆಧಾರ ಒದಗಿಸುವ ಕಾರ್ಯ ನಡೆಸಲಾಗುತ್ತಿದೆ. ಈಗಾಗಲೇ ಜಿಲ್ಲೆಯಲ್ಲಿ ಸರ್ವೆ ಕಾರ್ಯ ನಡೆದಿದ್ದು, ಯಾವುದೇ ಮಗುವು ಗುರುತಿಲ್ಲದೆ ಉಳಿಯಬಾರದು ಹಾಗೂ ಆ ಮಗುವಿಗೆ ಎಲ್ಲಾ ರೀತಿಯ ಮೂಲಭೂತ ಸೌಕರ್ಯ ಒದಗಿಸಿಕೊಡಲು ಕ್ರಮ ಕೈಗೊಳ್ಳಲಾಗಿದೆ ಎಂದರು.

****

## ಸಮಾಜದ ಸ್ವಾಸ್ಥವನ್ನು ಕಾಪಾಡುವಲ್ಲಿ ವೈದ್ಯರ ಪಾತ್ರವು ಅತ್ಯಂತ ಮಹತ್ವವಾದುದು-ಸುನೀಲ ಪರಿಮಳ



ಇಂಡಿ : ಸಮಾಜದ ಸ್ವಾಸ್ಥವನ್ನು ಕಾಪಾಡುವಲ್ಲಿ ವೈದ್ಯರ ಪಾತ್ರವು ಅತ್ಯಂತ ಮಹತ್ವವಾದುದು. ರೋಗಿಗಳ ರೋಗ ನಿವಾರಣೆಗೆಂದೇ ವೈದ್ಯರು ತಮ್ಮ ಜೀವನವನ್ನೇ ಸಮರ್ಪಿಸಿ ಕೊಳ್ಳುತ್ತಾರೆ. ವೈದ್ಯರು ರೋಗಿಗಳು ಶೀಘ್ರಗತಿಯಲ್ಲಿ ಗುಣಮುಖರಾಗಲಿ ಅವರ ಆರೋಗ್ಯ ಸುಸ್ಥಿತಿಯಲ್ಲಿರಲಿ ತನ್ಮೂಲಕ ಸಾಮಾಜಿಕ ಜೀವನ ಗುಣಮೌಲ್ಯವು ಉತ್ತಮಗೊಳ್ಳಲಿ ಶ್ರಮಿಸುತ್ತಾರೆ ಎಂದು ಭಾರತೀಯ ಸ್ಟೇಟ್ ಬ್ಯಾಂಕ ಆಫ್ ಇಂಡಿಯಾ ಮುಖ್ಯ ಪ್ರಬಂಧಕ ಸುನೀಲ ಪರಿಮಳ ಹೇಳಿದರು.


ಪಟ್ಟಣದ ಭಾರತೀಯ ಸ್ಟೇಟ್ ಬ್ಯಾಂಕ ಆವರಣದಲ್ಲಿ ಬ್ಯಾಂಕಿನ 70 ನೆಯ ವರ್ಷದ ದಿನಾಚರಣೆ ನಿಮಿತ್ಯ ಮತ್ತು ವೈದ್ಯ ದಿನಾಚರಣೆ ನಿಮಿತ್ಯ ವೈದ್ಯರಿಗೆ ಸನ್ಮಾನಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ವೈದ್ಯೋ ನಾರಾಯಣ ಹರಿ ಎಂದು ವೈದ್ಯರನ್ನು ಪೂಜಿಸಲಾಗುತ್ತಿದೆ. ಆಧುನಿಕತೆ ಬೆಳೆದಂತೆ ಅನೇಕ ರೋಗಗಳು ಹುಟ್ಟಿಕೊಳ್ಳುತ್ತವೆ. ನಿತ್ಯ ರೋಗಿಗಳ ಸೇವೆಯ ಕಾಯಕದಲ್ಲಿ ತೊಡಗಿರುವ ವೈದ್ಯರ ಸೇವೆ ನಿತ್ಯ ಸ್ಮರಣೀಯ ಎಂದರು. ಭಾರತೀಯ ಸ್ಟೇಟ್ ಬ್ಯಾಂಕು ಎಲ್ಲ ರೀತಿಯ ಸಾಲ ನಿಡುತ್ತಿದ್ದು ರೈತರಿಗೆ, ನೌಕರಸ್ಥರಿಗೆ ಮನೆ ಕಟ್ಟಲು, ಬಂಗಾರದ ಮೇಲೆ , ಶಿಕ್ಷಣಕ್ಕೆ ಸೇರಿದಂತೆ ಎಲ್ಲ ರೀತಿಯ ಸಾಲ ನೀಡುವಲ್ಲಿ ಮುಂಚುಣಿಯಲ್ಲಿದೆ ಎಂದರು.

ವೈದ್ಯರಾದ ಡಾ॥ ಅನೀಲ ವಾಲಿ, ಪರಮಾನಂದ ಬಿರಾದಾರ, ಪ್ರವೀಣ ಗಜಾಕೋಶ,ಡಾ॥ ಕದಮ್, ಡಾ॥ ವಿಮಲ ಕೋಳೆಕರ ಮತ್ತು ಕಿರಣ ಗಜಾಕೋಶ ಇವರನ್ನು ಸನ್ಮಾನಿಸಲಾಯಿತು.

ಬ್ಯಾಂಕಿನ ಆನಂದ ಮ್ಯಾಕೇರಿ, ಪ್ರಕಾಶ ಗುಜ್ಜಲಕರ, ಸತೀಶ ಬಿ, ಅಜಯ ಯರಮತ್ತು. ಶ್ರೀಮತಿ ಚೇತನಾ ಸದ್ಲಾಪುರ, ಆದರ್ಶ ಸಾಲಿಮಠ, ರವಿ ಪಾಟೀಲ, ಅಕ್ಷಯ ಹಾದಿಮನಿ ಮತ್ತಿತರಿದ್ದರು

## ವಚನ ಸಾಹಿತ್ಯವನ್ನು ಉಳಿಸಿ ಬೆಳೆಸಬೇಕಾಗಿದೆ




ರಬಕವಿ–ಬನಹಟ್ಟಿ,ಜೂ2: ಇಂದಿನ ದಿನಗಳಲ್ಲಿ ವಚನ ಸಾಹಿತ್ಯವನ್ನು ಉಳಿಸಿ ಬೆಳೆಸಬೇಕಾಗಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ತಮ್ಮ ಮಕ್ಕಳಿಗೆ ಶರಣರ ವಚನಗಳನ್ನು ಕಲಿಸಬೇಕು. ಇದುವೇ ನಾವು ಡಾ. ಹಳಕಟ್ಟಿಯವರಿಗೆ ಸಲ್ಲಿಸುವ ಗೌರವ ಎಂದು ತಹಶೀಲ್ದಾರ ಗಿರೀಶ ಸ್ವಾದಿ ತಿಳಿಸಿದರು.

ಬುಧವಾರ ರಬಕವಿ–ಬನಹಟ್ಟಿ ತಹಶೀಲ್ದಾರ್ ಕಾರ್ಯಾಲಯದಲ್ಲಿ ನಡೆದ ವಚನ ಸಂರಕ್ಷಣಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಾತನಾಡಿದರು. ಹಿರಿಯ ಸಾಹಿತಿ ಸಿದ್ಧರಾಜ ಪೂಜಾರಿ ಮಾತನಾಡಿ, ಕನ್ನಡ ಸಾರಸ್ವತ ಲೋಕದಲ್ಲಿ ವಚನ ಚಳುವಳಿಗೆ ಮಹತ್ತರ ಸ್ಥಾನವಿದೆ. ಕಲ್ಯಾಣ ಕ್ರಾಂತಿಯ ನಂತರ ಎಲ್ಲ ಶರಣರು ಚದುರಿ ಹೋದರು. ಉಳವಿ ಕ್ಷೇತ್ರ ವಚನಗಳ ರಕ್ಷಣಾ ಕೇಂದ್ರವಾಯಿತು. ಇಪ್ಪತ್ತನೆಯ ಶತಮಾನದಲ್ಲಿ ನಶಸಿ ಹೋಗಬಹುದಾಗಿದ್ದ ಈ ವಚನಗಳನ್ನು ಅಪಾರ ಕಷ್ಟ ಪಟ್ಟು ಸಂಗ್ರಹಿಸಿ ಮಹಾನ್ ಕಾರ್ಯ ಮಾಡಿದವರು ಹಳಕಟ್ಟಿಯವರು. ಒಂದು ವಿಶ್ವ ವಿದ್ಯಾಲಯದವರು ಮಾಡುವ ಕಾರ್ಯವನ್ನು ಡಾ.ಹಳಕಟ್ಟಿಯವರು ಅಪಾರ ಪರಿಶ್ರಮದಿಂದ ಮಾಡಿದ್ದಾರೆ ಎಂದು ತಿಳಿಸಿದರು.

ಶಿವಾನಂದ ಬಾಗಲಕೋಟಮಠ, ಬಿ.ಎಂ. ಹಳೇಮನಿ, ಶಿರಸ್ತೆದಾರರಾದ ಎಸ್.ಎಂ. ಕೂಗಾಟೆ, ಆರ್. ಎಸ್. ಸಾತಿಹಾಳ, ಪ್ರಕಾಶ ಮಠಪತಿ, ಸದಾಶಿವ ಕುಂಬಾರ, ಚೇತನ ಭಜಂತ್ರಿ, ಪ್ರಕಾಶ ವಂದಾಲ, ರಾಕೇಶ ಕೊನಸಿರಸಗೆ, ಸಂಗಮೇಶ ಸಜ್ಜನ, ದೀಪಾ ಮೇತ್ರಿ ಸೇರಿದಂತೆ ಅನೇಕರು ಇದ್ದರು.

## ವೈದ್ಯರ, ಪತ್ರಿಕೆ ಮತ್ತು ಲೆಕ್ಕಪರಿಶೋಧರ ಸೇವೆ ಅಮೂಲ್ಯವಾದುದ್ದು




ರಬಕವಿ–ಬನಹಟ್ಟಿ,ಜೂ1: ಇಂದಿನ ದಿನಗಳಲ್ಲಿ ವೈದ್ಯರ, ಪತ್ರಿಕೆಗಳ ಮತ್ತು ಲೆಕ್ಕ ಪರಿಶೋಧರ ಸೇವೆ ಅಮೂಲ್ಯವಾದುದು. ಈ ಮೂವರು ಇಂದು ಸಮಾಜದ ಪ್ರಮುಖ ಭಾಗಗಳಾಗಿವೆಯೆಂದು ರಬಕವಿ–ಬನಹಟ್ಟಿ ಕಾನಿಪ ಸಂಘದ ಅಧ್ಯಕ್ಷ ವಿಶ್ವಜ ಕಾಡದೇವರ ತಿಳಿಸಿದರು.

ಅವರು ಮಂಗಳವಾರ ಇಲ್ಲಿನ ಪದ್ಮಾವತಿ ಅಂತರರಾಷ್ಟ್ರೀಯ ಶಾಲೆಯಲ್ಲಿ ನಡೆದ ಪತ್ರಿಕಾ, ವೈದ್ಯರ ಮತ್ತು ಲೆಕ್ಕ ಪರಿಶೋಧರ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಮಾತನಾಡಿದರು.

ವೈದ್ಯರು ತಮ್ಮ ವೃತ್ತಿಯ ಮೂಲಕ ಜನರ ಆರೋಗ್ಯವನ್ನು ಕಾಪಾಡಿದರೆ, ಲೆಕ್ಕ ಪರಿಶೋಧಕರು ದೇಶದ ಆರ್ಥಿಕ ಪರಿಸ್ಥಿತಿ ನಿರ್ಹಹಣೆಯ ಮಹತ್ವದ ಜವಾಬ್ದಾರಿಯನ್ನು ಹೊಂದಿದ್ದಾರೆ. ಶಾಸಕಾಂಗ,ಕಾರ್ಯಾಂಗ ಮತ್ತು ನ್ಯಾಯಾಂಗ ಸಂವಿಧಾನದ ಮೂರು ಅಂಗಗಳಾದರೆ ಪತ್ರಿಕಾ ಅಂಗ ನಾಲ್ಕನೆಯ ಅಂಗವಾಗಿದೆ. ಸಾಮಾಜದ ಅಂಕು ಡೊಂಕುಗಳನ್ನು ತಿದ್ದುವಲ್ಲಿ ಮತ್ತು ಕಾರ್ಯಾಂಗ ಮತ್ತು ಶಾಸಕಾಂಗದ ಕನ್ನಡಿಯಾಗಿ ಪತ್ರಿಕೆಗಳು ಕಾರ್ಯ ಮಾಡುತ್ತವೆ ಎಂದು ಕಾಡದೇವರ ತಿಳಿಸಿದರು.

ಪ್ರಾಚಾರ್ಯ ಬವವರಾಜ ಕಲಾದಗಿ ಮಾತನಾಡಿ, ವೈದ್ಯರನ್ನು,ಲೆಕ್ಕ ಪರಿಶೋಧಕರನ್ನು ಮತ್ತು ಪತ್ರಕರ್ತರನ್ನು ನಮ್ಮ ವಿದ್ಯಾರ್ಥಿಗಳಿಗೆ ಪರಿಚಯಿಸುವುದರ ಜೊತೆಗೆ ಅವರು ಸಲ್ಲಿಸುತ್ತಿರುವ ಸೇವೆ ಮಹತ್ವನ್ನು ತಿಳಿಸುವುದು ದಿನಾಚರಣೆಯ ಉದ್ದೇಶವಾಗಿದೆ ಎಂದರು.

ಲೆಕ್ಕ ಪರಿಶೋಧಕ ಮಹೇಂದ್ರ ಹೊರಗಿನಮನಿ ಕಾರ್ಯಕ್ರಮ ಉದ್ಘಾಟಿಸಿದರು. ಆಡಳಿತಾಧಿಕಾರಿ ಭಾರತಿ ತಾಳಿಕೋಟಿ ಅಧ್ಯಕ್ಷತೆ ವಹಿಸಿದ್ದರು.

ವೈದ್ಯರಾದ ಎಂ.ಡಿ.ಪೂಜಾರಿ, ಅಲಗೌಡ ಪಾಟೀಲ, ಅಮತ್ಯಾಗೌಡ ಪಾಟೀಲ, ಸುರೇಶ ಕಲಾಲ, ವಿಜಯ ಮುತ್ತೂರ, ಬಾಹುಬಲಿ ನಾಗನೂರ, ಆರ್.ಎ.ಸಂತಿ, ಎಂ.ಎಂ.ಕಾಲತಿಪ್ಪಿ, ಎಸ್.ಡಿ.ಮಾಳಿ, ಪತ್ರಕರ್ತರಾದ ಬಸಯ್ಯ ವಸ್ತ್ರದ, ಯಶವಂತ ವಾಜಂತ್ರಿ, ಕಿರಣ ಆಳಗಿ, ಬಸವರಾಜ ಪಟ್ಟಣ, ಗಂಗಯ್ಯ ಹಿರೇಮಠ ಮತ್ತು ಶಾಲೆಯ ಶಿಕ್ಷಕ ವೃಂದದವರು ಇದ್ದರು. ಸಮಾರಂಭದಲ್ಲಿ ಮಕ್ಕಳು ಛದ್ಮ ವೇಷಧಾರಿಗಳಾಗಿ ಗಮನ ಸೆಳೆದರು.

## ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಹಳಕಟ್ಟಿಯಂತಹ ಶರಣರು ಕೋಟಿಗೊಬ್ಬರು



ರಬಕವಿ–ಬನಹಟ್ಟಿ,ಜೂ2: ಹನ್ನೆರಡನೆಯ ಶತಮಾನದ ಶರಣರ ವಚನಗಳನ್ನು ಸಂಶೋಧನೆ ಮಾಡಿದ ಡಾ.ಫ.ಗು. ಹಳಕಟ್ಟಿಯಂತವರು ಕೋಟಿಗೊಬ್ಬರು. ಹಳಕಟ್ಟಿಯವರು ನಿರಂತರ ನಿರಂಜನ ಪರಂಜ್ಯೋತಿಯಾಗಿದ್ದರೆಂದು ಹಾರೂಗೇರಿಯ ನಿವೃತ್ತ ಪ್ರಾಚಾರ್ಯ ವಿ.ಎಸ್. ಮಾಳಿ ತಿಳಿಸಿದರು.

ಅವರು ಬುಧವಾರ ಇಲ್ಲಿನ ಭದ್ರನವರ ಕಲ್ಯಾಣ ಮಂಟಪದಲ್ಲಿ ಡಾ.ಹಳಕಟ್ಟಿಯವರ ಅಭಿಮಾನಿ ಬಳದವರು, ವಚನ ಸಂರಕ್ಷಣಾ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡ ನಡೆದ ಮಹಾಶರಣರು ಕೃತಿಯನ್ನು ಲೋಕಾರ್ಪಣೆಯ ಸಂದರ್ಭದಲ್ಲಿ ಕೃತಿ ಕುರಿತು ಮಾತನಾಡಿದರು.

ಬಸವಣ್ಣ ಹಾಗೂ ಶರಣರಿಂದಾಗಿ ಹನ್ನೆರಡನೆಯ ಶತಮಾನದ ಎಲ್ಲ ದಾರಿಗಳು ಕಲ್ಯಾಣವನ್ನೇ ಕೂಡುತ್ತಿದ್ದವು. ಒಡೆದು ಹೋಗಿದ್ದ ಹೊಸ ಕಲ್ಯಾಣವನ್ನು ನಿರ್ಮಾಣ ಮಾಡಿದವರು ಡಾ. ಹಳಕಟ್ಟಿಯವರು. ಹಳಕಟ್ಟಿಯವರನ್ನು ವಚನ ಪಿತಾಮಹರನ್ನಾಗಿ ಮಾಡಿದ್ದು ಬನಹಟ್ಟಿ. ಅವರ ಜಯಂತ್ಯುತ್ಸವದ ಸಂದರ್ಭದಲ್ಲಿ ಅವರ ಅಭಿಮಾನಿ ಬಳಗದವರು ಐವರು ಶರಣರ ಚರಿತ್ರೆಗಳನ್ನು ಒಳಗೊಂಡ ಮಹಾಶರಣರು ಕೃತಿಯನ್ನು ಬಿಡುಗಡೆ ಮಾಡುತ್ತಿರುವುದು ಸ್ತುತ್ಯ ಕಾರ್ಯವಾಗಿದೆಯೆಂದು ವಿ.ಎಸ್.ಮಾಳಿ ತಿಳಿಸಿದರು.

ಗದಗ ಜಿಲ್ಲೆಯ ನಿವೃತ್ತ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ. ಬಿ. ಸಂಕದ ಮಾತನಾಡಿ, ಶರಣರು ಸಮಾಜ ಮತ್ತು ಮಾನವ ಕಲ್ಯಾಣವನ್ನು ಉದ್ಧಾರಕ್ಕಾಗಿ ಬದುಕಿದವರು. ಶರಣರ ನಡೆ ನುಡಿಗಳು ನಮಗೆ ಆದರ್ಶವಾಗಬೇಕು. ಮುಂದಿನ ಜನಾಂಗಕ್ಕೆ ಶರಣ ಸಾಹಿತ್ಯವನ್ನು ಪರಿಚಯಿಸುವ ಮಹತ್ತರ ಜವಾಬ್ದಾರಿ ನಮ್ಮೆಲ್ಲರ ಮೇಲಿದೆಯೆಂದರು.

ರಬಕವಿಯ ಗುರುಸಿದ್ಧೇಶ್ವರ ಸ್ವಾಮೀಜಿ ಮಾತನಾಡಿ, ಶರಣರ ವಚನಗಳು ಹಾಗೂ ವಿಚಾರಗಳು ಪ್ರತಿಯೊಬ್ಬರ ಮನೆ ಮನೆಗೆ ತಲುಪಬೇಕು. ವಚನಗಳ ಮೂಲಕ ಶರಣರ ವಚನಗಳನ್ನು ಅರಿತುಕೊಳ್ಳಬೇಕು. ಪ್ರತಿಯೊಬ್ಬರು ಗ್ರಂಥಗಳನ್ನು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮರೇಗುದ್ದಿ ಅಡವಿಸಿದ್ಧೇಶ್ವರ ಮಠದ ನಿರುಪಾಧೀಶ್ವರ ಸ್ವಾಮೀಜಿ, ಬನಹಟ್ಟಿಯ ಹಿರೇಮಠದ ಸ್ವಾಮೀಜಿ, ಹಳಕಟ್ಟಿ ಗೆಳೆಯರ ಬಳಗದ ಸಂಚಾಲಕ ಸುರೇಶ ಕೋಲಾರ, ವೈ.ಬಿ.ಕೊರಡೂರ ಮಾತನಾಡಿದರು.

ಬಸವರಾಜ ಭದ್ರನವರ ಅಧ್ಯಕ್ಷತೆ ವಹಿಸಿದ್ದರು. ಶ್ರೀಶೈಲ ಧಬಾಡಿ, ಶಂಕರ ಜುಂಜಪ್ಪನವರ, ಭೀಮಶಿ ಮಗದುಮ್, ಬಸವಂತ ಜಾಡಗೌಡ, ವೀರೂಪಾಕ್ಷಪ್ಪ ಕೊಕಟನೂರ, ಸಿದ್ದನಗೌಡ ಪಾಟೀಲ, ಜಯವಂತ ಕಾಡದೇವರ, ಜಿ.ಎಸ್.ವಡಗಾವಿ, ಮಲ್ಲೇಶಪ್ಪ ಕುಚನೂರ, ಮಲ್ಲಣ್ಣ ಕಕಮರಿ, ಮಹಾದೇವ ಚರ್ಕಿ, ಶಿವಕುಮಾರ ಜುಂಜಪ್ಪನವರ, ಶೈಲಜಾ ನುಚ್ಚಿ, ಮಹಾನಂದ ಕುಳ್ಳಿ, ಪ್ರಭಾವತಿ ಸುಟ್ಟಟ್ಟಿ ಸೇರಿದಂತೆ ಅನೇಕರಿದ್ದರು.

## ಪಂಚ ಗ್ಯಾರಂಟಿ ಮೆಚ್ಚುಗೆಗೆ ಕಾಂಗ್ರೆಸ್ ಸೇರ್ಪಡೆ



ರಬಕವಿ–ಬನಹಟ್ಟಿ,ಜೂ1: ತಾಲೂಕಿನ ಕೆಲವು ಬಿಜೆಪಿ ಪ್ರಮುಖರು ಕಾಂಗ್ರೆಸ್ ಸೇರಿದ್ದು, ತೇರದಾಳ ಕ್ಷೇತ್ರದ ಕಾಂಗ್ರೆಸ್ ಮುಖಂಡ ಸಿದ್ದು ಕೊಣ್ಣೂರ ಅವರನ್ನು ಪಕ್ಷಕ್ಕೆ ಸೇರ್ಪಡೆಗೊಳಿಸಿದರು.

ಸಿದ್ದು ಕೊಣ್ಣೂರ ಮಾತನಾಡಿ, ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಯು ಕಾಂಗ್ರೆಸ್ ನಡೆದಂತೆ ನುಡಿಯುವಲ್ಲಿ ಸಾಕ್ಷಿಯಾಗಿದ್ದು, ಕಟ್ಟಕಡೆಯ ಜನತೆ ಇವುಗಳ ಲಾಭ ಪಡೆಯುವ ಮೂಲಕ ರಾಮರಾಜ್ಯಕ್ಕೆ ಸಿದ್ರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಕಾರಣವಾಗಿದೆ ಎಂದರು.

ಬಿಡಿಸಿಸಿ ಬ್ಯಾಂಕ್ ಮಾಜಿ ನಿರ್ದೇಶಕ ಭೀಮಶಿ ಮಗದುಮ್ ಮಾತನಾಡಿ, ಬಿಜೆಪಿ ತೊರೆದು ಹಲವಾರು ಮುಖಂಡರು ಕಾಂಗ್ರೆಸ್ ಸೇರ್ಪಡೆಗೊಂಡಿದ್ದು, ಇನ್ನಷ್ಟು ಕಾರ್ಯಕರ್ತರು ಕಾಂಗ್ರೆಸ್ ತೆಕ್ಕೆಗೆ ಬರಲಿದ್ದಾರೆ. ಒಟ್ಟಾರೆ ತೇರದಾಳ ಕ್ಷೇತ್ರದಲ್ಲಿ ಕೈ ಬಲಪಡಿಸುವ ಕಾರ್ಯ ಸಿದ್ದು ಕೊಣ್ಣೂರ ನೇತೃತ್ವದಲ್ಲಿ ಜೋರಾಗಿದೆ ಎಂದರು.

ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ರಾಜು ಭದ್ರನ್ನವರ ಮಾತನಾಡಿ, ಕ್ಷೇತ್ರದಲ್ಲಿ ಪಕ್ಷ ಚಟುವಟಿಕೆಯಲ್ಲಿ ಕಾರ್ಯಕರ್ತರು ಅತ್ಯಂತ ಹುಮ್ಮಸ್ಸಿನಿಂದ ಇದ್ದು, ಸರ್ಕಾರದ ಪಂಚ ಗ್ಯಾರಂಟಿಗಳ ಭಾರಿ ಯಶಸ್ವಿಯಿಂದ ಜನತೆಯೇ ಪಕ್ಷಕ್ಕೆ ಬೆನ್ನು ತಟ್ಟುವ ಕಾರ್ಯ ನಡೆಯುತ್ತಿದೆ ಎಂದರು.

ಅಸ್ಲಂ ಹಳಿಂಗಳಿ, ಖ್ವಾಜಾ ಜಕಾತಿ, ಆಸ್ಪಾಕ ಇನಾಮದಾರ, ಕರಂ ಬಿಜಾಪೂರ, ಮಲಿಕ್ ಮಹಾಲಿಂಗಪೂರ, ದಾದಾಫೀರ ಮಮಟೂರ, ಫಿರೋಜ ಮುಜಾವರ ನೇತೃತ್ವದಲ್ಲಿ ಹಲವಾರು ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್‌ಗೆ ಸೇರ್ಪಡೆಗೊಂಡರು.

ಇದೇ ಸಂದರ್ಭ ಬಸವರಾಜ ಕೊಕಟನೂರ, ಶೇಖರ ಹಕ್ಕಲದಡ್ಡಿ, ಯೂಸಫ್ ಮಹಾಲಿಂಗಪೂರ, ಅಬೂಬಕರ ಮಂಟೂರ, ಅಸ್ಲಂ ರಾಮದುರ್ಗ, ಫಯಾಜ ಮಹಾಲಿಂಗಪೂರ, ಸೈಯದ್ ಬಾರಿಗಡ್ಡಿ, ಇರ್ಷಾದ ಮೋಮಿನ್, ಹುಫೇಜಾ ಮುಲ್ಲಾ ಸೇರಿದಂತೆ ಅನೇಕರಿದ್ದರು.

## ಶಿಕ್ಷಣ ಕೇವಲ ಅಂಕ ಗಳಿಕೆ ಮಾರ್ಗವಲ್ಲ; ಅದು ವ್ಯಕ್ತಿತ್ವದ ಕೈಗನ್ನಡಿಯಾಗಿದೆ: ತರಬೇತಿದಾರ ಮಹೇಶ ಮಾಶಾಳ




ಧಾರವಾಡ : ಶಿಕ್ಷಣವು ಮನುಷ್ಯನಲ್ಲಿ ಅಡಗಿರುವ ಶಕ್ತಿಯನ್ನು ಬಡಿದೆಬ್ಬಿಸುತ್ತದೆ. ಅದು ಕೇವಲ ಅಂಕ ಗಳಿಕೆಯ ಮಾರ್ಗವಲ್ಲ ಬದಲಾಗಿ ವ್ಯಕ್ತಿತ್ವದ ಕೈಗನ್ನಡಿಯಾಗಿದೆ. ಶಿಕ್ಷಕರು ವಿದ್ಯಾಥಿಗಳನ್ನು ಪ್ರೇರಣಾದಾಯಕವಾಗ ಮಾರ್ಗದರ್ಶನ ಮಾಡುವುದು ಅವಶ್ಯಕ ಎಂದು ಮೈಂಡ್‌ಸೆಟ್ ತರಬೇತುದಾರ ಹಾಗೂ ಚಿಂತಕ ಮಹೇಶ ಮಾಶಾಳ ಹೇಳಿದರು.

ಅವರು, ನಗರದ ಜೆಎಸೆಸ್ ಸನ್ನಿಧಿ ಸಭಾಂಗಣದಲ್ಲಿ ಇಂದು (ಜು.01) ಬೆಳಿಗ್ಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ನಡೆದ ಬದಲಾವಣೆಯ ಶಿಕ್ಷಣ; ಭವಿಷ್ಯದ ನಿರ್ಮಾಣ 2025–26 ರ ಜಿಲ್ಲೆಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯಗುರುಗಳು ಹಾಗೂ ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣೆ ಸಮಿತಿ ಆಡಳಿತ ಮಂಡಳಿ ಅಧ್ಯಕ್ಷ, ಕಾರ್ಯದರ್ಶಿಗಳಿಗೆ ಒಂದು ದಿನದ ಶೈಕ್ಷಣಿಕ ಕಾರ್ಯಾಗಾರದಲ್ಲಿ ಪಾಲ್ಗೊಂಡು ಮಾತನಾಡಿದರು.

ಪ್ರಸ್ತುತವಾಗಿ ಮಾನವೀಯ ಮೌಲ್ಯಗಳು ಕಡಿಮೆಯಾಗಿದೆ. ನಾವು ಜವಾಬ್ದಾರಿ ತೆಗೆದುಕೊಂಡು ಕೆಲಸ ಮಾಡುವ ಮನೋಭಾವ ಕಡಿಮೆಯಾಗುತ್ತಿದೆ. ಶಿಕ್ಷಕರಾದವರು ಜವಾಬ್ದಾರಿಯುತ ಸ್ಥಾನವನ್ನು ನಿರ್ವಹಣೆ ಮಾಡುವ ಸವಾಲು ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ತಲೆಯಲ್ಲಿ ಕಲಿಸುವ ಹುಚ್ಚು ಮತ್ತು ಎದೆಯಲ್ಲಿ ಸಾಧನೆಯ ಕಿಚ್ಚಿಟ್ಟುಕೊಂಡು ಪ್ರಾಮಾಣಿಕವಾಗಿ ಮುನ್ನುಗ್ಗಿದರೇ ಯಶಸ್ಸುಗಳಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಪ್ರತಿಯೊಬ್ಬರಿಗೂ ಕಣ್ಣೀರು, ಬಡತನ, ಅವಮಾನ ಮತ್ತು ಸೋಲು ಎಂಬುದು ಜೀವನದ ಪಾಠ ಕಲಿಸುತ್ತವೆ. ಮುಂದೆ ಒಂದು ದಿನ ಸಾಧನೆಗೆ ಪೂರಕವಾಗುತ್ತದೆ. ಗುರುಕುಲ ಶಿಕ್ಷಣ ಪದ್ಧತಿಯಲ್ಲಿರುವ ಉತ್ತಮ ಆದರ್ಶ ಮೌಲ್ಯಗಳನ್ನು ಶಿಕ್ಷಣ ವ್ಯವಸ್ಥೆಯಲ್ಲಿ ಅಳವಡಿಸಿಕೊಳ್ಳಬೇಕು. ಮನುಷ್ಯನ ಆಲೋಚನೆ ಅನುಗುಣವಾಗಿ ವ್ಯಕ್ತಿ, ವ್ಯಕ್ತಿತ್ವ ಮಾರ್ಪಾಡು ಆಗಿರುತ್ತದೆ. ಅದನ್ನು ಸರಿಯಾಗಿ ಮಾರ್ಗದಲ್ಲಿ ತೆಗೆದುಕೊಂಡು ಹೋಗವ ಅವಶ್ಯಕತೆ ಇದೆ. ಗುರುವಿನ ಮೌಲ್ಯಗಳು ಸಮಾಜದಲ್ಲಿ ಕಡಿಮೆಯಾಗದಂತೆ ಎಚ್ಚರ ವಹಿಸಿ ವಿದ್ಯಾರ್ಥಿಗಳು ಸರಿಯಾದ ಮಾರ್ಗದಲ್ಲಿ ನಡೆಯುವಂತಹ ಶಿಕ್ಷಣವನ್ನು ನೀಡಬೇಕು ಎಂದು ತಿಳಿಸಿದರು.

ಶಾಲೆಯಲ್ಲಿ ಮಕ್ಕಳಿಗೆ ಪ್ರೌಢಾವಸ್ಥೆಯ ಬಂದ ನಂತರ ಅವರ ದೇಹದಲ್ಲಿ ಆಗುವ ಬದಲಾವಣೆಗಳ ಬಗ್ಗೆ ತಿಳಿಸುವುದು ಶಿಕ್ಷಕರ ಕರ್ತವ್ಯವಾಗಿದೆ. ಇದರಿಂದಾಗಿ ಅವರು ಮಾನಸಿಕ ಒತ್ತಡದಿಂದ ಹೊರ ಬರುತ್ತಾರೆ ಎಂದು ಹೇಳಿದರು. ಮಕ್ಕಳ ಬಗ್ಗೆ ಅವರ ಓದಿನ ಬಗ್ಗೆ ಪೋಷಕರು ಆಸಕ್ತಿ ವಹಿಸಬೇಕು. ಅವರು ಮಾಡುವ ಕೆಲಸದ ಮೇಲೆ ಗಮನಹರಿಸಿ. ಒತ್ತಡಗಳಿಂದ ಮುಕ್ತವಾಗಿಡಲು ಪ್ರಯತ್ನಿಸಬೇಕು. ಈಗಿನ ಸಮಾಜದಲ್ಲಿ ಮೊಬೈಲ್ ಬಳಕೆಯಿಂದ ಮಕ್ಕಳು ಒತ್ತಡಕೊಳ್ಳಲಾಗುತ್ತಿದ್ದಾರೆ. ಆದ್ದರಿಂದ ಮಕ್ಕಳ ಆರೋಗ್ಯದ ಮೇಲೆ, ಮಕ್ಕಳ ಮೆದುಳಿನ ಮೇಲೆ, ಮನಸ್ಸಿನ ಮೇಲೆ ಪ್ರಭಾವ ಬೀರುತ್ತಿದೆ. ಇದರಿಂದಾಗಿ ಮೊಬೈಲ್ ಬಳಕೆ ಆಗದೆ ಇರುವ ಹಾಗೆ ಎಚ್ಚರ ವಹಿಸಿ ಎಂದು ತಿಳಿಸಿದರು. ಮಕ್ಕಳೊಂದಿಗೆ ಶಾಲೆಯಲ್ಲಿ ಶಿಕ್ಷಕರು ಮತ್ತು ಮನೆಯಲ್ಲಿ ಪೋಷಕರು ಬೆರೆಯುವುದರಿಂದ ಅವರು ಮುಕ್ತವಾಗಿ ಮಾತನಾಡುತ್ತಾರೆ. ಅವರ ಸಮಸ್ಯೆಯ ಬಗ್ಗೆ ತಿಳಿಸುತ್ತಾರೆ. ಆದ್ದರಿಂದ ಎಷ್ಟೋ ಸಮಸ್ಯೆಗಳು ಬಗೆಹರಿಯುತ್ತವೆ ಎಂದು ಹೇಳಿದರು.

ಶಾಲೆಯಲ್ಲಿ ಮಕ್ಕಳಿಗೆ ಮೆದುಳಿನ ಬಗ್ಗೆ, ಮೆದುಳು ಮಾಡುವ ಕೆಲಸದ ಬಗ್ಗೆ ಪಾಠದ ಮೂಲಕ ತಿಳಿಸಬೇಕು. ಅವರ ಮನಸ್ಸು ಹೇಗೆ ಶಕ್ತಿ ಕೆಲಸ ಮಾಡುತ್ತದೆ ಎಂದು ತಿಳಿದರೆ ಅವರು ಜೀವನದಲ್ಲಿ ಮುಂದೆ ಬರಲು ಅನುಕೂಲವಾಗುತ್ತದೆ.

ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ಉಮೇಶ ಬೊಮ್ಮಕ್ಕನವರ ಶಾಲಾ ಅಭಿವೃದ್ಧಿ ಹಾಗೂ ಮೇಲ್ವಿಚಾರಣಾ ಸಮಿತಿ ಜವಾಬ್ದಾರಿ ಹಾಗೂ ಕರ್ತವ್ಯ ಕುರಿತು ಮಾತನಾಡಿ, ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಪ್ರವೇಶ, ಹಾಜರಾತಿ ಮತ್ತು ಪ್ರಾಥಮಿಕ ಶಿಕ್ಷಣವನ್ನು ಪೂರ್ಣಗೊಳಿಸುವ ಸಮರ್ಥನೀಯ ಕಾನೂನು ಚೌಕಟ್ಟನ್ನು ಒದಗಿಸುತ್ತದೆ. ಇದು ಸಮಾನತೆ ಮತ್ತು ತಾರತಮ್ಯದ ತತ್ವಗಳ ಆಧಾರದ ಮೇಲೆ ಸಮಾನ ಗುಣಮಟ್ಟದ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕನ್ನು ಒದಗಿಸುತ್ತದೆ. ಶಿಕ್ಷಣದ ಗುಣಮಟ್ಟವನ್ನು ಸುಧಾರಿಸಲು ಮತ್ತು ಮಕ್ಕಳ ಸಮಗ್ರ ಅಭಿವೃದ್ಧಿಗೆ ಒತ್ತು ನೀಡಲಾಗುತ್ತದೆ. ಶಾಲೆಗಳನ್ನು ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣೆ ಸಮಿತಿಗಳು ತಮ್ಮ ಜವಾಬ್ದಾರಿ ಅಚ್ಚುಕಟ್ಟಾಗಿ ನಿರ್ವಹಿಸಿದರೇ ಮಕ್ಕಳಗೆ ಉತ್ತಮ ಶಿಕ್ಷಣ ನೀಡಬಹುದು. ಇದು ಶಾಲೆಯ ಫಲಿತಾಂಶ ಹಾಗೂ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ಉತ್ತಮ ಶಿಕ್ಷಣವನ್ನು ಶಿಕ್ಷಕರು ಮಕ್ಕಳಿಗೆ ನೀಡಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.

ಶಿಕ್ಷಣ ಹಕ್ಕು ಕಾಯ್ದೆ–2009ರ ಅಡಿಯಲ್ಲಿ, ಪ್ರತಿಯೊಂದು ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಎಸ್‌ಡಿಎಂಸಿ ರಚಿಸುವುದು ಕಡ್ಡಾಯವಾಗಿದೆ. ಇದು ಶಾಲೆ, ಪೋಷಕರು ಮತ್ತು ಸ್ಥಳೀಯ ಸಮುದಾಯದ ನಡುವಿನ ಒಂದು ಪ್ರಮುಖ ಕೊಂಡಿಯಾಗಿ ಕೆಲಸ ಮಾಡಬೇಕಾಗುತ್ತದೆ ಎಂದು ಹೇಳಿದರು.

ಶಾಲೆ, ಪೋಷಕರು, ಗ್ರಾಮ ಪಂಚಾಯತಿ ಮತ್ತು ಶಿಕ್ಷಣ ಇಲಾಖೆಯ ನಡುವೆ ಒಂದು ಸೇತುವೆಯಾಗಿ ಕಾರ್ಯ ನಿರ್ವಹಿಸುತ್ತದೆ. ಮಕ್ಕಳ ಬಗ್ಗೆ ಮತ್ತು ಅವರ ಹಕ್ಕುಗಳು ಬಗ್ಗೆ ಶಾಲೆಯ ನಿಯಮದ ಬಗ್ಗೆ ಹೇಳಿದರು. ಶಾಲಾ ವ್ಯಾಪ್ತಿಯಲ್ಲಿರುವ 6 ರಿಂದ 14 ವರ್ಷ ವಯಸ್ಸಿನ ಎಲ್ಲಾ ಮಕ್ಕಳನ್ನು ಶಾಲೆಗೆ ದಾಖಲು ಮಾಡುವುದು ಮತ್ತು ಅವರು ಶಾಲೆಗೆ ಹಾಜರಾಗುವಂತೆ ನೋಡಿಕೊಳ್ಳಬೇಕು. ಮತ್ತು 14 ವರ್ಷದ ಒಳಗಿನ ಮಕ್ಕಳು ಬಂದು ಶಾಲೆಗೆ ಹಾಜರಾದರೆ ಅವರ ವಯಸ್ಸನ್ನು ಪರಿಗಣಿಸಿ, ಅವರಿಗೆ ಶಾಲೆಗೆ ಬರಲು ಅನುವು ಮಾಡಿ ಕೊಡಬೇಕು. ಶಾಲಾ ಅಭಿವೃದ್ಧಿ ಹಾಗೂ ಮೇಲ್ವಿಚಾರಣಾ ಸಮಿತಿಯ ಜವಾಬ್ದಾರಿಗಳು ಹಾಗೂ ಕರ್ತವ್ಯಗಳ ಬಗ್ಗೆ ಅವರು ಮಾಹಿತಿ ನೀಡಿದರು. ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಎಸ್.ಎಸ್ ಕೆಳದಿಮಠ ಮಾತನಾಡಿ, ವಿದ್ಯಾರ್ಥಿಗಳ ಉನ್ನತ ಕನಸುಗಳಿಗೆ ಶಿಕ್ಷಕರು ದಾರಿದೀಪವಾಗಿ ಕೆಲಸ ಮಾಡಬೇಕು. ಮಕ್ಕಳ ಉತ್ತಮ ಫಲಿತಾಂಶ ದೇಶದ ಭವಿಷ್ಯ. ಮಕ್ಕಳ ಶೈಕ್ಷಣಿಕ ಗುಣಮಟ್ಟ ಸುಧಾರಿಸಲು ನಾವೆಲ್ಲರೂ ಪ್ರಯತ್ನ ಮಾಡಿ, ಮಿಷನ್ ವಿದ್ಯಾಕಾಶಿ ಯಶಸ್ವಿಗೆ ಪ್ರಯತ್ನಿಸೋಣ ಎಂದು ತಿಳಿಸಿದರು.

ಕಾರ್ಯಕ್ರಮದ ವೇದಿಕೆಯಲ್ಲಿ ಡಯಟ್ ಪ್ರಾಚಾರ್ಯೆ ಜಯಶ್ರೀ ಕಾರ್ಯಕಾರಿ, ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯೋಪಾದ್ಯಯರ ಸಂಘ, ಶಿಕ್ಷಕರ ಸಂಘದ ಪ್ರಮುಖರು ಇದ್ದರು. ಕಾರ್ಯಾಗಾರದಲ್ಲಿ ಜಿಲ್ಲೆಯ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಪ್ರಧಾನ ಗಿರುಗಳು, ಮುಖ್ಯೋಪಾಧ್ಯಾಯರು, ಎಸ್.ಡಿ.ಎಂ.ಸಿ. ಅಧ್ಯಕ್ಷರು ಭಾಗವಹಿಸಿದ್ದರು.

## ಅಕ್ಷರ ವಿದ್ಯಾವಿಹಾರ ಮಾಡರ್ನ್ ಶಾಲೆಯಲ್ಲಿ ವೈದ್ಯರ ದಿನ ಮತ್ತು ಪತ್ರಿಕಾ ದಿನ ಆಚರಣೆ






ಮಹಾಲಿಂಗಪುರ: ಸ್ಥಳೀಯ ಅಕ್ಷರ ವಿದ್ಯಾವಿಹಾರ ಮಾಡರ್ನ್ ಶಾಲೆಯಲ್ಲಿ ಜು.1 ರಂದು ವೈದ್ಯರ ದಿನ ಮತ್ತು ಪತ್ರಿಕಾ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಪೂರ್ವ ಪ್ರಾಥಮಿಕ ವಿಭಾಗದ ವಿದ್ಯಾರ್ಥಿಗಳು ವೈದ್ಯರು ಮತ್ತು ದಾದಿಯರಂತೆ ವೇಷ ಧರಿಸಿ ಪಾತ್ರಾಭಿನಯ ಮಾಡಿದರು.

ವಿದ್ಯಾರ್ಥಿಗಳಿಗೆ ಭಾಷಣ ಸ್ಪರ್ಧೆ, ಪ್ರಬಂಧ ಸ್ಪರ್ಧೆ ಏರ್ಪಡಿಸಲಾಗಿತ್ತು. ಪುಟ್ಟ ಬಾಲಕರು ಕಿರು ನಾಟಕಗಳನ್ನು ಪ್ರದರ್ಶಿಸಿ ಮನೋಜ್ಞ ಅಭಿನಯದ ಮೂಲಕ ವೈದ್ಯರ ತ್ಯಾಗ, ಜವಾಬ್ದಾರಿ, ಪತ್ರಕರ್ತರ ಹೊಣೆಗಾರಿಕೆ, ಮೋಬೈಲ್ ಹಾವಳಿ, ಅಜ್ಞಾನ ಮತ್ತು ಅನಕ್ಷರತೆಯ ದುಷ್ಪರಿಣಾಮ, ಉತ್ತಮ ನಾಗರಿಕರ ಲಕ್ಷಣ ಸೇರಿದಂತೆ ನಾನಾ ಸಂದೇಶಗಳನ್ನು ಸಾರಿದರು. ಪಟ್ಟಣದ ಸ್ತ್ರೀರೋಗತಜ್ಞೆ ಡಾ. ಉಷಾ ಬೆಳಗಲಿ, ಕಾನಿಪ ಅಧ್ಯಕ್ಷ ಮಹೇಶ ಮನ್ನಯ್ಯಮಠ, –ಸಂಸ್ಥೆಯ ಅಧ್ಯಕ್ಷೆ ಡಾ. ತೇಜಶ್ವೀತಾ ಮೇತ್ರಿ, ಕಾರ್ಯದರ್ಶಿ ಡಾ. ವಿನೋದ ಮೇತ್ರಿ, ಅಶ್ವಿನಿ ಬಡಿಗೇರ ಸೇರಿದಂತೆ ಶಿಕ್ಷಕ ಸಿಬ್ಬಂದಿ ಇದ್ದರು.

## ಎನ್.ಆರ್.ಎಲ್.ಎಮ್ ಸಂಜೀವಿನಿ ಸಂಘಗಳು ತಯಾರಿಸಿದ ವಸ್ತು ಪ್ರದರ್ಶನ



ಗೋಕಾಕ: ಗ್ರಾಮ ದೇವತೆ ಜಾತ್ರಾ ನಿಮಿತ್ಯವಾಗಿ ತಾಲೂಕ ಪಂಚಾಯತ ಗೋಕಾಕ ಆಯೋಜಿಸಿದ ಬೆಳಗಾವಿ ಜಿಲ್ಲೆಯ ಎನ್.ಆರ್.ಎಲ್.ಎಮ್ ಸಂಜೀವಿನಿ ಸಂಘಗಳು ತಯಾರಿಸಿದ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳದ ಮಳಿಗೆಗಳನ್ನು ಶಾಸಕ ಹಾಗೂ ಶ್ರೀ ಮಹಾಲಕ್ಷ್ಮೀದೇವಿ ಜಾತ್ರಾ ಕಮೀಟಿಯ ಅಧ್ಯಕ್ಷರಾದ ರಮೇಶ ಜಾರಕಿಹೊಳಿ ಅವರು ಉದ್ಘಾಟಿಸಿದರು. ನಂತರ ಸಂಜೀವಿನಿ ಸಂಘಗಳು ತಯಾರಿಸಿದ ವಸ್ತುಗಳನ್ನು ವೀಕ್ಷಣೆ ಮಾಡಿ ಮಾಹಿತಿ ಪಡೆದು ಖರೀದಿ ಮಾಡುವ ಮೂಲಕ ಪ್ರೋತ್ಸಾಹಿಸಿದರು.

ಈ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯರಾದ ಟಿ ಆರ್ ಕಾಗಲ, ಎಮ್ ಎಲ್ ತೋಳಿನವರ, ತಾಪಂ ಕಾರ್ಯ ನಿರ್ವಾಹಕ ಅಧಿಕಾರಿ ಪಿ ಎಮ್ ಘಸ್ತೆ, ಶಿಶು ಅಭಿವೃದ್ಧಿ ಅಧಿಕಾರಿಗಳಾದ ಡಿ ಎಸ್ ಕುಡ್ಡವಕ್ಕಲಗಿ, ಯಲ್ಲಪ್ಪ ಗದಾಡಿ ವಿವಿಧ ಗ್ರಾಪಂಗಳ ಪಂಚಾಯತ ಅಭಿವೃದ್ಧಿ ಅಧಿಕಾರಗಳು, ತಾಲೂಕ ಪಂಚಾಯತ ಗೋಕಾಕ ಸಿಬ್ಬಂದಿಗಳು, ಎನ್.ಆರ್.ಎಲ್.ಎಮ್ ಗೋಕಾಕ ಸಿಬ್ಬಂದಿಗಳು, ಒಕ್ಕೂಟದ ಸಿಬ್ಬಂದಿಗಳು ಹಾಗೂ ಸಂಘದ ಸದಸ್ಯರು ಉಪಸ್ಥಿತರಿದ್ದರು.

## ದೌರ್ಜನ್ಯತೆಗೆ ತಡೆಗೆ ಜಾಗೃತಿ ಮೂಡಿಸಿ -ಜಿಲ್ಲಾಧಿಕಾರಿ

ಹಾವೇರಿ.: ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳ ಮೇಲಿನ ದೌರ್ಜನ್ಯ ಪ್ರಕರಣಗಳು ಹೆಚ್ಚು ಕಂಡುಬರುವ ಪ್ರದೇಶಗಳ ಜಾಗೃತಿ ಮೂಡಿಸುವ ಮೂಲಕ ಜಿಲ್ಲೆಯಲ್ಲಿ ದೌರ್ಜನ್ಯ ತಡೆಗೆ ಅಗತ್ಯ ಕ್ರಮವಹಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಜನರ ಮೇಲಿನ ದೌರ್ಜನ್ಯ ನಿಯಂತ್ರಣ ಹಾಗೂ ಜಿಲ್ಲಾ ಜಾಗೃತಿ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ಇರುವ ಸರ್ಕಾರದ ಸೌಲಭ್ಯಗಳ ಕುರಿತು ಮಾಹಿತಿ ನೀಡಬೇಕು ಎಂದು ಸೂಚನೆ ನೀಡಿದರು.

ಅಂದಲಗಿ ಗ್ರಾಮ ಪಂಚಾಯತಿಯ ಗಾಂವಠಾಣ ವ್ಯಾಪ್ತಿಯಲ್ಲಿ ಲಭ್ಯವಿರುವ 19 ಎಕರೆ ಪ್ರದೇಶದಲ್ಲಿ ಪರಿಶಿಷ್ಟ ಜಾತಿಯ ನಿವೇಶನ ರಹಿತರಿಗೆ ಕಾನೂನಾತ್ಮಕವಾಗಿ ಹಂಚಿಕೆಗೆ ಕ್ರಮವಹಿಸಬೇಕು. ಕೂಡಲೇ ಕ್ರಿಯಾಯೋಜನೆ ಯೋಜನೆ ತಯಾರಿಸುವಂತೆ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಾಲ್ಕು ಜನರಿಗೆ ನೌಕರಿ: ದೌರ್ಜನ್ಯ ಪ್ರಕರಣಗಳಲ್ಲಿ ಮೃತಪಟ್ಟ 7 ಜನರ ಅವಲಂಬಿತರ ಪೈಕಿ ಈಗಾಗಲೇ ನಾಲ್ಕು ಜನರಿಗೆ ಸರ್ಕಾರಿ ಕೆಲಸ ನೀಡಲಾಗಿದೆ. ಒಂದು ಪ್ರಕರಣ ಬೇರೆ ಜಿಲ್ಲೆಗೆ ವರ್ಗಾವಣೆಯಾಗಿದೆ. ಉಳಿದ ಎರಡು ಪ್ರಕರಣದಲ್ಲಿ ಪತ್ನಿಯರು ಅಪರಾಧಿಗಳಾಗಿದ್ದಾರೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ದೌರ್ಜನ್ಯ ಪ್ರಕರಣಗಳು ಶೂನ್ಯವಾಗಬೇಕು, ದೌರ್ಜನ್ಯ ಪ್ರಕರಣಗಳಲ್ಲಿ ಠಾಣೆಗಳಲ್ಲಿ ಮಧ್ಯವರ್ತಿಗಳಿಗೆ ಅವಕಾಶ ನೀಡಬಾರದು, ಪ್ರಕರಣದ ಸತ್ಯಾಸತ್ಯತೆ ತಿಳಿದುಕೊಳ್ಳಬೇಕು. ಎಸ್.ಸಿ.ಎಸ್.ಪಿ. ಹಾಗೂ ಟಿ.ಎಸ್.ಪಿ. ಯೋಜನೆ ಮೀಸಲಾದ ಅನುದಾನ ಆಯಾ ಸಾಲಿನಲ್ಲೇ ವೆಚ್ಚವಗಬೇಕು ಹಾಗೂ ಅರ್ಹ ಫಲಾನುಭವಿಗಳೀಗೆ ತಲುಬೇಕು. ದೇವಗಿರಿ ಗ್ರಾಮದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳ ಕಾಲೋನಿಯ ಮನೆಗಳಲ್ಲಿ ಸಾರಾಯಿ ಮಾರಾಟವಾಗುತ್ತಿದೆ, ಇದಕ್ಕೆ ಕಡಿವಾಣ ಹಾಕಬೇಕು, ದೇವಗಿರಿ ಗ್ರಾಮದ ವಾಲ್ಮೀಕಿ ಸಮುದಾಯದ ಸ್ಮಶಾನಕ್ಕೆ ತಡೆಗೋಡೆ ನಿರ್ಮಾಣ ಮಾಡಬೇಕು, ಬಾಳಂಬೀಡ ಗ್ರಾಮದಲ್ಲಿ ಗ್ರಾಮ ಪಂಚಾಯತಿ 14-15ನೇ ಹಣಕಾಸು ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳ ಕಾಲೋನಿಯಲ್ಲಿ ಯಾವುದೇ ಕೆಲಸ ಮಾಡುತ್ತಿಲ್ಲ, ಅಲ್ಲಿ ಪಕ್ಕಾಗಟಾರ್, ಹೈಮಾಸ್ಕ ದ್ವೀಪ ಅಳವಡಿಕೆ ಯಾಗಬೇಕು, ಹಾನಗಲ್ ತಾಲೂಕು ಆರೆಲಕ್ಮಾಪೂರ ಗ್ರಾಮದಲ್ಲಿ ಮಹಾತಂಗೇಶ್ವರ ದೇವಸ್ಥಾನಕ್ಕೆ ಸೇರಿದ ಜಾಗದಲ್ಲಿ ಅನ್ಯ ಧರ್ಮಿಯರು ,ಮನೆ ಕಟ್ಟಿಕೊಂಡಿದ್ದಾರೆ, ಅವರನ್ನು ತೆರವುಗೊಳಿಸಬೇಕು, ನೆಗಳೂರು ಗ್ರಾಮದಲ್ಲಿ 350 ದಲಿತರ ಮನೆಗಳಿದ್ದು, ಅವರಿಗೆ ಇ-ಸ್ವತ್ತು ಉತಾರ ಇಲ್ಲ. ಹಾಗಾಗಿ ಅವರಿಗೆ ಇ-ಸ್ವತ್ತು ಉತಾರ ವಿತರಣೆ ಯಾಗಬೇಕು ಎಂದು ನೂತನ ಸಮಿತಿಯ ಅಧಿಕಾರೇತರ ನಾಮನಿರ್ದೇಶಿತ ಸದಸ್ಯರಾದ ಶಿವರಾಜ ಹರಿಜನ, ಸಂಜಯಗಾಂಧಿ, ಬಸವರಾಜ ಹೆಡಿಗ್ಗೊಂಡ, ಎನ್.ಎಂ. ಗಾಳೆಮ್ಮನವರ, ಜಗದೀಶ ಹರಿಜನ ಅವರುಗಳು ಮಾನ್ಯ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿಕೊಂಡರು.

ಈ ಸಭೆಯ ಗಮನಕ್ಕೆ ತರಲಾದ ಎಲ್ಲ ಸಮಸ್ಯೆಗಳನ್ನು ಕಾನೂನಿನ ಚೌಕಟ್ಟಿನಲ್ಲಿ ಆದ್ಯತೆ ಮೇರಗೆ ಬಗೆಹರಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ ಅವರು ಮಾತನಾಡಿ, ಜನವರಿ-2025 ರಿಂದ ಈವರೆಗೆ 43 ಪ್ರಕರಣಗಳು ದಾಖಲಾಗಿದ್ದು, ದೌರ್ಜನ್ಯ ಪ್ರಕರಣಗಳಲ್ಲಿ ಮೃತಪಟ್ಟ 7 ಜನರ ಅವಲಂಬಿತರಿಗೆ ರೂ.1,23,363 ಮೊತ್ತ ಪಿಂಚಣಿ ಮಂಜೂರ ಮಾಡಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ರುಚಿ ಬಿಂದಾಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಂಶುಕುಮಾರ, ಉಪ ವಿಭಾಗಾಧಿಕಾರಿ ಶುಭಂ ಶುಕ್ಲಾ, ಸಮಿತಿಯ ಅಧಿಕಾರೇತರ ನಾಮನಿರ್ದೇಶಿತ ಸದಸ್ಯರಾದ ಅಜ್ಜಪ್ಪ ಗೋಣೆಮ್ಮನವರ, ರಮೇಶ ಕೊರವರ, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕಾ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಇತರರು ಉಪಸ್ಥಿತರಿದ್ದರು.

***



**ರಾಯಬಾಗ :ಜೈನ ಸಮಾಜದವರು ಅತ್ಯಂತ ಶ್ರದ್ಧಾ ಭಕ್ತಿಯಿಂದ ಆಚರಿಸುವ ಚತುರ್ಮಾಸ ಆಚರಣೆಯು ನಾಲ್ಕು ತಿಂಗಳುಗಳ ಕಾಲ ಅನೇಕ ಧಾರ್ಮಿಕ ಕಾರ್ಯಕ್ರಮಗಳನ್ನು ಒಳಗೊಂಡಿರುತ್ತದೆ. ಈ ಬಾರಿ ತಾಲೂಕಿನ ನಸಲಾಪುರ ಗ್ರಾಮದಲ್ಲಿ ಜುಲೈ 13 ರಿಂದ ಚತುರ್ಮಾಸ ಕಾರ್ಯಕ್ರಮಗಳು ಪ್ರಾರಂಭವಾಗಲಿದ್ದು ,ಚಾತುರ್ಮಾಸಚರಣೆಗೆ ಸಮೀಪದ ಮಾಂಜರಿ ಗ್ರಾಮದಲ್ಲಿ ಬಾಲಾಚಾರ್ಯ ಸಿದ್ಧ ಸೇನಾ ಮಹಾರಾಜರಿಗೆ ನಸಲಾಪುರ ಗ್ರಾಮದ ಜೈನ ಶ್ರಾವಕೀಯರು ಆಹ್ವಾನ ನೀಡಿದರು.ಈ ಸಂದರ್ಭದಲ್ಲಿ ಚೌಗೌಡಾ ಪಾಟೀಲ, ವೆಂಕಟೇಶ ಬನವನೆ, ಡಾ. ಸಂಜಯ ಪಾಟೀಲ, ಶರತ ಪಾಟೀಲ, ಪಾರ್ಶ್ವನಾಥ ಪಾಟೀಲ, ಅನ್ನಾಸಾಬ ಪಾಟೀಲ, ನೇಮಗೌಡಾ ಪಾಟೀಲ, ಅಪ್ಪಾಸಾಬ ಪಾಟೀಲ, ಶ್ರೇಣಿಕ ಪಾಟೀಲ, ವಂದನಾ ಪಾಟೀಲ, ಕಸ್ತೂರಿ ಮಗದುಮ್, ಸುಷ್ಮಾ ಪಾಟೀಲ ಸೇರಿದಂತೆ ಅನೇಕ ಜೈನ ಶ್ರಾವಕ ಸಾವಕೀರು ಉಪಸ್ಥಿತರಿದ್ದರು.**

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಶಿರಹಟ್ಟಿ ಬಸ್ ನಿಲ್ದಾಣದ ಪರಿಶೀಲನೆ

## ಸ್ವಚ್ಛತೆಗೆ ಪ್ರಥಮ ಆದ್ಯತೆ ವಹಿಸಿ: ಬಿ.ಬಿ.ಅಸೂಟಿ ಸೂಚನೆ



ಗದಗ : ಪ್ರಯಾಣಿಕರ ಆರೋಗ್ಯ ರಕ್ಷಣೆಗಾಗಿ ಬಸ್ ನಿಲ್ದಾಣ ಆವರಣದ ಸ್ವಚ್ಛತೆಗೆ ಪ್ರಥಮಾದ್ಯತೆ ವಹಿಸಬೇಕು ಎಂದು ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಸೂಚಿಸಿದರು.

ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಸೋಮವಾರ ಶಿರಹಟ್ಟಿ ನಗರದ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ವ್ಯವಸ್ಥೆಯ ಪರಿಶೀಲನೆ ನಡೆಸಿ ಅವರು ಮಾತನಾಡಿದರು. ಜುಲೈ 20 ರಂದು ಪುನ: ಬಸ್ ನಿಲ್ದಾಣದ ಸ್ವಚ್ಛತೆಯ ಪರಿಶೀಲನೆಗಾಗಿ ಆಗಮಿಸುವುದಾಗಿ ತಿಳಿಸಿದ ಅವರು ಈಗ ನೀಡಿರುವ ಎಲ್ಲ ಸೂಚನೆಗಳು ಕಾರ್ಯರೂಪಕ್ಕೆ ಬರುವಂತೆ ನೋಡಿಕೊಳ್ಳಬೇಕು. ಇಲ್ಲವಾದಲ್ಲಿ ಸಂಬಂಧಿತ ಅಧಿಕಾರಿಗಳ ಮೇಲೆ ಶಿಸ್ತು ಕ್ರಮಕ್ಕೆ ಆಗ್ರಹಿಸಲಾಗುವುದು. ನಿಲ್ದಾಣದಲ್ಲಿ ಸಾರ್ವಜನಿಕರಿಗೆ ಕೂರಲು ಉತ್ತಮ ಆಸನಗಳ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಅಲ್ಲದೇ ಪ್ಲಾಸ್ಟಿಕ್ ಮುಕ್ತ ನಿಲ್ದಾಣ ಆಗಬೇಕು. ಶಾಲೆಯ ವಿದ್ಯಾರ್ಥಿಗಳಿಗೆ ಗ್ರಾಮಗಳಿಂದ ಶಿರಹಟ್ಟಿಗೆ ಬಂದು ಹೋಗಲು ಸರಿಯಾದ ಬಸ್ಸಿನ ವ್ಯವಸ್ಥೆ ಮಾಡಬೇಕು. ಈ ಬಗ್ಗೆ ಅಧಿಕಾರಿಗಳು ಕ್ರಮ ವಹಿಸುವಂತೆ ಬಿ.ಬಿ.ಅಸೂಟಿ ನಿರ್ದೇಶನ ನೀಡಿದರು.

ಶೌಚಾಲಯ ವೀಕ್ಷಣೆ : ನಿಲ್ದಾಣದ ಆವರಣದಲ್ಲಿರುವ ಶೌಚಾಲಯದ ಪರಿಶೀಲನೆ ನಡೆಸಿ ಅಲ್ಲಿಯೂ ಸಹ ಸ್ವಚ್ಛತೆ ಅಗತ್ಯವಾಗಿದೆ. ವಿಕಲಚೇತನರಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಮಾಡಬೇಕು ಅಲ್ಲದೇ ಸಾರ್ವಜನಿಕರಿಂದ ನಿಗದಿತ ಶುಲ್ಕ ಪಡೆದು ಸಾರ್ವಜನಿಕರಿಗೆ ಶೌಚಾಲಯ ಬಳಕೆಗೆ ದೊರೆಯಬೇಕು. ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿರುವ ಕುರಿತು ದೂರುಗಳು ಬಂದಿದ್ದು ಪುನ: ದೂರುಗಳು ಬರದಂತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ನಿಗಾ ವಹಿಸಲು ಸೂಚಿಸಿದರು.

ವಿಶ್ರಾಂತಿ ಕೊಠಡಿ : ನಿಲ್ದಾಣದ ಆವರಣದಲ್ಲಿರುವ ಶಿಶು ಆರೈಕೆ ವಿಶ್ರಾಂತಿ ಕೊಠಡಿಗೆ ಭೇಟಿ ನೀಡಿದ ಅವರು ವಿಶ್ರಾಂತಿ ಕೊಠಡಿಯಲ್ಲಿ ಶುದ್ಧ ಗಾಳಿ, ಬೆಳಕಿನ ವ್ಯವಸ್ಥೆ ಕಲ್ಪಿಸಬೇಕು. ಜೊತೆಗೆ ಸ್ವಚ್ಛವಾಗಿರುವಂತೆ ನೋಡಿಕೊಳ್ಳಬೇಕು ಹಾಗೂ ಪ್ರತಿನಿತ್ಯ ವಿಶ್ರಾಂತಿ ಕೊಠಡಿಗೆ ಸಾರ್ವಜನಿಕರು ಆಗಮಿಸುವಂತೆ ಶುಚಿಯಾಗಿಟ್ಟುಕೊಳ್ಳಲು ಸಾರಿಗೆ ಸಂಸ್ಥೆಯ ಅಧಿಕಾರಿ.ಡಿ.ಸಿ ದೇವರಾಜ ಅವರಿಗೆ ಜಿಲ್ಲಾಧ್ಯಕ್ಷ ಬಿ.ಬಿ.ಅಸೂಟಿ ನಿರ್ದೇಶನ ನೀಡಿದರು.

ಶಿರಹಟ್ಟಿ ತಾಲೂಕ ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ವೀರಯ್ಯ ಮಠಪತಿ ಅವರು ಮಾತನಾಡಿ ಪ್ರತಿ ಪಂಚಾಯತಿ ಮಟ್ಟದಲ್ಲಿ ಗ್ಯಾರಂಟಿ ಸಭೆಗಳನ್ನು ಮಾಡುವ ಮುಖಾಂತರ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳನ್ನು ಪ್ರಚಾರ ಮಾಡಬೇಕೆಂದರು.

ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಸಮಿತಿಯ ಸದಸ್ಯರಾದ ಅಶೋಕ ಮಂದಾಲಿ ಅವರು ಮಾತನಾಡಿ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಗಳಾದ ಪಂಚ ಗ್ಯಾರಂಟಿ ಯೋಜನೆಗಳು ದುರ್ಬಲರನ್ನು ಆರ್ಥಿಕ ಸಬಲರನ್ನಾಗಿ ಮಾಡುತ್ತಿವೆ ಎಂದರು.

ಗ್ಯಾರಂಟಿ ಸಂವಾದ : ನಿಲ್ದಾಣದ ಆವರಣದಲ್ಲಿನ ಮಹಿಳೆಯರೊಂದಿಗೆ ಹಾಗೂ ಗ್ಯಾರಂಟಿ ಫಲಾನುಭವಿಗಳೊಂದಿಗೆ ಸಂವಾದ ನಡೆಸಿದ ಸಮಿತಿ ಸದಸ್ಯರು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಹಾಗೂ ಯಶಸ್ಸಿನ ಬಗ್ಗೆ ಅಭಿಪ್ರಾಯಗಳನ್ನು ಆಲಿಸಿದರು.

ಶಕ್ತಿ ಯೋಜನೆ ಮಹಿಳೆಯರ ಸಬಲತೆಗೆ ಶಕ್ತಿಯಾಗಿ ನಿಂತಿರುವುದು ಅಕ್ಷರಶ: ಸತ್ಯ. ಅದರಂತೆ ಸುಸ್ಥಿತ ಬದುಕಿಗಾಗಿ ಗೃಹಲಕ್ಷ್ಮಿ ಯೋಜನೆ, ಹಸಿವು ಮುಕ್ತ ಕರ್ನಾಟಕಕ್ಕೆ ಅನ್ನಭಾಗ್ಯ ಹಾಗೂ ಬಡವರ ಆಶಾಕಿರಣ ಗೃಹ ಜ್ಯೋತಿ, ನಿರುದ್ಯೋಗ ನಿವಾರಣೆಗೆ ಯುವನಿಧಿ ಸಹಕಾರಿಯಾಗಿವೆ ಎಂದು ಫಲಾನುಭವಿಗಳು ತಮ್ಮ ಮನದಾಳದ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಾ ಮುಖ್ಯಮಂತ್ರಿ ಸಿದ್ದರಾಮಯ್ಯ , ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್. ಸಚಿವರಾದ ಎಚ್.ಕೆ.ಪಾಟೀಲ ಸೇರಿದಂತೆ ಸರ್ಕಾರಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ತಾಲೂಕ ಗ್ಯಾರಂಟಿ ಸಮಿತಿಯ ಸದಸ್ಯರಾದ ಶಿವನಗೌಡ ಪಾಟೀಲ. ಮಲ್ಲಪ್ಪ ಹುಯಲಗೋಳ. ಬುಡೆನಸಾಬ್ ಮಕಾಂದರ. ದೇವಪ್ಪ ಲಮಾಣಿ. ವಿಶಾಲ ಹೊನ್ನಣ್ಣವರ. ಸುರೇಶರಡ್ಡಿ ಕೆಂಚರೆಡ್ಡಿ.ಶಕುಂತಲಾ ವಿಭೂತಿಮಠ .ಹೊನ್ನೇಶ್ ಪೋಟಿ. ಮಹಾವೀರ್ ಮಂಟಗನ್ನಿ. ಅಂದನಗೌಡ ಪಾಟೀಲ್. ಸೋಮನಗೌಡ ಮರಿಗೌಡ .ಪ್ರಮುಖರಾದ ಹೂಮಾಯನ್ ಮಾಗಡಿ. ಪವನ್ ಇಳಿಗೇರ. ಹಸನ್ ಸಾಬ್ ನದಾಫ್.ಸಂತೋಷ್ ಕುರಿ. ಸಂಗಪ್ಪ ಕೆರಕಲಮಟ್ಟಿ ಚಾಂದಸಾಬ ಕೊಟ್ಟೂರ ಮತ್ತಿತರರು ಹಾಜರಿದ್ದರು.

## ಅರ್ಜಿ ಆಹ್ವಾನ

ಗದಗ : ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ಸಂಸ್ಥೆಯಲ್ಲಿ ಖಾಲಿಯಿರುವ 01 ಉಪನ್ಯಾಸಕರ ಹುದ್ದೆಗೆ ಗೌರವಧನದ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅಭ್ಯರ್ಥಿಗಳು ಅಂಗೀಕೃತ ವಿಶ್ವವಿದ್ಯಾಲಯದಿಂದ ವಿಜ್ಞಾನ/ ಗಣಿತ ವಿಷಯದಲ್ಲಿ ಸ್ನಾತಕೋತ್ತರ ಪದವಿ (ಎಂ.ಎಸ್ಸಿ) *(Physics/Mathematics)* ಜೊತೆಗೆ ಬಿ.ಎಸ್ಸಿ (ಪಿ.ಸಿ.ಎಮ್) ಪದವಿಯಲ್ಲಿ ಪ್ರಥಮ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದು, ಕನಿಷ್ಠ 02 ವರ್ಷ ಬೋಧನಾ ಅನುಭವವನ್ನು ಮಾನ್ಯತೆ ಹೊಂದಿದ ಡಿಪ್ಲೋಮಾ/ ಎಂಜಿನಿಯರಿಂಗ್/ವಿದ್ಯಾಸಂಸ್ಥೆಗಳಲ್ಲಿ ಅನುಭವವನ್ನು ಹೊಂದಿರಬೇಕು. ನುರಿತ ಮತ್ತು ಸ್ನಾತಕೋತ್ತರ ಪದವಿ ಹೊಂದಿದವರಿಗೆ ಆದ್ಯತೆ ನೀಡಲಾಗುವುದು. ಈ ಹುದ್ದೆಯ ತಾತ್ಕಾಲಿಕವಾಗಿದ್ದು ಪ್ರತಿ ಮಾಹೆಗೆ ರೂ.28,750/- ಗೌರವಧನ ನೀಡಲಾಗುವುದು. ಅಭ್ಯರ್ಥಿಗಳು 45 ವರ್ಷಗಳಿಂತ ಕಡಿಮೆ ವಯೋಮಿತಿಯಲ್ಲಿರಬೇಕು.

ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ದೂರವಾಣಿ ಸಂಖ್ಯೆ: 08372-259664/9743499065 ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ "ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102" ಇವರಿಗೆ ಕೊನೆಯ ದಿನಾಂಕ: 10-07-2025 ರ ಮಧ್ಯಾಹ್ನ 3.00 ಘಂಟೆಯೊಳಗಾಗಿ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಕನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ ಬೆಟಗೇರಿ ದೂರವಾಣಿ ಸಂಖ್ಯೆ : 08372-259664 ಸಂಪರ್ಕಿಸಬಹುದಾಗಿದೆ.

## ಸಾರ್ವಜನಿಕರ ಗಮನಕ್ಕೆ

ಗದಗ ಜುಲೈ 1: ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿರುವ 122 ಗ್ರಾಮ ಪಂಚಾಯತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಈ ಹಿಂದೆ ವಿತರಿಸಲಾದ ಸಿಯುಜಿ ನಂಬರಗಳು ಕಾರ್ಯನಿರ್ವಹಿಸುತ್ತಿಲ್ಲವಾದ್ದರಿಂದ ಆಯಾ ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಹೊಸ ಸಿಯುಜಿ ನಂಬರಗಳನ್ನು ಪೂರೈಸಿ **https://zpgadag.karnataka.gov.in/kn** ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಸ್ಕೃತಿಯ ಸಂಕೇತ ಹೆಣ್ಣು ಮಕ್ಕಳ "ಗುಳ್ಳವನ" ಹಬ್ಬ



-ಮಲ್ಲಿಕಾರ್ಜುನ ತುಂಗಳ

ರಬಕವಿ-ಬನಹಟ್ಟಿ,ಜು1: ಉತ್ತರ ಕರ್ನಾಟಕದಲ್ಲಿ ಬರುವ ಗ್ರಾಮೀಣ ಹಬ್ಬಗಳಲ್ಲಿ ವಿಶೇಷತೆ ಹಾಗೂ ವೈಶಿಷ್ಟತೆಯನ್ನು ಹೊಂದಿರುವ ಗುಳ್ಳವ್ವನ ಹಬ್ಬ ಮಂಗಳವಾರದಿಂದ ಪ್ರಾರಂಭಗೊಂಡಿತು. ಸಂಸ್ಕೃತಿಯ ಸಂಕೇತವಾಗಿರುವ ಹಬ್ಬ. ಅದರಲ್ಲೂ ಹೆಣ್ಣು ಮಕ್ಕಳ ಅಚ್ಚು ಮೆಚ್ಚಿನ ಹಬ್ಬವಾಗಿದೆ. ಆಷಾಡ ಮಾಸದಲ್ಲಿ ಉತ್ತರ ಕರ್ನಾಟಕ ಭಾಗದಲ್ಲಿ ಗುಳ್ಳವ್ವನ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ಗುಳ್ಳಖವ್ವ, ಗುಳಕವ್ವ, ಗೋಲಕವ್ವ ಎಂಬ ವಿವಿಧ ಹೆಸರಿನಿಂದ ಕರೆಸಿಕೊಳ್ಳುವ ಗುಳ್ಳವ್ವ ಜನಪದರ ದೇವತೆಯಾಗಿದ್ದಾಳೆ.

**ಚಿಗರಿಯಿಂದ ಗುಳ್ಳವ್ವ:** ಈ ಮೊದಲು ಪಟ್ಟಣ ಪ್ರದೇಶಕ್ಕೆ ತೆರಳಿ ಚಿಗರಿ(ಕಟ್ಟಿಗೆ ಚಕ್ರ ತಿರುಗಿಸಿ ಮಣ್ಣಿನ ವಸ್ತು ತಯಾರಿಸುವದು)ಯಿಂದ ಆಗಿದ್ದಾಂಗಲೇ ತಯಾರಿಸಿ ಕೊಡುತ್ತಿದ್ದರು. ಇತ್ತೀಚಿನ ದಿನಗಳಲ್ಲಿ ಕುಂಬಾರರು ಮನೆಯಲ್ಲಿಯೇ ತಯಾರಿಸಿ ಮಾರುಕಟ್ಟೆಗೆ ತರುವದು ರೂಢಿ.

'ಗುಳ್ಳವ್ವ ಫಲವತ್ತತೆಯ ದೇವತೆ, ಆಷಾಡ ಮಾಸದಲ್ಲಿ ಆಕೆಯ ಪೂಜೆ ಮಾಡುವುದರಿಂದ ಮಳೆ, ಬೆಳೆ ಸಮೃದ್ಧಿಯಾಗಿ ಬದುಕು ಸುಖಮಯವಾಗುತ್ತದೆ ಎಂಬ ನಂಬಿಕೆ ಜನಪದರದು. ಜನಪದದ ದೈವ ಮತ್ತು ಧರ್ಮ ಎರಡು ನಂಬಿಕೆಯೇ. ಆದ್ದರಿಂದ ಮಣ್ಣಿನಿಂದ ಗುಳ್ಳವ್ವನ ಮೂರ್ತಿ ಮಾಡುತ್ತಾರೆ. ಆಕೆ ಅಮೂರ್ತ ದೇವತೆ. ಭೂಮಿ ಗೋಲಾಗಿರುವುದರಿಂದ ಆಕೆಗೆ ಗೋಲವ್ವ ಹೆಸರಿನಿಂದ ಕರೆಯುತ್ತಿದ್ದರು ಅದು ಬರ ಬರುತ್ತಾ ಗುಳ್ಳವ ಎಂದು ಆಗಿದ್ದು, ಇಡೀ ಜಗತ್ತಿನ ಫಲವತ್ತತೆಯ ನಂಬಿಕೆ ಗುಳ್ಳವ ದೇವತೆ.'

**- ಬಿ. ಆರ್. ಪೋಲೀಸಪಾಟೀಲ,**
**ನಾಟಕಕಾರರು, ಹಿರಿಯ ಸಾಹಿತಿಗಳು,**
**ಜಾನಪದ ಕವಿಗಳು, ಬನಹಟ್ಟಿ.**

ಮಣ್ಣಿನಿಂದ ಮಾಡುವ ಗುಳ್ಳವ್ವ ಭೂದೇವಿಯ ಅವತಾರವಿದ್ದಂತೆ, ಗ್ರಾಮೀಣ ಜನರ ಒಂದು ಅಪರೂಪದ ಹಬ್ಬವೆನಿಸಿರುವ ಗುಳ್ಳವ್ವ ಆಷಾಡದ ಮೊದಲನೆ ಮಂಗಳವಾರದಿಂದ ಸುಮಾರು ಒಂದು ತಿಂಗಳಕಾಲ (4ವಾರ) ಪ್ರತಿ ಮಂಗಳವಾರ ಮಣ್ಣಿನಿಂದ ಮಾಡಿದ ಗುಳ್ಳವ್ವನ ತಂದು ಶೃಂಗಾರ ಮಾಡಿ ಪೂಜೆ ಮಾಡುತ್ತಾರೆ. ಅಂದು ಸಂಜೆ ಚಿಕ್ಕ ಮಕ್ಕಳು ಆರತಿ ತೆಗೆದುಕೊಂಡು ಮನೆ ಮನೆಗೆ ಹೋಗಿ ಗುಳ್ಳವನ ಹಾಡುಗಳನ್ನು ಹಾಡಿ ಆರತಿ



'ನಾಲ್ಕು ತಲೆಮಾರುಗಳಿಂದಲೂ ಗುಳ್ಳವ್ವನ ತಯಾರಿಸುತ್ತ ಬಂದಿದ್ದೇವೆ. ಕಟ್ಟಕಡೆಯ ಜನರಿಗೂ ಸಹಿತ ಕೈಗೆಟುವ ದರದಲ್ಲಿ ನಾಡಿನ ಸಂಸ್ಕೃತಿಗೆ ಧಕ್ಕೆಯಾಗದ ರೀತಿಯಲ್ಲಿ ಕಡಿಮೆ ಬೆಲೆಗೆ ಮಾರಾಟ ಮಾಡುವದರ ಮೂಲಕ ಎಲ್ಲರಿಗೂ ಸೇರಬೇಕೆನ್ನುವ ಉದ್ದೇಶ. ಇದೇ ಕಾರಣಕ್ಕೆ ಇಂದಿಗೂ 15 ರೂ. ನಿಗದಿಸಿ ಗುಳ್ಳವ್ವನ ಮಾರಾಟ ಮಾಡುತ್ತಿದ್ದೇವೆ.'-

**-ಪ್ರಕಾಶ ಕುಂಬಾರ, ರಬಕವಿ.**

ಎತ್ತುತ್ತಾರೆ. ಮರುದಿನ (ಬುಧವಾರ) ಮನೆಗಳಲ್ಲಿ ಹಲವಾರು ಬಗೆಯ ಭಕ್ಷ ಭೋಜನಗಳನ್ನು ತಯಾರಿಸಿಕೊಂಡು ತೋಟ, ಉದ್ಯಾನವನ, ದೇವಸ್ಥಾನ, ನದಿ ಹಾಗೂ ಕೆರೆಯ ದಡಗಳಲ್ಲಿ ಹೋಗಿ ಊಟ ಮಾಡಿ ಸಂಜೆವರೆಗೆ ಹರಟೆ ಹೊಡೆದು ಕಾಲಕಳೆಯುವ ಸಂಪ್ರದಾಯ ಈಗಲೂ ಗ್ರಾಮೀಣ ಪ್ರದೇಶದಲ್ಲಿ ಕಂಡು ಬರುತ್ತಿದೆ.

**ಮಾರಾಟ ಬಲುಜೋರು:** ಪ್ರತಿ ಕುಟುಂಬದವರೂ ಮಣ್ಣಿನಿಂದ ಕೂಡಿದ ಗುಳ್ಳವ್ವನನ್ನು ಖರೀದಿಸುವದು ವಾಡಿಕೆ. ಇದರೊಂದಿಗೆ ಲಿಂಗವನ್ನೂ ಸಹಿತ ಪಡೆಯುವಲ್ಲಿ ಕಾರಣವಾಗಿದೆ.

ಪ್ರತಿಯೊಂದು ಗುಳ್ಳವ್ವಕ್ಕೆ 15 ರಿಂದ 20 ರೂ.ಗಳಷ್ಟು ದರ ನಿಗದಿಯೊಂದಿಗೆ ಖರೀದಿಸುತ್ತಾರೆ.

***

## ಯಲಬುರ್ಗಾ ಪೋಲೀಸ್ ಠಾಣೆ: ಕಾಣೆಯಾದವರ ಪತ್ತೆಗೆ ಸಹಕರಿಸಲು ಮನವಿ

ಕೊಪ್ಪಳ : ಯಲಬುರ್ಗಾ ಪಟ್ಟಣ ಹಾಗೂ ಯಲಬುರ್ಗಾ ತಾಲ್ಲೂಕಿನ ವಿವಿಧ ಗ್ರಾಮಗಳಿಂದ ಕಾಣೆಯಾದ ವ್ಯಕ್ತಿಗಳ ಕುರಿತು ಯಲಬುರ್ಗಾ ಪೊಲೀಸ್ ಠಾಣೆಯಲ್ಲಿ ಮೂರು ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ.

ಪ್ರಕರಣ-1: ಗುನ್ನೆ ನಂ: 71/2024

ಯಲಬುರ್ಗಾ ತಾಲ್ಲೂಕಿನ ಬಂಡಿ ಗ್ರಾಮದ ನಿವಾಸಿ ಕಲ್ಲಪ್ಪ ಬಸಪ್ಪ ತೊಂಡಿಹಾಳ ಎಂಬ 47 ವರ್ಷದ ವ್ಯಕ್ತಿಯು 2023 ರ ಅಕ್ಟೋಬರ್ 18 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ವ್ಯಕ್ತಿಯು 5 ಅಡಿ ಎತ್ತರ, ಸದೃಢ ಮೈಕಟ್ಟು, ಸಾದಾಗೆಂಪು ಮೈಬಣ್ಣ, ದುಂಡು ಮುಖ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ಶರ್ಟ್ ಮತ್ತು ಪ್ಯಾಂಟ್ ಧರಿಸಿದ್ದರು.

ಪ್ರಕರಣ-2: ಗುನ್ನೆ ನಂ: 70/2025

ಯಲಬುರ್ಗಾ ತಾಲ್ಲೂಕಿನ ಮಲಕಸಮುದ್ರ ಗ್ರಾಮದ ಕಲ್ಲಪ್ಪ ಭೀಮಪ್ಪ ಕಲ್ಲೂರು ಎಂಬ 56 ವರ್ಷದ ವ್ಯಕ್ತಿಯು 2023 ರ ಮೇ 15 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ವ್ಯಕ್ತಿಯು 5 ಅಡಿ ಎತ್ತರ, ಸದೃಢ ಮೈಕಟ್ಟು, ಸಾದಾಗೆಂಪು ಮೈಬಣ್ಣ, ದುಂಡು ಮುಖ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ಅಂಗಿ ಮತ್ತು ಲುಂಗಿ ಧರಿಸಿದ್ದರು.

ಪ್ರಕರಣ-3: ಗುನ್ನೆ ನಂ: 90/2025

ಯಲಬುರ್ಗಾ ತಾಲ್ಲೂಕಿನ ಮಲಕಸಮುದ್ರ ಗ್ರಾಮದ ದ್ಯಾಮಣ್ಣ ಲಕ್ಕಪ್ಪ ಗುರಿಕಾರ ಎಂಬ 55 ವರ್ಷದ ವ್ಯಕ್ತಿಯು 2020 ರ ಫೆಬ್ರವರಿ 21 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ವ್ಯಕ್ತಿಯು 5 ಅಡಿ ಎತ್ತರ, ಸದೃಢ ಮೈಕಟ್ಟು, ಸಾದಾಕೆಂಪು ಮೈ ಬಣ್ಣ, ದುಂಡು ಮುಖ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ಅಂಗಿ, ದೋತರ ಧರಿಸಿದ್ದರು.

ಮೇಲ್ಕಂಡ ಚಹರೆಯ ವ್ಯಕ್ತಿಗಳ ಕುರಿತು ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಯಲಬುರ್ಗಾ ಪೊಲೀಸ್ ಠಾಣೆ ಪಿಎಸ್ಐ ದೂ.ಸಂ: 08534-220133, 9480803749, ಕೊಪ್ಪಳ ಕಂಟ್ರೋಲ್ ರೂಂ: 08539-220222 ಸಂಪರ್ಕಿಸಿ ಮಾಹಿತಿ ನೀಡಬೇಕು. ಕಾಣೆಯಾದ ವ್ಯಕ್ತಿಗಳ ಬಗ್ಗೆ ಮಾಹಿತಿ ನೀಂಡಿದಲ್ಲಿ ನಗದು ಬಹುಮಾನ ನೀಡಲಾಗುವುದು ಎಂದು ಯಲಬುರ್ಗಾ ಪೊಲೀಸ್ ಠಾಣೆ ಪಿಎಸ್ಐ ಪ್ರಕಟಣೆಯಲ್ಲಿ ಕೋರಿದ್ದಾರೆ.

ಅಂಗನವಾಡಿ ಮೇಲ್ವಿಚಾರಕಿಯರ ಪ್ರಗತಿ ಪರಿಶೀಲನಾ ಸಭೆ

## ನಿವೇಶನ ಗುರುತಿಸುವ ಕಾರ್ಯ ಚುರುಕುಗೊಳಿಸಿ ಬೀಳಗಿ ಸಿಡಿಪಿಓ ಮೇಲೆ ಶಿಸ್ತು ಕ್ರಮಕ್ಕೆ ಸಿಇಓ ಕುರೇರ ಸೂಚನೆ



ಬಾಗಲಕೋಟೆ : : ಅಂಗನವಾಡಿ ಸ್ವಂತ ಕಟ್ಟಡಕ್ಕೆ ಸಂಬಂಧಿಸಿದಂತೆ ಗುರುತಿಸಲಾಗುತ್ತಿರುವ ನಿವೇಶನದ ಮಾಹಿತಿಯನ್ನು ಜಿಲ್ಲಾ ಕಚೇರಿಗೆ ಕಳುಹಿಸದೇ ತಮ್ಮ ಹಂತದಲ್ಲಿ ಇಟ್ಟುಕೊಂಡು ಕರ್ತವ್ಯದಲ್ಲಿ ಲೋಪ ಎಸಗಿದ ಬೀಳಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಮೇಲೆ ಶಿಸ್ತು ಕ್ರಮಕೈಗೊಳ್ಳುವಂತೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿಂದು ಜಿಲ್ಲೆಯ ಅಂಗನವಾಡಿ ಮೇಲ್ವಿಚಾರಕರ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅಂಗನವಾಡಿಗೆ ಸ್ವಂತ ನಿವೇಶನ ಗುರುತಿಸಿ ಖರೀದಿಸುವ ಸಲುವಾಗಿ ಬೀಳಗಿ ಪುರಸಭೆಯಿಂದ ಪಡೆಯಲಾದ ನಿವೇಶನದ ಅಂದಾಜು ವೆಚ್ಚದ ಮಾಹಿತಿಯನ್ನು ಜಿಲ್ಲಾ ಕಚೇರಿಗೆ ಕಳುಹಿಸದೇ ವಿಳಂಬ ದೋರಣೆ ಅನುಸರಿಸುವದಲ್ಲದೇ ಹಾರಿಕೆ ಉತ್ತರ ನೀಡುತ್ತಿದ್ದರು. ಕರ್ತವ್ಯದಲ್ಲಿ ಬೇಜವಾಬ್ದಾರಿ ತೋರಿದ ಹಿನ್ನಲೆಯಲ್ಲಿ ಶಿಸ್ತು ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

ಕಳೆದ ಒಂದು ವರ್ಷದಿಂದ ಸ್ವಂತ ಕಟ್ಟಡ ಇಲ್ಲದ ಅಂಗನವಾಡಿ ಕೇಂದ್ರಗಳ ಪಟ್ಟಿ ಮಾಡಿ ನಿವೇಶನ ಗುರುತಿಸಲು ಸೂಚನೆ ನೀಡಲಾಗಿತ್ತು. ಆದರೆ ಇನ್ನು ಕೆಲವು ಮೇಲ್ವಿಚಾರಕರು ನಿವೇಶನ ಗುರುತಿಸುವ ಕಾರ್ಯದಲ್ಲಿ ಬೇಜವಾಬ್ದಾರಿ ತೋರುತ್ತಿದ್ದು, ಆಯಾ ತಾಲೂಕಾ ಮೇಲ್ವಿಚಾರಕರು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡ, ಬಾಡಿಗೆ ಕಟ್ಟಡ ಎಷ್ಟು ಇವೆ. ಸ್ವಂತ ಕಟ್ಟಡಕ್ಕೆ ಗುರುತಿಸಿದ ನಿವೇಶನ ಎಷ್ಟು, ನಿವೇಶನ ಗುರುತಿಸಿರುವ ಬಗ್ಗೆ ದೃಢೀಕರಣ ಸಹಿತ ಮಾಹಿತಿ ನೀಡುವಂತೆ ಒಂದು ತಿಂಗಳ ಗಡುವು ನೀಡಿದರು.

ಆಸಕ್ತಿಯಿಂದ ಕೆಲಸ ಮಾಡಿದರೆ ಎಲ್ಲವೂ ಸಾಧ್ಯವಾಗುತ್ತದೆ. ನಿವೇಶನ ಹುಡುಕಿ ಮಾಹಿತಿ ಪಡೆದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಖರೀದಿ ಕುರಿತು ಮೇಲಾಧಿಕಾರಿಗಳೊಂದಿಗೆ ಚರ್ಚೆ ಮಾಡಬೇಕು. ನಿಮ್ಮ ಜವಾಬ್ದಾರಿ ಹೆಚ್ಚಿಗೆ ಇದೆ. ತುಂಬಾ ಮುತುವರ್ಜಿ ವಹಿಸಿ ಕೆಲಸ ಮಾಡಲು ತಿಳಿಸಿದ ಸಿಇಓ ಅವರು ಆಯಾ ತಾಲೂಕಿನಲ್ಲಿರುವ ನಿವೇಶನ ರಹಿತಿ ನಗರ ಹಾಗೂ ಗ್ರಾಮೀಣ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳ ಮಾಹಿತಿಯನ್ನು ಪಡೆದುಕೊಂಡರು.

ಅಂಗನವಾಡಿ ಕೇಂದ್ರಗಳಲ್ಲಿ ಪ್ರತಿತಿಂಗಳ ಹಾಜರಾತಿ ಸರಿಯಾಗಿ ಹಾಕುತ್ತಿಲ್ಲ. ಅಂದಾಜು ಲೆಕ್ಕದ ಮೇಲೆ ಹಾಜರಾತಿ ಇದ್ದು, ವಾಸ್ತವವಾಗಿ ನೋಡಿದಾಗ ಬಹಳಷ್ಟು ಕಡಿಮೆ ಇದೆ. ಅಲ್ಲದೇ ಪೋಷನ್ ಟ್ರ್ಯಾಕ್‌ನಲ್ಲಿ ಸಹ ವ್ಯತ್ಯಾಸ ಕಂಡುಬರುತ್ತಿದೆ. ಈ ರೀತಿಯ ವ್ಯತ್ಯಾಸ ಆಗಬಾರದು. ಮುಂದಿನ ಮಾಹೆಯಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಅನಿರೀಕ್ಷಿತವಾಗಿ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಮಕ್ಕಳ ಹಾಜರಾತಿ ಪರಿಶೀಲಿಸಲಾಗುವುದೆಂದು ಎಚ್ಚರಿಕೆ ನೀಡಿದರು. ಸರಕಾರ ಅಪೌಷ್ಠಿಕ ಮಕ್ಕಳಿಗೆ ಪೌಷ್ಠಿಕಾಂಶವುಳ್ಳ ಆಹಾರ ನೀಡುತ್ತಿದೆ. ಆದರೂ ಸಹ ಅಪೌಷ್ಠಿಕ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿಲ್ಲ. ಅಂತಹ ಮಕ್ಕಳ ಬಗ್ಗೆ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಗಮನ ಹರಿಸಬೇಕು. ಕಾಲ ಕಾಲಕ್ಕೆ ಮಕ್ಕಳ ತೂಕ, ಎತ್ತರ ಪರೀಕ್ಷೆ ಮಾಡಬೇಕು. ಕಡಿಮೆ ಪ್ರಗತಿ ಸಾಧಿಸಿದ ಮೇಲ್ವಿಚಾರಕರ ಮೇಲೆ ನೋಟಿಸ್ ಜಾರಿ ಮಾಡಲು ತಿಳಿಸಿದರು. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಕೇವಲ ಅಂಗನವಾಡಿಗಳಿಗೆ ಭೇಟಿ ನೀಡಿದರೆ ಸಾಲದು. ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಲ್ಲಿರುವ ಮೂಲಭೂತ ಸೌಲಭ್ಯ, ಹಾಜರಾತಿ ಪರಿಶೀಲಿಸಿ ಮುಂದಿನ ಭೇಟಿ ಸಮಯದಲ್ಲಿ ಸುಧಾರಣೆ ಆಗಿರುವ ಬಗ್ಗೆ ಗಮನ ಹರಿಸುವ ಕಾರ್ಯವಾಗಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ ಸೇರಿದಂತೆ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಅಂಗನವಾಡಿ ಕೇಂದ್ರಗಳ ಮೇಲ್ವಿಚಾರಕರು ಉಪಸ್ಥಿತರಿದ್ದರು.

## ಬಂಡಿಗಣಿ: ಪಂಢರಪುರ ವಾರಿ ದಾಸೋಹಕ್ಕೆ ‘ಸುವರ್ಣ ಮಹೋತ್ಸವ

# 150 ಟನ್ ಆಹಾರ ಧಾನ್ಯ- ಸೇವೆ ಪ್ರಾರಂಭ



ರಬಕವಿ-ಬನಹಟ್ಟಿ, ಜ್ಞಾನೇಶ್ವರ ಮತ್ತು ತುಕಾರಾಮರ ಪಾದುಕೆ, ಪಲ್ಲಕ್ಕಿಯ ವಾರಿ ಪ್ರಯುಕ್ತ ಮಹಾರಾಷ್ಟ್ರದ ಸುಕ್ಷೇತ್ರ ಪಂಢರಪುರ ವಿಠ್ಠಲನ ಜಾತ್ರೆಗೆ ಲಕ್ಷಾಂತರ ಭಕ್ತರು ಪಾದಯಾತ್ರೆ ಮೂಲಕ ತೆರಳುವ ಮಾರ್ಗ ಮಧ್ಯ ಅನ್ನದಾಸೋಹ ನಡೆಸುತ್ತಿರುವ ಬಂಡಿಗಣಿಯ ಬಸವಗೋಪಾಲ ನೀಲಮಾಣಿಕಮಠವು 50 ವರ್ಷಗಳಿಂದ ನಿರಂತರ ಸೇವೆಯಲ್ಲಿ ತೊಡಗಿದ್ದು, ಪ್ರಸಕ್ತ ವರ್ಷ ವಿಶೇಷ ಭೋಜನಕೂಟ ವ್ಯವಸ್ಥೆಯೊಂದಿಗೆ ಭಕ್ತರ ಹೊಟ್ಟೆ ತುಂಬಿಸುವಲ್ಲಿ ಕಾರಣವಾಗಿದೆ.

ಈ ಕುರಿತು ಶ್ರೀಮಠದ ಅನ್ನದಾನೇಶ್ವರರು ಮಾತನಾಡಿ, 1975 ರಲ್ಲಿ ಕೇವಲ 1 ಟನ್ ಆಹಾರದೊಂದಿಗೆ 100 ಜನರು ಸೇವಕರೊಂದಿಗೆ ಪ್ರಾರಂಭಗೊಂಡ ಈ ಅನ್ನದಾನ ಸೇವೆಯು ಇದೀಗ ಪ್ರಸಕ್ತ ವರ್ಷ 150 ಟನ್‌ವರೆಗೆ ಆಹಾರ ಧಾನ್ಯದೊಂದಿಗೆ 2 ಸಾವಿರದಷ್ಟು ಭಕ್ತರು ದಾಸೋಹದಲ್ಲಿ ಪಾಲ್ಗೊಳ್ಳುತ್ತಿರುವದು ವಿಶೇಷವೆಂದರು.

ತರಹೇವಾರಿ ಸಿಹಿ: ಮುಂಬೈ ಮಾದ್ಲಿ, ಶ್ರೀಖಂಡ, ಜಾಮೂನು, ಬಾಸುಂದೆ ಸೇ-ರಿದಂತೆ ಉತ್ತರ ಕರ್ನಾಟಕದ ಖಡಕ್ ರೊಟ್ಟಿ ಅನ್ನ-ಸಾಂಬಾರು ಸೇರಿದಂತೆ ಭಾರಿ ಭೋಜನ ಕಲ್ಪಿಸಲಾಗಿದೆ ಎಂದು ದಾನೇಶ್ವರ ಶ್ರೀಗಳು ತಿಳಿಸಿದರು.

8 ದಿನ ಸೇವೆ: ದಿ.2 ರಿಂದ 9ವರೆಗೆ ನಡೆಯುವ ಅನ್ನದಾನ ಸೇವೆಯು ಸುಕ್ಷೇತ್ರದ ರಿದ್ಧಿ-ಸಿದ್ಧಿ ದೇವಸ್ಥಾನ ಆವರಣದಲ್ಲಿ ಅನ್ನದಾಸೋಹ ಜರುಗಲಿದೆ.

ಒಟ್ಟು 6 ಲಾರಿಗಳ ಮೂಲಕ 150 ಟನ್‌ನಷ್ಟು ಆಹಾರ ಧಾನ್ಯ ತೆರಳಿದ್ದು, 12 ಟನ್‌ನಷ್ಟು ಜೋಳದ ಖಡಕ್ ರೊಟ್ಟಿ ಭಕ್ತರಿಂದ ಒದಗಿಸಿರುವದು ಗಮನಾರ್ಹವಾಗಿದೆ.

ಭಕ್ತರ ಹಿಂಬಾಲಕ ನಾನು: ಭಕ್ತರಿಂದ ನಿರ್ಮಿತಗೊಂಡ ಬಂಡಿಗಣಿಮಠದಲ್ಲಿ ಭಕ್ತರೇ ಎಲ್ಲರಿಗಿಂತ ದೊಡ್ಡವರು. ನನ್ನ ಹಿಂಬಾಲಕರು ಎಂದಿಗೂ ಭಕ್ತರಾಗುವದಿಲ್ಲ. ಬದಲಾಗಿ ನಾನೇ ಸದ್ಭಕ್ತರ ಹಿಂಬಾಲಕನಾಗಿದ್ದೇನೆ.

ರಾಜ್ಯವಷ್ಟೇ ಅಲ್ಲದೆ ಪರರಾಜ್ಯಗಳಲ್ಲಿ ಶ್ರೀಮಠದ ಭಕ್ತರಿಂದ ಜರುಗುವ ಅನ್ನದಾಸೋಹ ಕಾರ್ಯಕ್ರಮ ಎಲ್ಲಿಯೇ ಇರಲಿ ಸ್ವಯಂಪ್ರೇರಿತವಾಗಿ ಭಾಗವಹಿಸಿ ಆನಂದಿಸುತ್ತೇನೆ. ಒಟ್ಟಾರೆ ದಾಸೋಹದಲ್ಲಿ ನೆಮ್ಮದಿ ಕಂಡಿದ್ದೇನೆಂದು ದಾನೇಶ್ವರಶ್ರೀಗಳು ತಿಳಿಸಿದರು.

# ಬೆಳೆ ವಿಮೆ ಜಿಲ್ಲೆಯ ಎಲ್ಲಾ ರೈತರಿಗೆ ಮಾಡಲು ತಿಳಿಸಿ- ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ

ಕೊಪ್ಪಳ : ಕೊಪ್ಪಳ ಜಿಲ್ಲೆಯಲ್ಲಿ ಈ ಸಲ ಮಳೆ ಆಶಾದಾಯವಾಗಿ ಕಂಡು ಬರುತ್ತಿಲ್ಲ ಹಾಗಾಗಿ ಜಿಲ್ಲೆಯ ಎಲ್ಲಾ ರೈತ-ರಿಗೆ ಬೆಳೆ ವಿಮೆ ಮಾಡಲು ತಿಳಿಸಬೇಕೆಂದು ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಅವರು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಿಗೆ ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕರೆದ ಕೃಷಿ ಹಾಗೂ ಕೃಷಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಕರೆದ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಇಲ್ಲಿಯವರೆಗೆ ಸರಿಯಾಗಿ ಜಿಲ್ಲೆಯಲ್ಲಿ ಮಳೆಯಾಗಿಲ್ಲ ಮುಂದೆಯು ಹೀಗೆ ಆದರೆ ರೈತರಿಗೆ ಕಷ್ಟವಾಗುತ್ತದೆ. ರೈತರು ಬೆಳೆ ವಿಮೆ ಈ ವರ್ಷ ಹೆಚ್ಚಿನ ಸಂಖ್ಯೆಯಲ್ಲಿ ಮಾಡಿಸಬೇಕು. ಕಳೆದ ವರ್ಷ ಎಷ್ಟು ಮಾಡಿದ್ದಾರೆ ಈ ಕುರಿತು ಅವರಿಗೆ ಸರಿಯಾಗಿ ಮಾಹಿತಿ ನೀಡಿ ಎಂದು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಹೇಳಿದರು.

ಜಿಲ್ಲೆಯಲ್ಲಿ ಕ್ರಾಫ್ ಕಟಿಂಗ್ ಎಕ್ಸಪೇರಿಮಿಂಟ ಹೇಗೆ ನಡೆಯುತ್ತಿದೆ ಕಳೆದ ಸಲ ಏನಾದರೂ ಸಮಸ್ಯೆಗಳಾಗಿದ್ದರೆ ಅವುಗಳು ಈ ಸಲ ಮರುಕಳಿಸದಂತೆ ನೋಡಿಕೊಳ್ಳಬೇಕು. ತಮಗೆ ವಹಿಸಿದ ಕೆಲಸವನ್ನು ಜವಾಬ್ದಾ-ರಿಯಿಂದ ಮಾಡಬೇಕು ಯಾವುದೇ ನೆಪ ಹೇಳುವಹಾಗಿಲ್ಲ ಎಂದರು.

ಸಾಮಾಜಿಕ ಅರಣ್ಯ ವಿಭಾಗದಿಂದ ಬರುವ ವರ್ಷ ಜಿಲ್ಲೆಯಲ್ಲಿ ಒಂದು ಲಕ್ಷ ಗಿಡಗಳನ್ನು ಹಚ್ಚಬೇಕು. ರಸ್ತೆಯ ಎಲ್ಲಾ ಕಡೆಗಳಲ್ಲಿ ಹಚ್ಚುವುದರ ಜೊತೆಗೆ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ವಸತಿ ನಿಲಯಗಳ ಕಾಂಪೌಂಡ್ ಒಳಗಡೆ ಆಯಾ ಇಲಾಖೆಯಿಂದ ಅವರಿಗೆ ಎಷ್ಟು ಗಿಡಗಳನ್ನು ಬೇಕು ಎಂಬ ಮಾಹಿತಿ ಪಡೆದು ಅವ-ರಿಗೆ ಗಿಡಗಳನ್ನು ನೀಡಲು ಉಪ ಅರಣ್ಯ ಸಂರಕ್ಷಣಾಧಿಕಾರಿ ಹುಸೇನ ಪೆಂಡಾರಿಗೆ ಸೂಚನೆ ನೀಡಿದರು.

ಕೃಷಿ ಸಂಬಂಧಿಸಿದ ಇಲಾಖೆಗಳು ಹಾಕಿಕೊಂಡ ಐದು ವರ್ಷಗಳ ಮಾಹಿತಿಯನ್ನು ಪಡೆದ ಜಿಲ್ಲಾಧಿಕಾರಿಗಳು. ಪೊಟೇಶನಲ್ ಜಿಐ ಟ್ಯಾಗ್ ಯಾವ ಉತ್ಪನ್ನ ನಮ್ಮ ಜಿಲ್ಲೆಯಲ್ಲಿದೆ. ಶ್ರೀ ಗಂಧ ಬೆಳೆಸುವವ-ರಿಗೆ ಜಿಲ್ಲೆಯಲ್ಲಿ ಪ್ರೊಮೋಟ ಮಾಡಿ.



ಯಾವುದೇ ಬೀಜ ಮತ್ತು ರಸಗೊಬ್ಬರಗಳ ಸಮಸ್ಯೆಗಳಾಗದಂತೆ ಕೃಷಿ ಇಲಾಖೆಯ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದರು.

ಪಶು ಸಂಗೋಪನೆ. ಹೈನುಗಾ-ರಿಕೆ. ಮೀನು ಗಾರಿಕೆ. ಕೋಳಿ ಸಾಕಾಣಿಕೆ. ರೇಷ್ಮೆ. ರೈಸ್ ಟೆಕ್ನಾಲಜಿ ಪಾರ್ಕ್ ಸೇರಿದಂತೆ ಇತರೆ ಕೃಷಿ ಸಂಬಂಧಿಸಿದ ಇಲಾಖೆಯ ವಿಷಯಗಳ ಕುರಿತು ಜಿಲ್ಲಾಧಿಕಾರಿಗಳು ಸಭೆಯಲ್ಲಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಸಭೆಯ ನಂತರ ಜಿಲ್ಲಾಧಿಕಾ-ರಿಗಳು ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ ಬಿಮಾ ಯೋಜನೆ ಕರಪತ್ರಗಳನ್ನು ಬಿಡುಗಡೆಗೊಳಿಸಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ. ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ. ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರುದ್ರೇಶಪ್ಪ ಟಿ. ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕೃಷ್ಣ ಉಕ್ಕುಂದ. ಉಪ ಅರಣ್ಯ ಸಂರಕ್ಷಣಾಧಿಕಾರಿ ಹುಸೇನ್ ಪೆಂಡಾರಿ ಸೇರಿದಂತೆ ಕೃಷಿ ಹಾಗೂ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೊಪ್ಪಳ ತಾಲೂಕಿನ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ




ಕೊಪ್ಪಳ : ರಾಜ್ಯ ಸರ್ಕಾರ ಜಾ-ರಿಗೆ ತಂದಿರುವ ಪಂಚ ಗ್ಯಾರಂಟಿಗಳನ್ನು ಸಮರ್ಪಕವಾಗಿ ಅನುಷ್ಠಾನಿಸಲು ಕೊಪ್ಪಳ ತಾಲೂಕ ಮಟ್ಟದ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯು ಅಧ್ಯಕ್ಷರಾದ ಬಾಲಚಂದ್ರನ್ ಎಸ್. ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ ಭಾಗ್ಯನಗರ ಪಟ್ಟಣ ಪಂಚಾಯತಿಯ ಸಭಾಂಗಣದಲ್ಲಿ ಜರುಗಿ-ತು. ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾಗುವ ಆಹಾರ ಧಾನ್ಯದ ಮಾಹಿತಿಯನ್ನು ಪಡಿತರ ಚೀಟಿದಾರರಿಗೆ ಹಾಗು ಗ್ಯಾರಂಟಿ ಸಮಿತಿ ಸದಸ್ಯರಿಗೆ ಮಾಹಿತಿ ನೀಡಬೇಕೆಂದು ಸದಸ್ಯರು ತಿಳಿಸಿದರು. ಸದಸ್ಯೆ ಜ್ಯೋತಿ ಗೊಂಡಬಾಳ ಮಾತನಾಡಿ, ಸಾರ್ವಜನಿಕ-ರಿಗೆ ಆಹಾರ ಧಾನ್ಯದ ಬಗ್ಗೆ ವ್ಯಾಪಕ ಜಾಗೃತಿ ಮೂಡಿಸಲು ಇಲಾಖಾಧಿಕಾರಿಗಳು ಹೆಚ್ಚಿನ ಕ್ರಮವಹಿಸಬೇಕೆಂದರು.

ಗ್ರಾಮೀಣ ಮಟ್ಟದಲ್ಲಿ ಸಾರ್ವಜನಿಕ-ರಿಗೆ ತೊಂದರೆಯಾಗದಂತೆ ಆಹಾರ ಧಾನ್ಯ ವಿತರಣೆಯಾಗಬೇಕು. ವಿನಾಕಾರಣ ಆಹಾರ ಧಾನ್ಯ ವಿತರಣಾ ಕೇಂದ್ರ ಬಂದ್ ಮಾಡಿ ಸಾರ್ವಜನಿಕರಿಗೆ ತೊಂದರೆ ಮಾಡುತ್ತಿರುವ ಪ್ರಕರಣಗಳು ಕಂಡು ಬಂದಲ್ಲಿ ನಿರ್ದಾಕ್ಷಿಣ್ಯ ಕ್ರಮ ಜರುಗಿಸಬೇಕೆಂದು ಅಧ್ಯಕ್ಷರು ಸೂಚಿಸಿದರು. ಎಲ್ಲಾ ನ್ಯಾಯ ಬೆಲೆ ಅಂಗಡಿಗಳಲ್ಲಿ ಆಹಾರ ಸಂಗ್ರಹಣೆ, ವಿತರಣೆ ಮತ್ತು ಆಹಾರ ಧಾನ್ಯ ಉಳಿದಿರುವ ಮಾಹಿತಿಯುಳ್ಳ ನಾಮಫಲಕಗಳನ್ನು ಅಳವಡಿಸಿಲ್ಲವೆಂದು ಸದಸ್ಯರು ಸಭೆಯಲ್ಲಿ ತಿಳಿಸಿದಾಗ ಅಧ್ಯಕ್ಷರು ಕೂಡಲೇ ಅಳವಡಿಸಲು ಕ್ರಮವಹಿ ಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಗೃಹಲಕ್ಷ್ಮೀ ಯೋಜನೆಯ ಕುರಿತು ಜವಳಿ ಇಲಾಖೆಯಲ್ಲಿ ಉದ್ದಿಮೆ ಪರವಾನಿಗೆ ಪಡೆಯಲು ಜಿ.ಎಸ್.ಟಿ ಹೊಂದಿದ ಬಡ ನೇಕಾರರಿಗೆ ಗೃಹಲಕ್ಷ್ಮಿ ಸೌಲಭ್ಯ ಕಲ್ಪಿಸಲು ಅವಕಾಶ ಇರುವುದಿಲ್ಲವೆಂದು ಭಾಗ್ಯನಗರ ಪಟ್ಟಣ ಪಂಚಾಯತ ಉಪಾಧ್ಯಕ್ಷರಾದ ಹೊನ್ನೂರಸಾಬ ಬೈರಾಪುರ ಸಭೆಗೆ ವಿವ-ರಿಸಿದರು. ಜಿಎಸ್‌ಟಿ ಹೊಂದಿರುವವ-ರಿಗೆ ಗೃಹಲಕ್ಷ್ಮಿ ಸೌಲಭ್ಯ ಪಡೆಯಲು ಅರ್ಹರಲ್ಲವೆಂದು ಇಲಾಖಾಧಿಕಾರಿಗಳು ವಿವ-ರಿಸಿದರು. ತಾಂತ್ರಿಕ ಸಮಸ್ಯೆಯಿಂದ ಫೆಬ್ರುವರಿ, ಮಾರ್ಚ್ ಮಾಹೆಯ ಗೃಹಲಕ್ಷ್ಮಿ ಹಣ ಜಮೆಯಾಗಿರುವುದಿಲ್ಲವೆಂದು ಇಲಾಖಾಧಿ ಕಾರಿಗಳು ಸಭೆಯಲ್ಲಿ ಗಮನಕ್ಕೆ ತಂದರು. ಅನಧಿಕೃತವಾಗಿ ಅಕ್ಕಿ ಖರೀದಿದಾರರ ಮೇಲೆ ಎಫ್.ಐ.ಆರ್ ದಾಖಲಿಸಲು ಸಭೆಯಲ್ಲಿ ಅಧ್ಯಕ್ಷರು ಆಹಾರ ಇಲಾಖಾಧಿಕಾರಿಗಳಿಗೆ ನಿರ್ದೇಶಿಸಿದರು.

ಯುವನಿಧಿ ಫಲಾನುಭವಿಗಳು ಪ್ರತಿ ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಮಾಡುವುದು ಕಡ್ಡಾಯವಾಗಿತ್ತು. ಸ್ವಲ್ಪ ಬದಲಾವಣೆ ಮಾಡಿ ಪ್ರತಿ 3 ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಕೊಪ್ಪಳ ತಾಲೂಕ ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಭಾಗ್ಯನಗರ ಪಟ್ಟಣ ಪಂಚಾಯತಿ ಅಧ್ಯಕ್ಷರಾದ ತುಕಾರಾಮಪ್ಪ ಗಡಾದ, ಉಪಾಧ್ಯಕ್ಷರಾದ ಹೊನ್ನೂರಸಾಬ ಬೈರಾಪುರ, ಸ್ಥಾಯಿ ಸಮಿತಿ ಅಧ್ಯಕ್ಷರಾದ ಶಿವರಾಮ, ಸಮಿತಿ ಸದಸ್ಯರಾದ ದೇವರಾಜ ನಡುವಿನಮನಿ, ರಾಮಣ್ಣ ಚೌಡ್ಕಿ, ರಮೇಶ ಹ್ಯಾಟಿ, ಸವಿತಾ ಗೊರಂಟ್ಲಿ, ಅನ್ನದಾನಯ್ಯಸ್ವಾಮಿ, ಮೆಹಬೂಬಪಾಷಾ ಮಾನ್ವಿ, ಅನ್ವರ್ ಹುಸೇನ್ ಗಡಾದ, ಪರಶುರಾಮ ಕೊರವರ, ಧರ್ಮರಾಜರಾವ್, ಲಕ್ಷ್ಮಣ ಡೊಳ್ಳಿನ ಸೇರಿದಂತೆ ಪಂಚ ಗ್ಯಾರಂಟಿ ಯೋಜನೆಗಳ ಇಲಾಖಾಧಿಕಾರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಹಾಜ-ರಿದ್ದರು.

## ಡಾ. ಫ.ಗು. ಹಳಕಟ್ಟಿ ಜಯಂತಿ ಕಾರ್ಯಕ್ರಮ

ಕಾರವಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಂ-ಮುಕ್ತ ಆಶ್ರಯದಲ್ಲಿ ಡಾ. ಫ.ಗು. ಹಳಕಟ್ಟಿಯವರ ಜಯಂತಿಯನ್ನು ಜು.2 ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಮೀನುಗಾ-ರಿಗೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಉದ್ಘಾಟಿಸಲಿದ್ದು, ಕರ್ನಾಟಕ ಮಾರ್ಕೇಟಿಂಗ್ ಕನ್ಸಲ್ಟೆಂಟ್ ಅಂಡ್ ಏಜೆನ್ಸಿಸ್ ಅಧ್ಯಕ್ಷ ಸತೀಶ ಕೆ. ಸೈಲ್ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ ದೇಶಪಾಂಡೆ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕರಾದ ಶಿವರಾಮ ಹೆಬ್ಬಾರ್, ದಿನಕರ ಕೆ. ಶೆಟ್ಟಿ, ಭೀಮಣ್ಣ ಟಿ. ನಾಯ್ಕ, ವಿಧಾನ ಪರಿಷತ್ ಶಾಸಕರಾದ ಎಸ್. ವಿ.ಸಂಕನೂರು, ಶಾಂತಾರಾಮ ಬುಡ್ನ ಸಿದ್ದಿ, ಗಣಪತಿ ಡಿ.ಉಳ್ವೇಕರ ಹಾಗೂ ನಗರಸಭೆ ಅಧ್ಯಕ್ಷ ರವಿರಾಜ ಚಂದ್ರಹಾಸ ಅಂಕೋಲೇಕರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸತೀಶ ನಾಯ್ಕ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

## ಎಸ್.ಎಸ್.ಎಲ್.ಸಿ ಪರೀಕ್ಷೆ-3 ವ್ಯವಸ್ಥಿತವಾಗಿರಲಿ: ಅಪರ ಜಿಲ್ಲಾಧಿಕಾರಿ

ಕಾರವಾರ, -ಜಿಲ್ಲೆಯಲ್ಲಿ ಜುಲೈ 5 ರಿದ 11 ರ ವರೆಗೆ ನಡೆಯುವ ಎಸ್. ಎಸ್.ಎಲ್.ಸಿ-3 ಪರೀಕ್ಷೆಗಳನ್ನು ಪರೀಕ್ಷಾ ಮಾರ್ಗಸೂಚಿಗಳನ್ವಯ ಅತ್ಯಂತ ವ್ಯವಸ್ಥಿತವಾಗಿ ನಡೆಯಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ತಿಳಿಸಿದರು. ಅವರು ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಎಸ್.ಎಸ್.ಎಲ್.ಸಿ-3 ಪರೀಕ್ಷೆಗೆ ಜಿಲ್ಲೆಯಿಂದ ಒಟ್ಟು 2609 ವಿದ್ಯಾರ್ಥಿಗಳು ಹಾಜರಾಗುತ್ತಿದ್ದು, ಇದಕ್ಕಾಗಿ 12 ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದ್ದು, ಈ ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಸಿಸಿಟಿವಿ ಅಳವಡಿಕೆ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸುವಂತೆ ತಿಳಿಸಿದ ಅವರು, ಪರೀಕ್ಷೆಗೆ ನೊಂದಣಿ ಮಾಡಿಕೊಂಡಿರುವ ಪ್ರತಿಯೊಬ್ಬ ವಿದ್ಯಾರ್ಥಿಯು ಪರೀಕ್ಷೆಗೆ ಹಾಜರಾಗುವ ಕುರಿತಂತೆ ವೈಯಕ್ತಿಕವಾಗಿ ಸಂಪರ್ಕಿಸಿ, ಅವರನ್ನು ಪ್ರೇರೇಪಿಸುವಂತೆ ಮತ್ತು



ಅವರು ಉತ್ತೀರ್ಣರಾಗುವ ನಿಟ್ಟಿನಲ್ಲಿ ಅಗತ್ಯ ತರಬೇತಿ ಮತ್ತು ಮಾರ್ಗದರ್ಶನ ನೀಡುವ ಮೂಲಕ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯ ಕುಂಠಿತವಾಗದಂತೆ ಕಾಳಜಿ ವಹಿಸಿ ಎಂದು ಸೂಚಿಸಿದರು.

ಪ್ರಶ್ನೆ ಪತ್ರಿಕೆ ಮತ್ತು ಉತ್ತರ ಪತ್ರಿಕೆಗಳ ಸಾಗಾಣಿಕೆ ಸಂದರ್ಭದಲ್ಲಿ ಮತ್ತು ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಸೂಕ್ತ ಪೊಲೀಸ್ ಭದ್ರತೆ ಒದಗಿಸುವಂತೆ ಮತ್ತು ಆರೋಗ್ಯ ಇಲಾಖೆಯ ಸಿಬ್ಬಂದಿಯನ್ನು ನಿಯೋಜಿಸುವಂತೆ ತಿಳಿಸಿದ ಅವರು ಮೇಲ್ವಿಚಾರಕರು ಮತ್ತು ಕಸ್ಟೋಡಿಯನ್ ಗಳನ್ನು ನೇಮಕ ಮಾಡುವಂತೆ ತಿಳಿಸಿದರು.

ಎಸ್.ಎಸ್.ಎಲ್.ಸಿ-3 ಪರೀಕ್ಷೆಯು ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಉತ್ತೀರ್ಣರಾಗಲು ಮತ್ತು ತಮ್ಮ ವಿದ್ಯಾಭ್ಯಾಸವನ್ನು ಮುಂದುವರೆಸಲು ಈ ಬಾರಿಯ ಕೊನೆಯ ಅವಕಾಶವಾಗಿದ್ದು, ಇದರ ಮಹತ್ವದ ಬಗ್ಗೆ ವಿದ್ಯಾರ್ಥಿಗಳಿಗೆ ಮತ್ತು ಅವರ ಪೋಷಕರಿಗೆ ಅರಿವು ಮೂಡಿಸುವಂತೆ ತಿಳಿಸಿದ ಅವರು, ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಿರುವ ಅಧಿಕಾ-ರಿಗಳು ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷ್ಯತನ ತೋರದೇ, ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸುವಂತೆ ಸೂಚಿಸಿದರು.

ಸಭೆಯಲ್ಲಿ ಡಿಡಿಪಿಐ ಲತಾ ನಾಯಕ್, ಡಿವೈಎಸ್ಪಿ ಗಿರೀಶ್ ಹಾಗೂ ಆನ್ ಲೈನ್ ಮೂಲಕ ಶಿರಸಿ ವಿಭಾಗದ ಡಿಡಿಪಿಐ ಮತ್ತು ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಿರುವ ಅಧಿಕಾರಿಗಳು ಹಾಜರಿದ್ದರು.

## ಕರ್ನಾಟಕ ವಾಲ್ಮೀಕಿ ಪರಿಶಿಷ್ಟ ಪಂಗಡದ ರಾಜ್ಯ ಉಪಾಧ್ಯಕ್ಷರಾಗಿ ಮಲ್ಲಿಕಾರ್ಜುನ್ ಹೆಗ್ಗನಾಯಕ ಆಯ್ಕೆ

ಬೆಳಗಾವಿ: ಕರ್ನಾಟಕ ವಾಲ್ಮೀಕಿ ಪರಿಶಿಷ್ಟ ಪಂಗಡ ರಾಜ್ಯ ಯುವ ಘಟಕದ (ರಿ) ರಾಜ್ಯ ಉಪಾಧ್ಯಕ್ಷರಾಗಿ ಸಾಮಾಜಿಕ ಕಾರ್ಯಕರ್ತ ಮಲ್ಲಿಕಾರ್ಜುನ್ ಹೆಗ್ಗನಾಯಕ ಅವರನ್ನು ಆಯ್ಕೆ ಮಾಡಲಾಗಿರುತ್ತದೆ.

ಮಲ್ಲಿಕಾರ್ಜುನ್ ಹೆಗ್ಗನಾಯಕ ಅವರು ಸಾಮಾಜಿಕ ಕಾರ್ಯಕರ್ತಾಗಿದ್ದು, ಅನೇಕ ಸಮಾಜದ ಅಭಿವೃದ್ಧಿ ಚಟುವಟಿ-ಕೆಗಳಲ್ಲಿ ತೊಡಗಿಸಿಕೊಂಡಿರುತ್ತಾರೆ.

ಪ್ರಸ್ತುತ “ಸಮರ್ಥನಾಡು ಪ್ರಾದೇಶಿಕ ಕನ್ನಡ ದಿನಪತ್ರಿಕೆ” ಸಂಪಾದಕರಾಗಿದ್ದು, ಇವರನ್ನು ಕರ್ನಾಟಕ ವಾಲ್ಮೀಕಿ ಪರಿಶಿಷ್ಟ ಪಂಗಡ ರಾಜ್ಯ ಯುವ ಘಟಕದ (ರಿ) ರಾಜ್ಯ ಪ್ರಚಾರ ಕಾರ್ಯದರ್ಶಿಯಾಗಿ ಆಯ್ಕೆ ಮಾಡಲಾಗಿರುತ್ತದೆ ಎಂದು ಕರ್ನಾಟಕ ವಾಲ್ಮೀಕಿ ಪರಿಶಿಷ್ಟ ಪಂಗಡ ರಾಜ್ಯ ಯುವ ಘಟಕದ (ರಿ) ರಾಜ್ಯಾಧ್ಯಕ್ಷ ಮಹೇಶ್ ಶಿಗಿಹಳ್ಳಿ ತಿಳಿಸಿದ್ದಾರೆ.



# ಮುಂಗಾರು ಹಂಗಾಮಿಗೆ ವಿವಿಧ ಕಾಲುವೆಗಳಿಗೆ ನೀರು ಹರಿಸಲು ನಿರ್ಧಾರ

ಕೊಪ್ಪಳ : ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ 2025-26ನೇ ಸಾಲಿನ 124ನೇ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ತುಂಗಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ಮುಂಗಾರು ಹಂಗಾಮಿಗೆ ಜಲಾಶಯದಲ್ಲಿ ಲಭ್ಯವಾಗಬಹುದಾದ ನೀರಿನ ಪ್ರಮಾಣವನ್ನು ಅಂದಾಜಿಸಿ ವಿವಿಧ ಕಾಲುವೆಗಳಿಗೆ ನೀರು ಹರಿಸಲು ನಿರ್ಧ-ರಿಸಲಾಗಿರುತ್ತದೆ.

ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆಗೆ ಜುಲೈ 2 ರಿಂದ ಜು. 15ರ ವರೆಗೆ ಸರಾಸರಿ 2000 ಕ್ಯೂಸೆಕ್ಸ್ ನಂತೆ, ಜು. 16 ರಿಂದ ಜು. 31ರ ವರೆಗೆ 3000 ಕ್ಯೂಸೆಕ್ಸ್ ನಂತೆ ಮತ್ತು ಆಗಸ್ಟ್ 1 ರಿಂದ ನವೆಂಬರ್ 30ರ ವರೆಗೆ 4100 ಕ್ಯೂಸೆಕ್ಸ್‌ನಂತೆ ಅಥವಾ ಈ ಕಾಲುವೆಯಡಿ ನೀರು ಲಭ್ಯತೆಯು ಇರುವವರೆಗೆ ಮಾತ್ರ ನೀರು ಹರಿಸಲು ನಿರ್ಧರಿದ್ದು, ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ.

ತುಂಗಭದ್ರಾ ಬಲದಂಡೆ ಮೇಲ್ಮಟ್ಟದ ಕಾಲುವೆಗೆ ಜು. 10 ರಿಂದ ಜು. 31ರ ವರೆಗೆ ಸರಾಸರಿ 700 ಕ್ಯೂಸೆಕ್ಸ್ ನಂತೆ ಮತ್ತು ಆಗಸ್ಟ್ 1 ರಿಂದ ನವೆಂಬರ್ 30ರ ವರೆಗೆ 1300 ಕ್ಯೂಸೆಕ್ಸ್‌ನಂತೆ ಅಥವಾ ಈ ಕಾಲುವೆಯಡಿ ನೀರು ಲಭ್ಯತೆಯು ಇರುವವರೆಗೆ ಮಾತ್ರ ನೀರು ಹರಿಸಲು ನಿರ್ಧರಿದ್ದು, ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ.

ತುಂಗಭದ್ರಾ ಬಲದಂಡೆ ಕೆಳಮಟ್ಟದ ಕಾಲುವೆಗೆ ಜು. 10 ರಿಂದ ಜು. 31 ರವರೆಗೆ ಸರಾಸರಿ 500 ಕ್ಯೂಸೆಕ್ಸ್ ನಂತೆ ಮತ್ತು ಆಗಸ್ಟ್ 1 ರಿಂದ ನವೆಂಬರ್ 30ರ ವರೆಗೆ 650 ಕ್ಯೂಸೆಕ್ಸ್‌ನಂತೆ ಅಥವಾ ಈ ಕಾಲುವೆಯಡಿ ನೀರು ಲಭ್ಯತೆಯು ಇರುವವರೆಗೆ ಮಾತ್ರ ನೀರು ಹರಿಸಲು ನಿರ್ಧರಿದ್ದು, ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ.

ರಾಯ ಬಸವಣ್ಣ ಕಾಲುವೆಗೆ ಜೂನ್ 1 ರಿಂದ ನವೆಂಬರ್ 30ರ ವರೆಗೆ ಸರಾಸರಿ 220 ಕ್ಯೂಸೆಕ್ಸ್‌ನಂತೆ ಅಥವಾ ಈ ಕಾಲುವೆಯಡಿ ನೀರು ಲಭ್ಯತೆಯು ಇರುವವರೆಗೆ ಮಾತ್ರ ನೀರು ಹರಿಸಲು ನಿರ್ಧರಿದ್ದು, ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ.

ತುಂಗಭದ್ರಾ ಎಡದಂಡೆ ಮೇಲ್ಮಟ್ಟದ ಕಾಲುವೆಗೆ ಜುಲೈ 1 ರಿಂದ 25 ಕ್ಯೂಸೆಕ್ಸ್‌ನಂತೆ ಅಥವಾ ಜಲಾಶಯದ ನೀರಿನ ಮಟ್ಟ 1585 ಅಡಿಗಳವರೆಗೆ ನೀರು ಹರಿಸಲು ನಿರ್ಧ-ರಿದ್ದು, ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ. ನದಿಗೆ ಪೂರಕ ಸುಮಾರು 150 ಕ್ಯೂಸೆಕ್ಸ್‌ನಂತೆ ನದಿ ಪೂರಕಕಾರ್ಖಾನೆ ಒಳಗೊಂಡಂತೆ ನೀರು ಹರಿಸಲು ನಿರ್ಧರಿದ್ದು, ನೀರಿನ ಲಭ್ಯೆತೆಯನ್ನು ಆಧರಿಸಿ ನಿಂತ ಬೆಳಗಳನ್ನು ಸಂರಕ್ಷಿಸಲಾಗುವುದು.

ರೈತ ಭಾಂದವರಲ್ಲಿ ಮನವಿ: ತುಂಗಭದ್ರಾ ಜಲಾಶಯದಲ್ಲಿ ಲಭ್ಯವಿರುವ ನೀರನ್ನು ಮಿತವ್ಯಯವಾಗಿ ಬಳಸಿ ಅಧಿಕೃತ ಅಚ್ಚುಕಟ್ಟು ಪ್ರದೇಶದಲ್ಲಿ ನಿಗಧಿತ ಬೆಳೆಗಳನ್ನು ಮಾತ್ರ ಬೆಳೆಯಲು ಹಾಗೂ ಸಮರ್ಪಕ ನೀರು ನಿರ್ವಹಣೆಗೆ ಇಲಾಖೆಯೊಡನೆ ಸಹಕರಿಸಲು ರೈತ ಭಾಂದವರಲ್ಲಿ ಕೋರಲಾಗಿದೆ. ರೈತರು ಅನಧಿಕೃತವಾಗಿ ನೀರು ಪಡೆದು ಭತ್ತ/ಇತರೆ ಬೆಳೆಗಳನ್ನು ಬೆಳೆದಲ್ಲಿ ನೀರಾವರಿ ಕಾಯ್ದೆಯನ್ವಯ ಕಾನೂನು ಕ್ರಮ ಜರುಗಿಸಲಾಗುವುದು.

ಪ್ರಸಕ್ತ ಸಾಲಿನ 223ನೇ ತುಂಗಭದ್ರಾ ಮಂಡಳಿ ಸಭೆಯಲ್ಲಿ ಜಲಾಶಯದಲ್ಲಿ 80 ಟಿ.ಎಂ.ಸಿ ಯಷ್ಟು ನೀರನ್ನು ಮಾತ್ರ ಸಂಗ್ರಹಣೆ ಮಾಡಲು ನಿರ್ಧ-ರಿಸಿರುವುದರಿಂದ ಹಾಗೂ ಪ್ರಸ್ತುತ ತುಂಗಭದ್ರಾ ಜಲಾಶಯಕ್ಕೆ ಮುಂಬರುವ ದಿನಗಳಲ್ಲಿ ಹ-ರಿದು ಬರುವ ಒಳಹರಿವಿನ ಪ್ರಮಾಣದ ಮೇಲೆ ಆವಲಂಬಿತವಾಗಿದ್ದು, ಮುಂದೆ ಒಳ ಹರಿವಿನ ಪ್ರಮಾಣದಲ್ಲಿ ಕೊರತೆ ಉಂಟಾದಲ್ಲಿ ಪರಿಷ್ಕೃತ ಪ್ರಕಟಣೆಯನ್ನು ಪ್ರಕಟಿಸಲಾಗುವುದು ಎಂದು ತುಂಗಭದ್ರಾ ಯೋಜನಾ ವೃತ್ತ ಮುನಿರಾಬಾದ್‌ನ ಅಧೀಕ್ಷಕ ಅಭಿಯಂತರರು ಹಾಗೂ ತುಂಗಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿ ಎಲ್.ಬಸವರಾಜ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವ ಸ್ಪಂದನ ಅರಿವು ಕಾರ್ಯಕ್ರಮ



ಬೆಳಗಾವಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಯುವ ಸ್ಪಂದನ ಕೇಂದ್ರ ಬೆಳಗಾವಿ ಸಹಯೋಗದಲ್ಲಿ ಜುಲೈ 1, 2025 ರಂದು ಬೆಳಗಾವಿ ಜಿಲ್ಲೆಯ ಕಾಕತಿ ಗ್ರಾಮದ ಡಾ. ಬಿ ಆರ್ ಅಂಬೇಡ್ಕರ್ ವಸತಿ ಶಾಲೆಯಲ್ಲಿ ಯುವ ಸ್ಪಂದನ ಅರಿವು ಕಾರ್ಯಕ್ರಮ ನೆರವೇರಿಸಲಾಯಿತು.

ಬೆಂಗಳೂರಿನ ನಿಮ್ಹಾನ್ಸ್ ನಿಂದ ಕ್ಷೇತ್ರ ಸಮನ್ವಯ ಅಧಿಕಾರಿಯಾದ ನಾಗರಾಜ್ ಅವರು ಆಗಮಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾನಸಿಕ ಹಾಗೂ ದೈಹಿಕ ಆರೋಗ್ಯದ ಕುರಿತು ಹಾಗೂ ಯುವ ಸ್ಪಂಧನ ಕಾರ್ಯಕ್ರಮದ ಬಗ್ಗೆ ಮಾತನಾಡಿದರು ಈ ಕಾರ್ಯಕ್ರಮದಲ್ಲಿ ಖಇಅ & ಆಠಭಿಣಟಟಚಿಣುಂಟ ಅಧಿಕಾರಗಳಾದ ವಿನಯ್ ಹಾಗೂ ಕ್ಷೇತ್ರ ಸಂಪರ್ಕ ಅಧಿಕಾರಿಗಳಾ ಅನೀಲ್, ಯುವ ಸಮಾಲೋಚಕರಾದ ಕುಮಾರ ಖೋತ್, ಜಿಲ್ಲೆಯ ಯುವ ಪರಿವರ್ತಕರು, ಶಾಲೆಯ ಪ್ರಾಂಶುಪಾಲರಾದ ಉಮೇಶ ಸುಬೇದಾರ್ ಹಾಗೂ ಶಿಕ್ಷಕ ವೃಂದವರು ಭಾಗವಹಿಸಿದ್ದರು. ಸುಮಾರು 200 ಜನ ವಿದ್ಯಾರ್ಥಿಗಳು ಈ ಕಾರ್ಯಕ್ರಮದ ಪ್ರಯೋಜನ ಪಡೆದರು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತ ಭಾಂದವರ ಗಮನಕ್ಕೆ

ಬೆಳಗಾವಿ, : ಬೆಳಗಾವಿ ಜಿಲ್ಲೆಯ ಮುಂಗಾರು ಹಂಗಾಮಿನಲ್ಲಿ ಪ್ರಮುಖ ಬೆಳೆಗಳಾದ ಸೊಯಾಬಿನ್, ಹೆಸರು, ಹತ್ತಿ ಬೆಳೆಯಲ್ಲಿ ಪೀಡೆ ಸರ್ವೇಕ್ಷಣಾತಂಡವು ಜಿಲ್ಲೆಯ ವಿವಿಧ ತಾಲೂಕಿನ ಹಳ್ಳಿಗಳಲ್ಲಿ ಭೇಟಿ ನೀಡಿ ಸೋಯಾ, ಅವರೆ, ಹೆಸರು, ಉದ್ದು ಗೋವಿನಜೋಳ, ಹತ್ತಿ ಹಾಗೂ ಕಬ್ಬು ಬೆಳೆಗಳಲ್ಲಿ ಕಂಡು ಬಂದ ಕೀಟ ಮತ್ತು ರೋಗಗಳಿಗೆ ಸಮಗ್ರ ಪೀಡೆ ನಿರ್ವಹಣೆ ತಾಂತ್ರಿಕತೆಗಳನ್ನು ಅನುಸರಿಸಲು ತಿಳಿಸಲಾಗಿದೆ.

**ಸೋಯಾ ಅವರೆ :** 1. ಕಾಂಡಕೊರೆಯುವ ನೊಣದ ಬಾಧೆಕಂಡು ಬಂದಿದ್ದು, ಪ್ರತಿ ಲೀಟರ್ ನೀರಿಗೆ 0.3 ಗ್ರಾಂಥಯಾಮಿಥಾಕ್ಸಾಮ್ 25 ಡಬ್ಲ್ಯೂ.ಜಿ.ಅಥ-ವಾ ಸಂಯುಕ್ತ ಕೀಟನಾಶಕಗಳಾದ ಥಯಾಮಿಥ-ಾಕ್ಸಾಮ್12.6% + ಲ್ಯಾಮ್ಡಾ ಸೈಹೆಲೋಥ್ರೀನ್ 9.5% 20 ಎಫ್.ಎಸ್. ಪ್ರತಿ ಲೀಟರ ನೀರಿಗೆ 0.25 ಮಿಲೀ ಬೆರೆಸಿ ಸಿಂಪಡಿಸಬೇಕು.

2. ಸ್ಪೊಡಾಪ್ಟರಾ/ಹೆಲಿಕೊವರ್ಪಾ ಎಲೆ ತಿನ್ನುವ ಕೀಟಗಳ ನಿರ್ವಹಣೆಗೆ 0.2 ಮಿಲೀ. ಕ್ಲೊಯಾರ್ಂಟ್ರನಿಲಿಪ್ರೊಲ್ 18.5 ಎಸ್. ಸಿ. ಅಥ-ವಾ 0.5 ಮಿಲೀ. ಲ್ಯಾಮ್ಡಾ ಸೈಹೆಲೋಥ್ರೀನ್ಅಥವಾ 2 ಗ್ರಾಂ ಮೆಟರೈಜಿಯಂರಿಲೈ ಶಿಲೀಂದ್ರವನ್ನು ಪ್ರತಿ ಲೀಟರ ನೀರಿಗೆ ಬೆರೆಸಿ ಸಿಂಪಡಿಸಬೇಕು. ಪ್ರತಿಎಕರೆಗೆ 6 ಲಿಂಗಾಕರ್ಷಕ ಮೋಹಕ ಬಲೆಗಳನ್ನು ಬೆಳೆಯ ಒಂದುಅಡಿಗಿಂತಎತ್ತರದಲ್ಲಿನೇತುಹಾಕಬೇಕು.

ಕೀಟ ನಿರ್ವಹಣೆಜೊತೆಗೆ ಪ್ರತಿ ಲೀಟರ ನೀರಿಗೆ 5 ಗ್ರಾಂ ನೀರಿನಲ್ಲಿಕರಗುವಎನ್‌ಪಿಕೆ ರಸಗೊಬ್ಬರಗಳಾದ 19:19:19 ಅಥವಾ 13:0:45 ಗಳನ್ನು ಬಳಸಬೇಕು.

**ಹೆಸರು:** ಹೆಸರು ಬೆಳೆಗೆ ಎಲೆ ತಿನ್ನುವಕೀಟದ ಹಾವಳಿ ಕಂಡುಬಂದಿದ್ದು, ಪ್ರತಿ ಲೀಟರ ನೀರಿಗೆ 0.2 ಮಿಲೀ ಕ್ಲೊಯಾರ್ಂಟ್ರನಿಲಿಪ್ರೊಲ್ 18.5 ಎಸ್. ಸಿ. ಅಥವಾ 0.5 ಮಿಲೀ. ಪ್ಲೂ ಬೆಂಡಿ ಮೈಡ್ 20% ಡಬ್ಲ್ಯೂ.ಜಿ 25 ಡಬ್ಲ್ಯೂ.ಜಿ. ಕೀಟನಾಶಕಗಳನ್ನು ಪ್ರತಿ ಲೀಟರ ನೀರಿಗೆ ಬೆರೆಸಿ ಸಿಂಪಡಿಸಬೇಕು. ಚಿಬ್ಬುರೋಗಕಂಡು ಬಂದಲ್ಲಿಒಂದು ಮಿಲೀ. ಹೆಕ್ಸಾಕೊನೊಜೊಲ್ 5 ಇ.ಸಿ. ಶಿಲೀಂದ್ರನಾಶಕವನ್ನು ಪ್ರತಿ ಲೀಟರ ನೀರಿಗೆ ಬೆರೆಸಿ ಸಿಂಪಡಿಸುವುದು. ಕಬ್ಬಿನ ಪೋಷಕಾಂಶಕೊರತೆಯನ್ನು ನಿರ್ವಹಿಸಲು ಫೆರಸ್‌ಸಲ್ಫೇಟ್(ಇಡಿಟಿಎ) 0.5 ಗ್ರಾಂ ಪ್ರತಿ ಲೀಟರಿಗೆ ಬೆರೆಸಿ ಬಳಸುವುದು.

**ಕಬ್ಬು :** ಕಬ್ಬು ಬೆಳೆಯಲ್ಲಿ ವಿಕೃತ ಕೊಳೆ ರೋಗಕಂಡು ಬಂದಿದ್ದು, ರೈತ ಬಾಂಧವರು ಸಂಂ-ಮುಕ್ತ ಶಿಲೀಂದ್ರನಾಶಕ ಅಜೊಕ್ಸಿಸ್ಟ್ರೋಬಿನ್ 18.2% + ಡೈಫೆನ್‌ಕೊನೊಜೊಲ್ 11.4 ಎಸ್.ಸಿ. ಪ್ರತಿ ಲೀಟರ ನೀರಿಗೆಒಂದು ಮಿಲೀ ಜೊತೆಗೆ5 ಗ್ರಾಂಡಿಎಪಿ ಬೆರೆಸಿ ಸಿಂಪಡಿಸಬೇಕು. ಒಂದುಎಕರೆ ಪ್ರದೇಶಕ್ಕೆಕನಿಷ್ಠ 150 ರಿಂದ 200 ಲೀಟರ ಸಿಂಪರಣಾ ದ್ರಾವಣ ಬಳಸಬೇಕು. ಸಿಂಪರಣೆ ಮಾಡುವವರುತಪ್ಪದೇರಕ್ಷಾ ಕವಚ ಧರಿಸಬೇಕು.

ಬಿಳಿ ಉಣ್ಣೆ ಸಮಗ್ರ ನಿರ್ವಹಣೆಗೆ ಸಾರಜನಕಂ ಮುಕ್ತರಸಗೊಬ್ಬರವನ್ನು ಸಮತೋಲನ ಪ್ರಮಾಣದಲ್ಲಿ ಬಳಸುವುದು. ಗದ್ದೆಯಲ್ಲಿ ನೀರು ನಿಲ್ಲದೆ ಬಸಿದು ಹೋಗುವಂತೆ ವ್ಯವಸ್ಥೆಮಾಡುವುದು. ಪ್ರತಿ ಲೀಟರ ನೀರಿಗೆ 1 ಗ್ರಾಂ ಅಸಿಫೆಟ್ 75 ಡಬ್ಲೂಪಿ ಅಥ-ವಾ 2ಮಿಲೀ. ಕ್ಲೋರ್‌ಪೈರಿಫಾಸ್ 20ಇ. ಸಿ. ಕೀಟನಾಶಕವನ್ನು ಬೆರೆಸಿ ಸಿಂಪಡಿಸಬೇಕು. ಪ್ರತಿ-ಎಕರೆಗೆ ಸುಮಾರು 400 ಲೀಟರ ಸಿಂಪರಣಾ ದ್ರಾವಣ ಬೇಕಾಗುತ್ತದೆ. ಕಬ್ಬಿನ ಗರಿಗಳನ್ನುದನಕರುಗಳಿಗೆ ಮೇವಾಗಿ ಬಳಸಬಾರದು.

**ಗೋವಿನ ಜೋಳ :** ಗೋವಿನ ಜೋಳದಲ್ಲಿ ಚುಕ್ಕೆ ಲದ್ದಿ ಹುಳು ಕಂಡುಬಂದಿದ್ದು, ನಿಯಂತ್ರಣಕ್ಕೆ 0.5 ಮಿಲೀ. ಸ್ಪೈನೊಟೆರಾಂ 11.7 ಎಸ್. ಸಿ. ಅಥವಾ 0.2 ಮಿಲೀ ಕ್ಲೊಯಾರ್ಂಟ್ರನಿಲಿಪ್ರೊಲ್ 18.5 ಎಸ್. ಸಿ. ಪ್ರತಿ ಲೀಟರ ನೀರಿಗೆ ಬೆರೆಸಿ ಬೆಳೆಯ ಸುಳಿಗೆ ಬೀಳುವಂತೆ ಸಿಂಪಡಿಸಬೇಕು.

**ಹತ್ತಿ ಬೆಳೆ :** ಈ ಬೆಳೆಯಲ್ಲಿ ರಸಹೀರುವಕೀಟದ ಬಾದೆಕಂಡು ಬಂದಿದ್ದುಇದಕ್ಕೆ 0.3 ಥಯಾಮಿಥ-ಾಕ್ಸಾಮ 25 ಡಬ್ಲೂ ಬಿ ಕೀಟನಾಶಕವನ್ನು ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು. ಬೆಳೆಗಳಿಗೆ ಸಸ್ಯ ಸಂರಕ್ಷಣಾ ಕ್ರಮಗಳನ್ನು ಜರುಗಿಸಿ ಬೆಳೆ ಸಂರಕ್ಷಿಸಲು ಶ್ರೀ. ಎಚ್.ಡಿ. ಕೋಳೇಕರ, ಜಂಟಿ ಕೃಷಿ ನಿರ್ದೇಶಕರು, ಬೆಳಗಾವಿ ಇವರುರೈತ ಬಾಂಧವರಲ್ಲಿಕೋರಿರುತ್ತಾರೆ.

ಹೆಚ್ಚಿನ ಮಾಹಿತಿಗೆಹತ್ತಿರದರೈತ ಸಂಪರ್ಕಕೇಂದ್ರಅಥವಾ ಸಹಾಯಕ ಕೃಷಿ ನಿರ್ದೇಶಕರ ಕಛೇ-ರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆಂಪೇಗೌಡ ಜಯಂತಿ ಪ್ರಯುಕ್ತ ವಿವಿಧ ಸ್ಪರ್ಧೆ: ವಿಜೇತರಿಗೆ ಬಹುಮಾನ ವಿತರಣೆ

ಕಾರವಾರ. ನಾಡ ಪ್ರಭು ಕೆಂಪೇಗೌಡ ಜಯಂತಿ ಆಚರಣೆಯ ಪೂರ್ವಭಾವಿಯಾಗಿ ಜೂನ್ 26 ರಂದು ಕಾರವಾರದ ಹಿಂದೂ ಪ್ರೌಢ ಶಾಲೆಯಲ್ಲಿ ಆಯೋಜಿಸಲಾದ ಕಾರವಾರ ತಾಲೂಕಿನ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ 4 ವಿವಿಧ ಸ್ಪರ್ಧೆಗಳ (ಪ್ರಬಂಧ, ಚಿತ್ರಕಲೆ, ಆಶುಭಾಷಣ, ಕವನವಾಚನ) ಸ್ಪರ್ಧಾ ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಮಂಗಲಾ ನಾಯ್ಕ ಉದ್ಘಾಟಿಸಿದರು.

ಸ್ಪರ್ಧಾ ವಿಜೇತರಿಗೆ ಜೂನ್ 27 ರಂದು ಜಿಲ್ಲಾಧಿಕಾ–ರಿಗಳ ಸಭಾಂಗಣದಲ್ಲಿ ನಡೆದ ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಬಹುಮಾನ ನೀಡಲಾಯಿತು. ಪ್ರತಿ ಸ್ಪರ್ಧೆಗೆ ಪ್ರಥಮ ಬಹುಮಾನ ರೂ 4000, ದ್ವಿತೀಯ ರೂ 3000, ತೃತೀಯ ರೂ 2000, ಸಮಾಧಾನಕರ ಬಹುಮಾನ ಇಬ್ಬ–ರಿಗೆ ರೂ 1000 ದಂತೆ ಒಟ್ಟು ಒಂದು ಸ್ಪರ್ಧೆಗೆ 11,000 ಮೌಲ್ಯದ ಬಹುಮಾನವನ್ನು ಪುಸ್ತಕದ ರೂಪದಲ್ಲಿ ನೀಡಲಾಯಿತು. ಚಿತ್ರಕಲೆ ಸ್ಪರ್ಧೆಯಲ್ಲಿ ಕಠೀಣಕೊಣದ ಸರ್ಕಾರಿ ಪ್ರೌಢ ಶಾಲೆಯ ಪ್ರದೀಪ ನಾಯ್ಕ ಪ್ರಥಮ, ಕಾರವಾರ ಸೆಂಟ್ ಮೈಕಲ್ಸ್ ಪ್ರೌಢ ಶಾಲೆಯ ಡಿಲಿಸಿಯಾ ಫರ್ನಾಂಡಿಸ್ ದ್ವಿತೀಯ, ಬಾಲಮಂದಿರ ಪ್ರೌಢ ಶಾಲೆಯ ಪ್ರಜ್ವಲ ಶೇಟ್ ತೃತೀಯ, ಶ್ರೀಮತಿ ಸುಮತಿ ದಾಮ್ಲೆ ಪ್ರೌಢ ಶಾಲೆಯ ಸುವಾನಾ ಮದಾರಿ ಹಾಗೂ ಬಿಣಗಾ ಸೋಮನಾಥ ಪ್ರೌಢ ಶಾಲೆಯ ಸೂರಜ ಗುನಗಿ ಸಮಾಧನಕರ ಬಹುಮಾನ ಪಡೆದುಕೊಂಡಿದ್ದಾರೆ. ಕವನ ವಾಚನ ಸ್ಪರ್ಧೆಯಲ್ಲಿ ಕಾರವಾರ ತಾಲೂಕಿನ ಕೆ.ಎಚ್.ಇ.ಪಿ ಪ್ರೌಢ ಶಾಲೆಯ ಗಹನ ರಾಜೇಶ ನಾಯಕ ಪ್ರಥಮ, ಸೆಂಟ್ ಮೈಕಲ್ಸ್ ಪ್ರೌಢ ಶಾಲೆಯ ಶ್ರೀಗುರು ಶೆಟ್ಟಿ ದ್ವಿತೀಯ, ಶಿರವಾಡದ ಕೆ.ಪಿ.ಎಸ್ ಪ್ರೌಢ ಶಾಲೆಯ ನಾಗರಾಜ ಸಂತೋಷ ನೇಕಾರ ತೃತೀಯ, ಶ್ರೀಮತಿ ಸುಮತಿ ದಾಮ್ಲೆ ಪ್ರೌಢ ಶಾಲೆಯ ಮಂಜುಳಾ ಗಣೇಶ್ ಭೋವಿ ಹಾಗೂ ಸೆಂಟ್ ಮೈಕಲ್ಸ್ ಪ್ರೌಢ ಶಾಲೆಯ ಸುಹಾನಿ ಗಜಾನನ ನಾಯ್ಕ ಸಮಾಧನಕರ ಬಹುಮಾನ ಪಡೆದುಕೊಂಡಿದ್ದಾರೆ.

ಆಶುಭಾಷಣ ಸ್ಪರ್ಧೆಯಲ್ಲಿ ಬಾಡದ ಶಿವಾಜಿ ಪ್ರೌಢ ಶಾಲೆಯ ಇಹಾಬ ಎಮ್. ಯಾಕೂಬ್ ಪ್ರಥಮ, ಕೆ.ಎಚ್.ಇ.ಪಿ ಪ್ರೌಢ ಶಾಲೆಯ ತಪಸ್ವಿ ಮಂಗಲದಾಸ ಬಾಂದೇಕರ ದ್ವಿತೀಯ, ಸೆಂಟ್ ಮೈಕಲ್ಸ್ ಪ್ರೌಢ ಶಾಲೆಯ ಸಂಪ್ರೀತ್ ಎನ್.ಗೌಡ ತೃತೀಯ, ಶ್ರೀಮತಿ ಸುಮತಿ ದಾಮ್ಲೆ ಪ್ರೌಢ ಶಾಲೆಯ ಅಮಿನಾಬಿ ಮದಾರಿ ಹಾಗೂ ಬಿಣಗಾ ಬಾಲಭವನ ಪ್ರೌಢ ಶಾಲೆಯ ಪ್ರಗತಿ ದಿನೇಶ ಅಂಚೇಕರ ಸಮಾಧನಕರ ಬಹುಮಾನ ಪಡೆದುಕೊಂಡಿದ್ದಾರೆ.

ಪ್ರಬಂಧ ಸ್ಪರ್ಧೆಯಲ್ಲಿ ಬಿಣಗಾ ಬಾಲಭವನ ಪ್ರೌಢ ಶಾಲೆಯ ಮಹಿಮಾ ವಿನೋದ ತಾಮ್ಸೆ ಪ್ರಥ–ಮ, ಸಿದ್ದರ ಮಲ್ಲಿಕಾರ್ಜುನ ಬಾಲಕಿಯರ ಪ್ರೌಢ ಶಾಲೆಯ ಶ್ರೇಯಾ ಶ್ರೀಕಾಂತ ನಾಳಕರ ದ್ವಿತೀಯ, ಬಾಲ ಮಂದಿರ ಶಾಲೆಯ ಆರ್ಯ ನಾಗೇಶ ಗುಜ–ಕರ ತೃತೀಯ, ಚೆಂಡಿಯಾದ ಪಿ.ಎನ್.ಇ ಪ್ರೌಢ ಶಾಲೆಯ ಪೂರ್ವಿ ಮೋಹನ ತಾಂಡೇಲ ಹಾಗೂ ಡಾ. ಬಿ.ಆರ್.ಅಂಬೇಡ್ಕರ ಪ್ರೌಢ ಶಾಲೆಯ ಅಮೃತಾ ಸುರೇಶ ನಾಯ್ಕ ಸಮಾಧನಕರ ಬಹುಮಾನ ಪಡೆದುಕೊಂಡಿದ್ದಾರೆ.

## ಶ್ರೀ ಸ್ವಾಮಿ ವಿವೇಕಾನಂದ ನವೋದಯ ತರಬೇತಿ ಕೇಂದ್ರದಲ್ಲಿ ಪಠ್ಯೇತರ ಚಟುವಟಿಕೆ ಕಾರ್ಯಕ್ರಮ




ಮುಧೋಳ: ಅಂಕಗಳ ಆಧಾರದಲ್ಲಿ ವಿದ್ಯಾರ್ಥಿಗಳ ಸಾಮರ್ಥ್ಯ, ಅಳೆಯುವದಕ್ಕಿಂತ, ಆಧುನಿಕ ಕಾಲದಲ್ಲಿ ಶಿಕ್ಷಣ ಕೌಶಲ್ಯ. ಸಾಮಾನ್ಯ ಜ್ಞಾನಗಳ ಮೇಲೆ ನಿಂತಿದೆ, ಕಾರಣ ವಿದ್ಯಾರ್ಥಿಗಳು ಪಾಠದ ಜತೆ ಜತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವುದು ಪ್ರಸ್ತುತ ದಿನಗಳ ಅಗತ್ಯ ಎಂದು ಶ್ರೀ ರಾಮಕೃಷ್ಣ ಪರಮಹಂಸ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಹೊಳಬಸಪ್ಪ ಹೂಗಾರ ತಿಳಿಸಿದರು.

ತಾಲೂಕಿನ ಲೋಕಾಪೂರ ಪಟ್ಟಣದ ಸಿರಿಗನ್ನಡ ಹಿರಿಯ ಪ್ರಾಥಮಿಕ ಶಾಲೆ, ಶ್ರೀ ಶಾರದಾ ಮಾತಾ ಆಂಗ್ಲ ಮಾಧ್ಯಮ ಶಾಲೆ ಹಾಗೂ ಶ್ರೀ ಸ್ವಾಮಿ ವಿವೇಕಾನಂದ ನವೋದಯ ತರಬೇತಿ ಕೇಂದ್ರದಲ್ಲಿ ಪಠ್ಯೇತರ ಚಟುವಟಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಇವರು ಪ್ರಸ್ತುತ ವಾಸ್ತವ ಬದಲಾಗಿದೆ ಅಂಕಗಳ ಜತೆಗೆ ಬೇಕಾದ ಕೌಶಲ್ಯಗಳನ್ನೂ ಮೈಗೂಡಿಸಿಕೊಳ್ಳಬೇಕು ಹಾಗಾದರೆ ಮಾತ್ರ ಪಡೆದ ಶಿಕ್ಷಣ ಪರಿಪೂರ್ಣಗೊಳ್ಳುತ್ತದೆ ಅಷ್ಟೆ ಅಲ್ಲದೆ ಸುಲಭವಾಗಿ ಸ್ಪರ್ಧಾತ್ಮಕ ಯುಗದಲ್ಲಿ ಸ್ಪರ್ಧಿಸಲು ಸಾಧ್ಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಹಾಗೂ ಶಾಲೆಯ ಮುಖ್ಯ ಶಿಕ್ಷಕಿ ಮಂಜುಳಾ ದಂಡಗಿ ಮಾತನಾಡಿ, ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಕೊಳ್ಳುವುದು ಎಂದರೆ ಪಾಠ–ಪುಸ್ತಕಗಳನ್ನು ನಿರ್ಲಕ್ಷಿಸಿ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವುದಲ್ಲ ಬದಲಿಗೆ ಪುಸ್ತಕ ತರಗತಿಗಳ ಜತೆ ಜತೆಗೆ ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮಗಳು, ಭಾಗವಹಿಸುವುದು ಎಂದುರು.

ಶಿಕ್ಷಕ ರವಿಕುಮಾರ ಸನದಿ, ಕೃಷ್ಣಾ ದಳವಾಯಿ, ರುಕ್ಮೀಣಿ ಹೂಗಾರ, ಗೀತಾ ದಳವಾಯಿ, ಭಾರತಿ ಬಡಿಗೇರ, ರಾಜೇಶ್ವರಿ ಹೆಗಡೆ, ಸಂಗೀತಾ ಲಾಯಮ್ಮನವರ, ಗೂಳಪ್ಪ ಹುಣಸಿಕಟ್ಟಿ, ಸವಿತಾ ಕಂಬಳಿ, ಗೀತಾ ಹೆಬ್ಬಾಳ, ಆರತಿ ನಾವ್ಹಿ, ವಿದ್ಯಾರ್ಥಿಗಳಿದ್ದರು.

*****

## ಸಂಘಟನೆಯು ಜನರ ಹಿತಾಸಕ್ತಿ ಕಾಪಾಡುವ ಜನರ ಧ್ವನಿಯಾಗಬೇಕು: ಮಹೇಶ ಶಿಗಿಹಳ್ಳಿ



ಬೆಳಗಾವಿ: ಕರ್ನಾಟಕ ಪರಿಶಿಷ್ಟ ಪಂಗಡ ವಾಲ್ಮೀಕಿ ರಾಜ್ಯ ಯುವ ಘಟಕ (ರಿ) ಸಂಘಟನೆಯ ಪದಾಧಿಕಾ–ರಿಗಳ ಪದಗ್ರಹಣ ಹಾಗೂ ಕುಂದು ಕೊರತೆಗಳ ಮುಖ್ಯ ಸಭೆ ಜೂನ್.30 ರಂದು ನಗರದ ಪ್ರವಾಸಿಮಂದಿರದಲ್ಲಿ ನಡೆಯಿತು.

ನೂತನವಾಗಿ ಸಂಘಟನೆ ಪದಾಧಿಕಾರಿಗಳಾಗಿ ಆಯ್ಕೆಯಾದ ರಾಜ್ಯ ಉಪಾಧ್ಯಕ್ಷರು ಮಲ್ಲಿಕಾರ್ಜುನ್ ಹೆಗ್ಗನಾಯಕ, ಬೆಳಗಾವಿ ತಾಲೂಕು ಅಧ್ಯಕ್ಷರಾಗಿ ಮಂಗೇಶ್ ಚನ್ನಿಕುಪ್ಪಿ ಮತ್ತು ಬೆಳಗಾವಿ ತಾಲೂಕು ಉಪದ್ಯಕ್ಷರಾಗಿ ಮುತ್ತುರಾಜ್ ಹೊಸಗಟ್ಟಿ, ರಾಮದುರ್ಗ ತಾಲೂಕು ಅಧ್ಯಕ್ಷರಾಗಿ ಮಂಜುನಾಥ್ ಹನಸಿ, ಯರಗಟ್ಟಿ ತಾಲೂಕು ಪ್ರಧಾನ ಸಂಚಾಲಕರಾಗಿ ರುದ್ರಪ್ಪ ತುರ್ಮಂದಿ, ಬೆಳಗಾವಿ ಗ್ರಾಮೀಣ ಸಹ ಕಾರ್ಯದರ್ಶಿಯಾಗಿ ರಾಜು ಮ್ಯಾಕಲಿ ಅವರಿಗೆ ಆದೇಶ ಪತ್ರ ವಿತರಿಸಿ, ಅಭಿನಂದನೆ ಸಲ್ಲಿಸಲಾಯಿತು.

ಈ ವೇಳೆ ಮಾತನಾಡಿದ ರಾಜ್ಯಾದ್ಯಕ್ಷ ಮಹೇಶ್ ಶೀಗಿಹಳ್ಳಿ ಪದಾಧಿಕಾರಿಗಳು, ಆಯ್ಕೆಯಾದರು ಸಂಘಟನೆಯು ಜನರ ಒಳಿತಕ್ಕಾಗಿ ಹಾಗೂ ಒಳ್ಳೆಯ ಅಭಿವೃದ್ದಿಗಾಗಿ ಹೋರಾಟ ಮಾಡಲು ಸಿದ್ಧರಿರಬೇಕು ಎಂದು ತಿಳಿಸಿದರು.

ರಾಜ್ಯ ಉಪಾಧ್ಯಕ್ಷರಾಗಿ ಆಯ್ಕೆಯಾದ ಮಲ್ಲಿಕಾರ್ಜುನ್ ಹೆಗ್ಗನಾಯಕ ಮಾತನಾಡಿ ಸರ್ಕಾರದ ಸೌಲಭ್ಯವನ್ನು ಸರಿಯಾಗಿ ಸದುಪಯೋಗ ಪಡೆದುಕೊಳ್ಳಬೇಕು ಮತ್ತು ಸಂಘಟನೆಯ ಧ್ಯೇಯಗಳಾದ ಶಿಕ್ಷಣ, ಸಂಘಟನೆ, ಹೋರಾಟದ ಬಗ್ಗೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ವಿವಿಧ ತಾಲೂಕು, ಹೋಬಳಿಗಳಿಂದ ಆಗಮಿಸಿದ ಸಂಘಟನೆಯ ಎಲ್ಲ ಪದಾಧಿಕಾರಿಗಳು, ಸದಸ್ಯರು ಹಾಜರಿದ್ದರು.

## ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ಮತ್ತು ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಅಗತ್ಯ ಕ್ರಮ: ಉಸ್ತುವಾರಿ ಸಚಿವ ಸಂತೋಷ ಲಾಡ್

ಧಾರವಾಡ : ರಾಜಕೀಯ ಬಿಟ್ಟು, ಸರಿಯಾಗಿ ಕೆಲಸ ಮಾಡಬೇಕು ಅಂ–ದಾಗ ಶಾಲೆಗಳು ಉತ್ತಮ ಫಲಿತಾಂಶ ಪಡೆಯಲು ಸಾಧ್ಯವಾಗುತ್ತದೆ. ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ನಿರೀಕ್ಷಿತ ಫಲಿತಾಂಶ ಸಿಗದೇ ಇರಲು ಕಾರಣ ನಾವೇ ಆಗಿದ್ದೇವೆ ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ತಿಳಿಸಿದರು.

ಅವರು ಇಂದು (ಜು.1) ಸಂಜೆ, ಧಾರವಾಡ ಜೆ.ಎಸ್.ಎಸ್. ಸನ್ನಿಧಿ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆ ಅವರ ಸಂಂ–ಯುಕ್ತಾಶ್ರಯದಲ್ಲಿ ಬದಲಾವಣೆಯ ಶಿಕ್ಷಣ; ಭವಿಷ್ಯದ ನಿರ್ಮಾಣ 2025–26 ಅಂಗವಾಗಿ ಜಿಲ್ಲೆಯ ಪ್ರಾಥ–ಮಿಕ ಮತ್ತು ಪ್ರೌಢ ಶಾಲೆಗಳ ಪ್ರಧಾನ ಗುರುಗಳ, ಮುಖ್ಯೋಪಾಧ್ಯಾರ ಹಾಗೂ ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣೆ ಸಮಿತಿ (ಎಸ್.ಡಿ.ಎಂ.ಸಿ.) ಅಧ್ಯಕ್ಷರಿಗೆ ಆಯೋಜಿಸಿದ್ದ ಒಂದು ದಿನದ ಶೈಕ್ಷಣಿಕ ಕಾರ್ಯಾಗಾರ ಸಮಾರೋಪ ಹಾಗೂ ಕಳೆದ ವರ್ಷದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ. 100 ರಷ್ಟು ಫಲಿತಾಂಶ ಪಡೆದ ಶಾಲೆಗಳ ಮುಖ್ಯ ಶಿಕ್ಷಕರಿಗೆ ಮತ್ತು ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ, ಮಾತನಾಡಿದರು.

ಸಮಾಜ, ಶಾಲೆ ಮತ್ತು ಮನೆಯ ವಾತಾವರಣದ ಮೇಲೆ ಮಕ್ಕಳು ಬೆಳೆಯುತ್ತಾರೆ. ಆದ್ದರಿಂದ ಮಕ್ಕಳ ಜೀವನದ ಮೇಲೆ ವಿಶೇಷವಾದ ಪರಿಣಾಮ ಬೀರುವ ಮಾತುಗಳನ್ನಾಡಿ, ತಿಳುವಳಿಕೆ ಹೇಳಿ. ಅವರ ಜ್ಞಾನದ ಬಗ್ಗೆ, ಗು–ರಿಯ ಬಗ್ಗೆ ಶಿಕ್ಷಕರು ಮಕ್ಕಳಿಗೆ ಮನವರಿಕೆ ಮಾಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್. ಲಾಡ್ ಅವರು ಹೇಳಿದರು.

ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣೆ ಸಮಿತಿಯು ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಹಾಗೂ ಅವರ ಶೈಕ್ಷಣಿಕ ಪ್ರಗತಿ ಸಾಧಿಸಲು ಹಾಗೂ ಮಕ್ಕಳ ಶ್ರೇಯೊಭಿವೃದ್ದಿಗಾಗಿ ಉತ್ತಮ ಕೆಲಸ ಮಾಡಬೇಕು. ನಮ್ಮ ಶಾಲೆಗಳ ಬಗ್ಗೆ ನಮ್ಮಗೆ ಹೆಮ್ಮೆ, ಗರ್ವ ಮೂಡುವಂತಾಗಬೇಕು. ಸರಕಾರದ ಸಾಕಷ್ಟು ಯೋಜನೆಗಳಿವೆ. ಇದೀಗ ಎಲ್ಲ ಸಮಸ್ಯೆಗಳನ್ನು ನಿವಾರಿಸಲು ನಾವೆಲ್ಲರೂ ಇರುವಾಗ ಶಿಕ್ಷಕರು ಉತ್ತಮ ಗುಣಮಟ್ಟದ ಶಿಕ್ಷಣವನ್ನು ಮಕ್ಕಳಿಗೆ ನೀಡಬೇಕು ಎಂದು ತಿಳಿಸಿದರು.

ಶಾಲೆಯಲ್ಲಿ ಮಕ್ಕಳಿಗೆ ವಿಷಯದ ಬಗ್ಗೆ ತಿಳಿಸುವಾಗ ಅವರ ಕೌಶಲ್ಯ, ನೈತಿ–ಕ ಮೌಲ್ಯಗಳು, ವಿವೇಕವನ್ನು ಹೆಚ್ಚಿಸಿ, ಮಕ್ಕಳನ್ನು ಸಮಾಜದ ಜವಾಬ್ದಾರಿಯುತ ಪ್ರಜೆಯನ್ನಾಗಿ ರೂಪಿಸುವ ಪ್ರಯತ್ನ ಶಿಕ್ಷಕರು ಮಾಡಬೇಕು. ಮಕ್ಕಳ ಸರ್ವತೋಮುಖ ಬೆಳವಣಿಗೆಯ ಅಡಿಪಾಯವನ್ನು ಶಿಕ್ಷಕರು ಮಾಡಬೇಕಾದ ಕರ್ತವ್ಯವಾಗಿದೆ ಎಂದು ಸಚಿವರು ತಿಳಿಸಿದರು.

ಮಕ್ಕಳಿಗೆ ಸಮಾಜದಲ್ಲಿ ಜೀವಿಸುವುದನ್ನು ಕಲಿಸಿ, ಶಾಲೆಯ ವ್ಯವಸ್ಥೆ ಹಾಗೂ




ಸಮಸ್ಯೆಗಳ ಬಗ್ಗೆ ಏನಾದರೂ ತೊಂದರೆಗಳಿದ್ದರೆ ಗಮನಕ್ಕೆ ತಂದರೆ, ಸರಿ ಮಾಡಲು ಪ್ರಯತ್ನಿಸುತ್ತೇವೆ. ಆದರೆ ಮಕ್ಕಳಿಗೆ ಜೀವನ ರೂಪಿಸುವುದು ಶಿಕ್ಷಕರ ಕೈಯಲ್ಲಿ ಇರುವುದರಿಂದ ಮಕ್ಕಳಲ್ಲಿ ಇರುವ ಕೌಶಲ್ಯದ ಬಗ್ಗೆ, ತಂತ್ರಜ್ಞಾನದ ಬಗ್ಗೆ ಆಸಕ್ತಿ ಇದ್ದರೆ ಅವರನ್ನು ಗುರುತಿಸಿ ಮತ್ತು ಆ ವಿಷಯದ ಬಗ್ಗೆ ಅವರಿಗೆ ತಿಳಿಹೇಳಿ ಎಂದು ಹೇಳಿದರು.

ಮನೆಯಲ್ಲಿ ಉತ್ತಮ ಸಂಸ್ಕಾರದ ಬಗ್ಗೆ ಚರ್ಚಿಸುವ ಹಾಗೂ ಮಕ್ಕಳಿಗೆ ಪೂರಕವಾದ ವಾತಾವರಣವನ್ನು ನಿರ್ಮಿಸುವ ಪ್ರಯತ್ನ ಮಾಡಬೇಕು. ಆದರೇ ನಾವು ಇದಾವುದು ಇಂದು ಮಾಡದೇ ರಾಜಕೀಯ, ಜಾತಿ, ಮೇಲು ಕೀಳು ಮಾತನಾಡಿ ಮಕ್ಕಳ ಮನಸ್ಸಿನ ಮೇಲೆ ಪರಿಣಾಮ ಬೀರುತ್ತೇವೆ. ಇದು ಮಕ್ಕಳ ಮೇಲೆ ಬಹಳಷ್ಟು ಮಾನಸಿಕ ಪ್ರಭಾವ ಬೀರುತ್ತಿದೆ. ನಾವು ಮಕ್ಕಳ ಭವಿಷ್ಯದ ಕುರಿತು ಎಚ್ಚರಿಕೆ ಮಹಿಸಬೇಕು. ಅವರ ಚಲನ ವಲನದ ಬಗ್ಗೆ ನಿತ್ಯ ಕಾಳಜಿ ವಹಿಸಿ ಅವರನ್ನು ತಿದ್ದುವ ಕೆಲಸ ಮಾಡಬೇಕು. ಇಂದಿನ ಶಿಕ್ಷಕರು, ನಾವು ಮಕ್ಕಳಿಗೆ ಜ್ಞಾನ ಒದಗಿಸುವಲ್ಲಿ ವಿಫಲರಾಗುತ್ತಿದ್ದು, ಅವರನ್ನು ಪ್ರೀತಿಯಿಂದಲೇ ಜ್ಞಾನದ ಮಾರ್ಗದಲ್ಲಿ ಕರೆದುಕೊಂಡು ಹೋಗಬೇಕು. ಮನೆಯಿಂದಲೇ ಮಕ್ಕಳಿಗೆ ಗೌರವ ಮನೋಭಾವ, ಪ್ರಾಮಾಣಿಕತೆ, ಸಜ್ಜನಿಕ್ಕೆ, ಸರಳತೆ ಕಲಿಸಿ ಆತ್ಮಸ್ಥೈರ್ಯ ತುಂಬುವ ಕೆಲಸವನ್ನು ಮಾಡಬೇಕು ಎಂದು ಕಿವಿ ಮಾತು ಹೇಳಿದರು.

ಮುಂಬರುವ ದಿನಗಳಲ್ಲಿ ಇನ್ನಷ್ಟು ಕೆಟ್ಟ ಪರಿಸ್ಥಿತಿ ನಿರ್ಮಾಣವಾಗುವುದಕ್ಕೂ ಮೊದಲು ನಾವು ನಮ್ಮ ಜವಾಬ್ದಾರಿ ಅರಿತು ಕೆಲಸ ಮಾಡಿ ಮಕ್ಕಳನ್ನು ತಿದ್ದಿತಿಡುವ ಮೂಲಕ ಉತ್ತಮ ಮಾರ್ಗದರ್ಶನ ಮಾಡಬೇಕು. ಪ್ರಸ್ತುತವಾಗಿ ಸರಕಾರದ ಸಾಕಷ್ಟು ಯೋಜನೆಗಳಿವೆ. ಇದೀಗ ಎಲ್ಲ ಸಮಸ್ಯೆಗಳನ್ನು ನಿವಾರಿಸಲು ಪ್ರಯತ್ನಿಸಲಾಗುತ್ತದೆ. ಆದರೂ ಫಲಿತಾಂಶ ಸುಧಾರಣೆಯಾಗಿಲ್ಲ ನಾವೆಲ್ಲರೂ ಆತ್ಮಾವಲೋಕನ ಮಾಡಿಕೊಂಡು, ಯುವ ಸಮುದಾಯವನ್ನು ಉತ್ತಮ ದಾರಿಯಲ್ಲಿ ತೆಗೆದುಕೊಂಡು ಹೋಗಬೇಕು ಎಂದು ಸಲಹೆ ನೀಡಿದರು.

ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಗುಣಮಟ್ಟದ ಶಿಕ್ಷಣ ಕಡೆಗೆ ಗಮನ ಹರಿಸಿ, ಮಿಷನ್ ವಿದ್ಯಾಕಾಶಿಯನ್ನು ಅನುಷ್ಠಾನಕ್ಕೆ ತಂದಾಗ ಎಲ್ಲರೂ ಸಹಕಾರ ನೀಡಿದ್ದಾರೆ. ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ನಿರೀಕ್ಷಿತ ಫಲಿತಾಂಶ ಸಿಗದೇ ಇದ್ದರೂ ಸುಧಾರಣೆ ಆಗಿದೆ. ಅದರಂತೆ ಈ ವರ್ಷವೂ ಇನ್ನಷ್ಟು ಪ್ರಯತ್ನ ಮೂಲಕ ಧಾರವಾಡ ಜಿಲ್ಲೆಯ ವಿದ್ಯಾಕಾಶಿ ಗತವೈಭವ ಮರಳಿ ತರಲು ಪ್ರಯತ್ನಿಸಿ ಎಂದು ತಿಳಿಸಿದರು.

ಎಸ್.ಎಸ್.ಎಲ್.ಸಿ., ಪಿಯುಸಿ ಪರೀಕ್ಷೆಯ ಫಲಿತಾಂಶವು ಕಳೆದ ವರ್ಷಕ್ಕಿಂತ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಒಳ್ಳೆಯ ಬದಲಾವಣೆ, ಗುಣಮಟ್ಟದ ಶಿಕ್ಷಣಕ್ಕೆ ಗಮನಹರಿಸಿ ಫಲಿತಾಂಶ ವೃದ್ಧಿಸಲು ಹಲವಾರು ಕಾರ್ಯಕ್ರಮಗಳನ್ನು ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

ಮಿಷನ್ ವಿದ್ಯಾಕಾಶಿಯಲ್ಲಿ ಕಲಿಕೆಯಲ್ಲಿ ಹಿಂದುಳಿದಿರುವ ವಿದ್ಯಾರ್ಥಿಗಳಿಗೆ ಹೇಗೆ ಸುಧಾರಿಸಬೇಕು. ಅವರಿಗೆ ಬರೆಯುವುದು, ಓದುವುದನ್ನು ವೃದ್ಧಿಸಲು ಶಿಕ್ಷಕರು ಸಹ ಸಕ್ರೀಯವಾಗಿ ಸಹಕಾರ ನೀಡುತ್ತಿದ್ದಾರೆ ಎಂದು ಹೇಳಿದರು.

ಧಾರವಾಡ ಜಿಲ್ಲೆಯು ಟಾಪ್ 10 ಸ್ಥಾನಕ್ಕೆ ಬರಬೇಕು ಎಂಬ ನಿರೀಕ್ಷೆ ಇತ್ತು, ಆದ–ರೆ ಅಂದುಕೊಂಡ ಹಾಗೆ ಆಗದೇ ಇದ್ದರೂ ಸ್ವಲ್ಪ ಮಟ್ಟಿಗೆ ಆದರೂ ಬದಲಾವಣೆ ಆಗಿದೆ. ಎಸ್.ಡಿ.ಎಂ.ಸಿ, ಶಾಲಾ ಶಿಕ್ಷಕರು, ಮುಖ್ಯೋಪಾಧ್ಯಯರು ಸೇರಿ ಮಕ್ಕಳು ಶಾಲೆಗೆ ಶೇ.100 ರಷ್ಟು ಹಾಜರಾಗುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಪೋಷಕರ ಪಾತ್ರವೂ ಬಹಳ ಮಹತ್ವವಾಗಿದೆ. ಏಕೆಂದರೆ ಮನೆಯಲ್ಲಿ ಪೋಷಕರು ಏನು ಮಾಡುತ್ತಾರೆ, ಮಾತನಾಡುತ್ತಾರೆ ಅದನ್ನೇ ಮಕ್ಕಳು ಸಹ ಕಲಿಯುತ್ತಾರೆ. ಪೋಷಕರು ಮಕ್ಕಳಿಗೆ ದಿನನಿತ್ಯ ಶಾಲೆಗೆ ಕಳುಹಿಸುವುದು, ಮನೆಪಾಠ ಮಾಡಿಸುವುದು ಅವಶ್ಯಕವಾಗಿರುತ್ತದೆ. ಆದ್ದರಿಂದ ಪಷಕರ ಜವಾಬ್ದಾರಿಯು ಅಷ್ಟೆ ಮುಖ್ಯವಾಗಿದೆ ಎಂದು ಹೇಳಿದರು.

ಯಾವುದೇ ಸಮಸ್ಯೆ ಇದ್ದರೂ ಅದಕ್ಕೆ ಒಂದಲ್ಲ ಒಂದು ರೀತಿ ಪರಿಹಾರ ಇದ್ದೇ ಇರುತ್ತದೆ. ಸಮಸ್ಯೆಯನ್ನೇ ಹೇಳಿಕೊಂಡು ಇರುವುದು ಸಮಂಜಸವಲ್ಲ. ಸಮಸ್ಯೆಯನ್ನು ಹೇಗೆ ಪರಿಹಾರ ಮಾಡಿಕೊಳ್ಳಬೇಕು ಎಂಬುದನ್ನು ಯೋಚಿಸಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಮನುಷ್ಯ ಸಮಸ್ಯೆ ಬಂದಾಗಲೇ ಎಚ್ಚ–ರಿಕೆಯಿಂದ ಇರುತ್ತಾನೆ. ಶಾಲಾ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಶಿಕ್ಷಕರು ಪ್ರಯತ್ನ ಮಾಡಬೇಕು. ಸರಿಯಾಗಿ ಮಕ್ಕಳು ಶಾಲೆಗೆ ಬರುತ್ತಿಲ್ಲ, ಇದರಿಂದ ಅವರಿಗೆ ಸರಿಯಾಗಿ ಓದಲು ಬರೆಯಲು ಬರುತ್ತಿಲ್ಲ, ಇದ–ರಿಂದ ಕೆಲ ಮಕ್ಕಳಿಗೆ ಸರಿಯಾಗಿ ಓದು ಬರಹ ಬರುತ್ತಿಲ್ಲ. ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣೆ ಸಮಿತಿಯವರು ಮಕ್ಕಳನ್ನು ಶಾಲೆಗೆ ಮಕ್ಕಳನ್ನು ಕರೆತರುವ ಪ್ರಯತ್ನ ಮಾಡಬೇಕು. ಉತ್ತಮ ಶಿಕ್ಷಣ ನೀಡಿ ಗೌರವ ಹೆಚ್ಚಿಸಿಕೊಳ್ಳಬೇಕು. ಪಾಲಕರು ಮಕ್ಕಳ ಭವಿಷ್ಯದ ಕುರಿತು ಕಾಳಜಿ ವಹಿಸಬೇಕು ಎಂದು ತಿಳಿಸಿದರು.

ನವಲಗುಂದ ಶಾಸಕ ಎನ್ ಎಚ್ ಕೋನರಡ್ಡಿ ಮಾತನಾಡಿ, ಶಾಲೆ ಎಂದರೇ ದೇವಸ್ಥಾನ ಇದ್ದಂತೆ. ಶಾಲೆಯ ಆವರಣದಲ್ಲಿ ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಕೆಲಸ ಆಗಬೇಕು. ಶಿಕ್ಷಕರ ಸಮಸ್ಯೆಗಳಿಗೆ ಸರಕಾರ ಸ್ಪಂದಿಸಲು ಬದ್ಧವಾಗಿದೆ. ಅದರಂತೆಯೇ ಶಿಕ್ಷಕರು ಉತ್ತಮ ಶಿಕ್ಷಣ ನೀಡಲು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಮನವಿ ಮಾಡಿದರು.

ಮಕ್ಕಳಿಗೆ ಮೊಬೈಲ್‌ಗಳ್ನು ನೀಡಬೇಡಿ. ಪೋಷಕರು ಮಕ್ಕಳ ಬಗ್ಗೆ ಜವಾಬ್ದಾರಿ ವಹಿಸಿ. ಏನು ಮಾಡುತ್ತಾರೆ ಏನು ಇಲ್ಲ ಎಂಬುದನ್ನು ಗಮನಹರಿಸುವುದು ಪೋಷಕರ ಜವಾಬ್ದಾರಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶೇ. 100 ರಷ್ಟು ಫಲಿತಾಂಶ ಪಡೆದ ಶಾಲೆಗಳ ಮುಖ್ಯಶಿಕ್ಷಕರನ್ನು ಹಾಗೂ ಜಿಲ್ಲೆಗೆ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ, ಗೌರವಿಸಲಾಯಿತು. ಜಿಲ್ಲೆಗೆ ಅತಿ ಹೆಚ್ಚು ಅಂಕಪಡೆದ ವಿದ್ಯಾರ್ಥಿಗಳಿಗೆ ಸಚಿವ ಸಂತೋಷ ಲಾಡ್ ಅವರು ತಮ್ಮ ಸಂತೋಷ ಲಾಡ್ ಫೌಂಡೇಶನ್ ವತಿಯಿಂದ ತಲಾ ರೂ.10 ಸಾವಿರ ಪ್ರೋತ್ಸಹಧನ ನೀಡಿ, ಗೌರವಿಸಿದರು.

ಈ ಸಂದರ್ಭದಲ್ಲಿ ಹುಬ್ಬಳ್ಳಿ–ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ವೇದಿಕೆಯಲ್ಲಿದ್ದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್.ಕೆಳದಿಮಠ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪ ಯೋಜನಾ ಸಮನ್ವಯ ಅಧಿಕಾರಿ ಎಸ್.ಎಂ.ಹುಡೆದಮನಿ ಸ್ವಾಗತಿಸಿದರು. ಸಹಾಯಕ ಯೋಜನಾ ಸಮನ್ವಯ ಅಧಿಕಾರಿ ರೇಣುಕಾ ಅಮಲಜೇರಿ ಅವರು ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲ ಕ್ಷೇತ್ರಶಿಕ್ಷಣಾಧಿಕಾರಿಗಳು, ಪ್ರಾಥಮಿಕ, ಪ್ರೌಢಶಾಲೆಗಳ ಪ್ರಧಾನ ಗುರುಗಳು, ಮುಖ್ಯೋಪಾಧ್ಯಾಯರು, ಎಸ್.ಡಿ.ಎಂ.ಸಿ.ಅಧ್ಯಕ್ಷರು, ಜನಪ್ರತಿನಿಗಳು ಭಾಗವಹಿಸಿದ್ದರು.

## ಹುಸಿ ಸೈನಿಕ ಹುಳು ಹತೋಟಿ, ನಿರ್ವಹಣೆಗೆ ಕೃಷಿ ಇಲಾಖೆಯಿಂದ ರೈತರಿಗೆ ಸಲಹೆ

ಕೊಪ್ಪಳ ; ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಇಲ್ಲಿಯವರೆಗೆ ಬಿತ್ತನೆ ಮಾಡಿದ ಮೆಕ್ಕೆಜೋಳ(95,815 ಹೆಕ್ಟೇರ್), ಹೈಬ್ರಿಡ್ ಜೋಳ(1370 ಹೆ.), ಸಜ್ಜೆ (27000 ಹೆ.) ಮೇಲೆ ಹುಸಿ ಸೈನಿಕ ಹುಳು ಕೀಟವು ಕಾಣಿಸಿಕೊಳ್ಳುತ್ತಿದ್ದು, ಇದರ ನಿರ್ವಹಣೆ ಹಾಗೂ ಸಾಮೂಹಿಕ ಹತೋಟಿ ಕ್ರಮಗಳ ಬಗ್ಗೆ ಕೃಷಿ ಇಲಾಖೆ ಸಲಹೆಗಳನ್ನು ನೀಡಿದೆ.

ಈ ಕೀಟವು ಕಂದು ಬಣ್ಣದ ಪತಂಗವಾಗಿದ್ದು, ರೆಕ್ಕೆಯ ಅಂಚಿನಲ್ಲಿ ಬಿಳಿಯ ಪಟ್ಟಿಗಳನ್ನು ಹೊಂದಿರುತ್ತದೆ. ಕೀಟದ ಜೀವನ ಚಕ್ರವು 30–40 ದಿನಗಳನ್ನು ಹೊಂದಿದ್ದು, ಸಾಧಾರಣವಾಗಿ ಸುಮಾರು ಸಾವಿರ ಮೊಟ್ಟೆಗಳನ್ನು ಇಡುವ ಶಕ್ತಿಯನ್ನು ಹೊಂದಿದೆ. ಸುಮಾರು 50–100 ಕಿ.ಮೀ ವರಗೆ ವಲಸೆ ಹೋಗುವ ಶಕ್ತಿಯನ್ನು ಹೊಂದಿರುತ್ತದೆ. ಈ ಕೀಟವು ತರಕಾರಿ ಬೆಳೆಗಳು, ಭತ್ತ, ಕಬ್ಬು, ಹತ್ತಿ ಹಾಗೂ ಜೋಳ ಬೆಳೆಗಳ ಮೇಲೂ ದಾಳಿಮಾಡುವ ಸಾಧ್ಯತೆ ಇದೆ. ಶೇ.40 – 70 ರಷ್ಟು ಬೆಳೆ ಹಾನಿ ಸಾಧ್ಯತೆ ಇರುತ್ತದೆ.

ಪ್ರೌಢ ಪತಂಗವು ಮೊಟ್ಟೆಗಳನ್ನು ಗುಂಪಾಗಿ ಇಡುವುದರಿಂದ ಮೊಟ್ಟೆ ಹಾಗು ಮರಿ ಹುಳುಗಳನ್ನು ಆರಿಸಿ ತೆಗೆಯಬೇಕು. ಮರಿಹುಳು ಕಂಡತಕ್ಷಣ ಶೇ. 5ರ ಬೇವಿನ ಬೀಜದ ಕಷಾಯವನ್ನು ಸಿಂಪಡಿಸಬೇಕು. ನ್ಯುಮೋರಿಯಾ ರಿಲೇ ಜೈವಿಕ ಕೀಟನಾಶಕವನ್ನು 2 ಗ್ರಾಂ. ಪ್ರತಿ ಲೀ. ನೀರಿನಲ್ಲಿ ಬೆರೆಸಿ ಸಿಂಪಡಿಸಬೇಕು. ಇಮಾಮೆಕ್ಟಿನ್ ಬೆಂಜೋಯೇಟ್ 5% ಎಸ್.ಜಿ. @ 0.4ಗ್ರಾಂ. ಅಥ–ವಾ ಸ್ಪೈನೋಸೈಡ್ 45 ಎಸ್.ಸಿ. @ 0.3 ಮಿ.ಲೀ. ಪ್ರತಿ ಲೀಟರ್ ನೀರಿಗೆ ಮಿಶ್ರಣ ಮಾಡಿ ಸಿಂಪಡಿಸಬೇಕು. ಬೆಳೆದ ಹುಳುಗಳನ್ನು ಹತೋಟಿಯಲ್ಲಿಡಲು ವಿಷಪಾಷಾಣದ ಬಳಕೆ ಮಾಡಬಹುದು. 10 ಕೆ.ಜಿ. ತೌಡು, 5 ಕೆ.ಜಿ. ಬೆಲ್ಲ, 4–5 ಲೀ. ನೀರು ಕಲೆಸಿಟ್ಟು ಮಾರನೆ ದಿನ 100 ಗ್ರಾಂ. ಥಯೋಡಿಕಾರ್ಬ್ (ಪ್ರತಿ ಕೆ.ಜಿ ಭತ್ತದ ತೌಡಿಗೆ 10 ಗ್ರಾಂ. ನಂತೆ) ಕೀಟನಾಶಕ ಮಿಶ್ರಣಮಾಡಿ ಸಂಜೆ 5 ಗಂಟೆಯ ನಂತರ ಬೆಳೆಯ ಸುಳಿಯಲ್ಲಿ ಹಾಕಬೇಕು. ಕೀಟನಾಶಕ ಮತ್ತು ವಿಷಪಾಶಾಣವನ್ನು ಸುಳಿಯಲ್ಲಿ ನೀಡಬೇಕು. ವಿಷಪಾಶಾಣ ನೀಡಿದ ಮೆಕ್ಕೆಜೋಳದ ತಾಕಿನಲ್ಲಿ ಜಾನುವಾರುಗಳನ್ನು ಮೇಯಲು ಬಿಡಬಾರದು.

ಈ ಕೀಟವು ಮೆಕ್ಕೆಜೋಳದ ಬೆಳೆಯ ಮೇಲೆ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿರುವುದ–ರಿಂದ ಮೆಕ್ಕೆಜೋಳದ ಬದಲಾಗಿ ಹಿಂಗಾರು ಹಂಗಾಮಿನಲ್ಲಿ ಕೆಂಪು ಮಣ್ಣಿನಲ್ಲಿ ಸೂರ್ಯಕಾಂತಿ ಅಥವಾ ಶೇಂಗಾ ಬೆಳೆ ಬಿತ್ತನೆ ಮಾಡಬಹುದು. ಕಪ್ಪು ಮಣ್ಣಿನಲ್ಲಿ ಕಡಲೆ ಅಥವಾ ಹಿಂಗಾರಿ ಜೋಳ ಬೆಳೆಯನ್ನು ಬಿತ್ತನೆ ಮಾಡಬಹುದು. ಈ ಕೀಟ ನಿಂಂ–ಯಂತ್ರಣಕ್ಕೆ ಬೇಕಾದ ಔಷಧಿಗಳನ್ನು ರೈತರು ಸಮೀಪದ ರೈತ ಸಂಪರ್ಕ ಕೇಂದ್ರಗಳಲ್ಲಿ ಪಡೆದುಕೊಳ್ಳಬಹುದಾಗಿದೆ. ತುಂಗಭದ್ರಾ ಹಿನ್ನೀರು ಪ್ರದೇಶದಲ್ಲಿ (ನೀರಾವರಿ ಪ್ರದೇಶದಲ್ಲಿ) ರೈತರು ಮೆಕ್ಕೆಜೋಳ ಬದಲಾಗಿ ಹಿಂಗಾರು ಹಂಗಾಮಿನಲ್ಲಿ ಕೆಂಪು ಮಣ್ಣಿನಲ್ಲಿ ಸೂರ್ಯಕಾಂತಿ ಅಥವಾ ಶೇಂಗಾ ಬೆಳೆ ಬಿತ್ತನೆ ಮಾಡಬಹುದು. ಕಪ್ಪು ಮಣ್ಣಿನಲ್ಲಿ ಕಡಲೆ ಅಥವಾ ಹಿಂಗಾರಿ ಜೋಳ ಬೆಳೆಯನ್ನು ಬಿತ್ತನೆ ಮಾಡಬಹುದು.

ಹೆಚ್ಚಿನ ಮಾಹಿತಿಗಾಗಿ ಕೃಷಿ ವಿಜ್ಞಾನ ಕೇಂದ್ರ ಗಂಗಾವತಿಯ ಮುಖ್ಯಸ್ಥರಾದ ಡಾ.ರಾಘವೇಂದ್ರ ಯಲಿಗಾರ, ಮೊ.ನಂ 9480696316 ರವನ್ನು ಹಾಗೂ ತಮ್ಮ ಸಮೀಪದ ರೈತ ಸಂಪರ್ಕ ಕೇಂದ್ರಗಳ ಮುಖ್ಯಸ್ಥರನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಯಮಾನುಸಾರ ರಸಗೊಬ್ಬರ- ಬೀಜ ಮಾರಾಟದ ನಿಗಾವಹಿಸಲು- ತಪ್ಪಿಸ್ಥರ ವಿರುದ್ಧ ಕ್ರಮ ಕೈಗೊಳ್ಳಲು ಹಿರಿಯ ಅಧಿಕಾರಿಗಳ ತಂಡ-ಜಾರಿದಳ ರಚಿಸಿ: ಜಿಲ್ಲಾಧಿಕಾರಿ ದಿವ್ಯ ಪ್ರಭು

ಧಾರವಾಡ : ಧಾರವಾಡ ಜಿಲ್ಲೆಯಲ್ಲಿ ಮುಂಗಾರು ಬಿತ್ತನೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ರೈತ–ರಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳನ್ನು ಸರ್ಕಾರದ ನಿಯಮಗಳಂತೆ ನಿಗದಿತ ಸಮಯದಲ್ಲಿ, ನಿಗದಿಪಡಿಸಿದ ಬೆಲೆಯಲ್ಲಿ ರೈತರಿಗೆ ವಿತ–ರಿಸುವುದನ್ನು ಖಚಿತಪಡಿಸಿಕೊಳ್ಳುವ ಕುರಿತು ಜಾ–ರಿದಳ ತಂಡಗಳನ್ನು ರಚಿಸುವುದು ಅವಶ್ಯವಿದೆ.

ರಸಗೊಬ್ಬರ ಮಾರಾಟಗಾರರು ಸರಕಾರದ ನಿಯಮಗಳನ್ನು ಪಾಲಿಸದೇ, ರೈತರಿಗೆ ಅಧಿಕ ಬೆಲೆಗೆ ಗೊಬ್ಬರ ಮಾರಾಟ ಮಾಡುತ್ತಿರುವ ಬಗ್ಗೆ, ರಶೀದಿ ನೀಡದಿರುವ ಬಗ್ಗೆ, ಪಿಓಎಸ್ ಮಷಿನ್ ಉಪಯೋಗಿಸದಿರುವ ಬಗ್ಗೆ ಮತ್ತು ಕೃಷಿಕರಲ್ಲದವ–ರಿಗೆ ಗೊಬ್ಬರ ಮಾರಾಟ ಮಾಡುತ್ತಿರುವ ಬಗ್ಗೆ ಸಾರ್ವಜನಿಕರಿಂದ, ರೈತರಿಂದ ದೂರುಗಳ ಬಂದ ಹಿನ್ನಲೆಯಲ್ಲಿ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಇರುವ ಜಾರಿದಳ ತಂಡ ರಚಿಸಿ, ಇಂದಿನಿಂದಲೇ ಕಾರ್ಯನಿರ್ವಹಿಸಲು ಆದ–ೇಶ ಹೊರಡಿಸಲಾಗಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಆದೇಶಿಸಿರುವ ಅವರು, ರೈತರಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ಸರ್ಕಾರ ನಿಗದಿ ಪಡಿಸಿದ ದರದಂತೆ ಮಾರಾಟ ಮಾಡುತ್ತಿರುವುದನ್ನು, ದಾಸ್ತಾನು ಇರುವ ಬಗ್ಗೆ, ಸಾರ್ಜನಿಕರ ಮಾಹಿತಿಗಾಗಿ ಅಂಗಡಿ ಮುಂದೆ ಫಲಕ ಭಿತ್ತರಿಸುವುದು ಹಾಗೂ ಮಾರಾಟ ಮಾಡಿದ ಬಗ್ಗೆ, ರಶೀದಿಗಳನ್ನು ನೀಡುತ್ತಿರುವುದನ್ನು ಖಚಿತಪಡಿಕೊಳ್ಳುವುದು ಅಗತ್ಯವಿದೆ ಎಂದು ಹೇಳಿದ್ದಾರೆ.

ಅಲ್ಲದೇ ಅನಾವಶ್ಯಕವಾಗಿ ರಾಸಾಯನಿಕಗಳನ್ನು ರಸಗೊಬ್ಬರದೊಂದಿಗೆ ಲಿಂಕ್ ಮಾಡಿ ಮಾರಾಟ ಮಾಡುವುದನ್ನು ತಪ್ಪಿಸಲು, ಬಿತ್ತನೆ ಬೀಜ ಮತ್ತು ರಸಗೊಬ್ಬರಗಳನ್ನು ನಿಗದಿತ ದರಗಳಿಗಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡುವುದನ್ನು ನಿಯಂತ್ರಿಸಲು, ಗೊಬ್ಬರದ ಕೃತಕ ಅಭಾವ, ಕಳ್ಳ ಸಾಗಾಣಿಕೆ ಆಗದಂತೆ ತಡೆಯಲು ತಾಲ್ಲೂಕಿನಲ್ಲಿರುವ ಅಧಿಕೃತ ಮಾರಾಟಗಾರರ ಅಂಗಡಿಗಳು, ದಾಸ್ತಾನು ಕೇಂದ್ರಗಳಿಗೆ ಭೇಟಿ ನೀಡಿ, ತಪಾಸಣೆ ಮಾಡಲು ಅಧಿಕಾರಿಗಳ ಜಾರಿದಳ ತಂಡಗಳನ್ನು ರಚಿಸಿ ಆದ–ೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಕಲಘಟಗಿ ತಾಲೂಕು ಜಾರಿದಳ ತಂಡ: ಕಲಘಟಗಿ ಜಾರಿದಳದ ಅಧ್ಯಕ್ಷರಾಗಿ ಧಾರವಾಡ ಉಪವಿಭಾಗಾಧಿಕಾರಿ ಶಾಲಂ ಹುಸೇನ್ ಹಾಗೂ ಸದಸ್ಯರಾಗಿ ವಾಣಿಜ್ಯ ತೆರಿಗೆ ಇಲಾಖೆ ಎಸಿಸಿಟಿ–1 ಗೀತಾ ತೋರಣಗಟ್ಟಿ, ಪೊಲೀಸ್ ಸಬ್ ಇನ್ಸಪೆಕ್ಟರ್ ಗಿರೀಶ ಎಂ., ಹಿರಿಯ ಸಹಾಯಕ ತೋಟಗಾ–ರಿಕಾ ನಿರ್ದೇಶಕಿ ಶ್ರೀದೇವಿ ಎ.ಎಸ್., ಪಶುಪಾಲನೆ ಹಾಗೂ ಪಶು ವೈದ್ಯ ಸೇವಾ ಇಲಾಖೆ ಸಹಾಯಕ ನಿರ್ದೇಶಕ ಡಾ. ದೇವೆಂದ್ರ ಲಮಾಣಿ, ಆಹಾರ ನಿರೀಕ್ಷಕರು ಎಸ್. ಆರ್. ಬೆಂಗಳೂರಕರ್ ಇದ್ದಾರೆ. ಜಾರಿದಳದ ಸದಸ್ಯ ಕಾರ್ಯದರ್ಶಿಯಾಗಿ ಸಹಾಯಕ ಕೃಷಿ ನಿರ್ದೇಶಕ ಚನ್ನಪ್ಪ ಅಂಗಡಿ ಕಾರ್ಯ ನಿರ್ವಹಿಸಲಿದ್ದಾರೆ.

ಧಾರವಾಡ ತಾಲೂಕು ಜಾರಿದಳ ತಂಡ: ಧಾರವಾಡ ತಾಲೂಕು ಜಾರಿದಳದ ಅಧ್ಯಕ್ಷರಾಗಿ ತಹಶೀಲ್ದಾರ ಡಾ. ದೊಡ್ಡಪ್ಪ ಹೂಗಾರ ಹಾಗೂ ಸದಸ್ಯರಾಗಿ ವಾಣಿಜ್ಯ ತೆರಿಗೆ ಇಲಾಖೆ ಎಸಿಸಿಟಿ–2 ಸುಮೀತಾ ಚಿಮ್ಮನಕಟ್ಟಿ, ಗರಗ ಪೊಲೀಸ್‌ಸಬ್ ಇನ್ಸಪೇಕ್ಟರ್ ಶಿದ್ರಾಮ ಉಣ್ಣದ,




ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕ ಇಮ್ತಿಯಾಜ ಚಂಗಾಪುರಿ, ಪಶುಪಾಲನೆ ಹಾಗೂ ಪಶು ವೈದ್ಯ ಸೇವಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಪ್ರಕಾಶ ಬೆನ್ನೂರ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಡಿ.ಪಾಟೀಲ್ ಇದ್ದಾರೆ.

ಈ ಜಾರಿದಳದ ಸದಸ್ಯ ಕಾರ್ಯದರ್ಶಿಗಳಾಗಿ ಸಹಾಯಕ ಕೃಷಿ ನಿರ್ದೇಶಕ ರಾಜಶೇಖರ ಅಣಗೌಡರ ಕಾರ್ಯನಿರ್ವಹಿಸಲಿದ್ದಾರೆ.

ಅಳ್ನಾವರ ತಾಲೂಕು ಜಾರಿದಳ ತಂಡ: ಅಳ್ನಾವರ ತಾಲೂಕು ಜಾರಿದಳದ ಅಧ್ಯಕ್ಷರಾಗಿ ತಹಶೀಲ್ದಾರ ಬಸವರಾಜ ಬೆಣ್ಣೆಶಿರೂರ ಹಾಗೂ ಸದಸ್ಯರಾಗಿ ವಾಣಿಜ್ಯ ತೆರಿಗೆ ಇಲಾಖೆ, ಸಿಟಿಓ–2 ಅನಿತಾ ಬಾಗೋಜಿ, ಪೊಲೀಸ ಸಬ್ ಇನ್ಸಪೆಕ್ಟರ್ ಬಸವರಾಜ ಏದ್ದಲಗುಡ್ಡ, ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕ ಇಮ್ತಿಯಾಜ ಚಂಗಾಪುರಿ, ಪಶುಪಾಲನ ಹಾಗೂ ಪಶು ವೈದ್ಯ ಸೇವಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಸುನೀಲ ಬನ್ನಿಗೋಳ, ಆಹಾರ ನಿರೀಕ್ಷಕ ವಿನಾಯಕ ದಿಕ್ಷೀತ ಇದ್ದಾರೆ.

ಈ ಜಾರಿದಳದ ಸದಸ್ಯ ಕಾರ್ಯದರ್ಶಿಗಳಾಗಿ ಸಹಾಯಕ ಕೃಷಿ ನಿರ್ದೇಶಕ ರಾಜಶೇಖರ ಅಣಗೌಡರ ಕಾರ್ಯನಿರ್ವಹಿಸಲಿದ್ದಾರೆ.

ಹುಬ್ಬಳ್ಳಿ ತಾಲೂಕು ಜಾರಿದಳ ತಂಡ: ಹುಬ್ಬಳ್ಳಿ ತಾಲೂಕು ಜಾರಿದಳದ ಅಧ್ಯಕ್ಷರಾಗಿ ತಹಶೀಲ್ದಾರ ಜೆ. ಬಿ. ಮಜ್ಜಗಿ ಅಧ್ಯಕ್ಷರಾಗಿ ಮತ್ತು ಸದಸ್ಯರಾಗಿ ವಾಣಿಜ್ಯ ತೆರಿಗೆ ಇಲಾಖೆ, ಎಸಿಸಿಟಿ–3 ಶ್ರೀಶೈಲ ದೊಡಮನಿ, ಪೊಲೀಸ ಸಬ್ ಇನ್ಸ್‌ಪೆಕ್ಟರ್ ಸಚೀನ ಅಲ್ಮೇಕರ್, ಹಿರಿಯ ಸಹಾಯಕ ತೋಟಕಾರಿಕಾ ನಿರ್ದೇಶಕ ಅಜೀತಕುಮಾರ ಎಸ್. ಮಶಾಲ್ದಿ, ಪಶುಪಾಲನ ಹಾಗೂ ಪಶು ವೈದ್ಯ ಸೇವಾ ಇಲಾಖೆ ಸಹಾಯಕ ನಿರ್ದೇಶಕ ಆರ್.ವಾಯ್.ಹೊಸಮನಿ, ಆಹಾರ ನಿರೀಕ್ಷ ಎನ್.ಎಸ್.ಪಟ್ಟೇದ ಇದ್ದಾರೆ.

ಈ ಜಾರಿದಳದ ಸದಸ್ಯ ಕಾರ್ಯದರ್ಶಿಯಾಗಿ ಸಹಾಯಕ ಕೃಷಿ ನಿರ್ದೇಶಕಿ ಮಂಜುಳಾ ತೆಂಬದ ಕಾರ್ಯನಿರ್ವಹಿಸಲಿದ್ದಾರೆ.

ಹುಬ್ಬಳ್ಳಿ ನಗರ ತಾಲೂಕು ಜಾರಿದಳ ತಂಡ: ಹುಬ್ಬಳ್ಳಿ ತಾಲೂಕು ಜಾರಿದಳದ ಅಧ್ಯಕ್ಷರಾಗಿ ಹುಬ್ಬಳ್ಳಿ ನಗರ ತಹಶೀಲ್ದಾರ ಭಗವಂತ ಗಸ್ತೆ ಹಾಗೂ ಸದಸ್ಯರಾಗಿ ವಾಣಿಜ್ಯ ತೆರಿಗೆ ಇಲಾಖೆ, ಸಿಟಿಓ–3 ಹಸೀನಾ ಬಾಲ್ದಾರ, ಸಂಬಂಧ ಪಟ್ಟ ಪ್ರದೇಶದ ಪೊಲೀಸ್ ಸಬ್ ಇನ್ಸ್‌ಪೆಕ್ಟರ್, ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕ ಅಜೀತಕುಮಾರ ಎಸ್. ಮಶಾಲ್ದಿ, ಪಶುಪಾಲನ ಹಾಗೂ ಪಶು ವೈದ್ಯ ಸೇವಾ ಇಲಾಖೆ ಸಹಾಯಕ ನಿರ್ದೇಶಕ ಆರ್. ವಾಯ್. ಹೊಸಮನಿ, ಆಹಾರ ಇಲಾಖೆ ಸಹಾಯಕ ನಿರ್ದೇಶಕಿ ವಸುಂದರಾ ಹೆಗಡೆ ಇದ್ದಾರೆ.

ಈ ಜಾರಿದಳದ ಸದಸ್ಯ ಕಾರ್ಯದರ್ಶಿಯಾಗಿ ಸಹಾಯಕ ಕೃಷಿ ನಿರ್ದೇಶಕಿ ಮಂಜುಳಾ ತೆಂಬದ ಕಾರ್ಯನಿರ್ವಹಿಸಲಿದ್ದಾರೆ.

ಕುಂದಗೋಳ ತಾಲೂಕು ಜಾರಿದಳ ತಂಡ: ಕುಂದಗೋಳ ತಾಲೂಕು ಜಾರಿದಳದ ಅಧ್ಯಕ್ಷರಾಗಿ ತಹಶೀಲ್ದಾರ ರಾಜು ಮಾವರಕರ್ ಹಾಗೂ ಸದಸ್ಯರಾಗಿ ವಾಣಿಜ್ಯ ತೆರಿಗೆ ಇಲಾಖೆ, ಸಿಟಿಓ–8 ಶಿವಲೀಲಾ ಮಿರ್ಜಿ, ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಇಮ್ರಾನ್ ಪಠಾಣ, ಸಹಾಯಕ ತೋಟಗಾರಿಕಾ ನಿರ್ದೇಶಕ ಉಮೇಶ ಉಳ್ಳಾಗಡ್ಡಿ, ಪಶುಪಾಲನ ಹಾಗೂ ಪಶು ವೈದ್ಯ ಸೇವಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಹೆಚ್. ಸಿ. ಪಾಟೀಲ್, ಆಹಾರ ನಿರೀಕ್ಷಕ ಶಂಕರ ಜೋಶಿ ಇದ್ದಾರೆ.

ಈ ಜಾರಿದಳದ ಸದಸ್ಯಕಾರ್ಯದರ್ಶಿಯಾಗಿ ಸಹಾಯಕ ಕೃಷಿ ನಿರ್ದೇಶಕ ಭಾರತಿ ಮೆಣಸಿನಕಾಯಿ ಕಾರ್ಯ ನಿರ್ವಹಿಸಲಿದ್ದಾರೆ.

ನವಲಗುಂದ ತಾಲೂಕು ಜಾರಿದಳ ತಂಡ: ನವಲಗುಂದ ತಾಲೂಕು ಜಾರಿದಳದ ಅಧ್ಯಕ್ಷರಾಗಿ ತಹಶೀಲ್ದಾರ ಎಸ್. ಪಿ. ಸಾಹುಕಾರ ಹಾಗೂ ಸದಸ್ಯರಾಗಿ ವಾಣಿಜ್ಯ ತೆರಿಗೆ ಇಲಾಖೆ, ಸಿಟಿಓ–5 ಮಂಜುನಾಥ ಬೆಣಗಿ, ಪೊಲೀಸ ಸಬ್ ಇನ್ಸ್‌ಪೆಕ್ಟರ್ ಜನಾರ್ಧನ ಭತ್ರಳ್ಳಿ, ಹಿರಿಯ ಸಹಾಯಕ ತೋಟಗಾ–ರಿಕಾ ನಿರ್ದೇಶಕ ಯೋಗೇಶ ಕಿಲಾರಿ, ಪಶುಪಾಲನ ಹಾಗೂ ಪಶು ವೈದ್ಯ ಸೇವಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಮನೋಹರ ದ್ಯಾಬೇರಿ, ಆಹಾರ ನಿರೀಕ್ಷಕ ಟಿ. ಎಲ್. ಮುತ್ತಣ್ಣವರ ಇದ್ದಾರೆ.

ಈ ಜಾರಿದಳದ ಸದಸ್ಯ ಕಾರ್ಯದರ್ಶಿಯಾಗಿ ಸಹಾಯಕ ಕೃಷಿ ನಿರ್ದೇಶಕ ತಿಪ್ಪೆಸ್ವಾಮಿ ಟಿ. ಅವರು ಕಾರ್ಯ ನಿರ್ವಹಿಸಲಿದ್ದಾರೆ.

ಅಣ್ಣಿಗೇರಿ ತಾಲೂಕು ಜಾರಿದಳ ತಂಡ: ಅಣ್ಣಿಗೇರಿ ತಾಲೂಕು ಜಾರಿದಳದ ಅಧ್ಯಕ್ಷರಾಗಿ ತಹಶೀಲ್ದಾರ ಎಂ.ಜಿ.ದಾಸಪ್ಪನವರ ಹಾಗೂ ಸದಸ್ಯರಾಗಿ ವಾಣಿಜ್ಯ ತೆರಿಗೆ ಇಲಾಖೆ, ಸಿಟಿಓ–6 ಮಂಜುನಾಥ ನಾಯ್ಕ, ಪೊಲೀಸ ಸಬ್ ಇನ್ಸ್‌ಪೇಕ್ಟರ್ ಬಸವರಾಜ ಏದ್ದಲಗುಡ್ಡ, ಹಿರಿಯ ಸಹಾಯಕ ತೋಟಗಾ–ರಿಕಾ ನಿರ್ದೇಶಕ ಯೋಗೇಶ ಕಿಲಾರಿ, ಪಶುಪಾಲನ ಹಾಗೂ ಪಶು ವೈದ್ಯ ಸೇವಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಶ್ರೀಕಾಂತ ಕಲಬುರಗಿ, ಆಹಾರ ಶಿರಸ್ತೇದಾರ ರಾಜು ದೊಡ್ಡಮನಿ ಅವರು ಇದ್ದಾರೆ.

ಈ ಜಾರಿದಳದ ಸದಸ್ಯ ಕಾರ್ಯದರ್ಶಿಯಾಗಿ ಸಹಾಯಕ ಕೃಷಿ ನಿರ್ದೇಶಕ ತಿಪ್ಪೆಸ್ವಾಮಿ ಟಿ. ಅವರು ಕಾರ್ಯ ನಿರ್ವಹಿಸಲಿದ್ದಾರೆ.

ಈ ತಂಡಗಳು ಕೂಡಲೇ ತಮ್ಮ ತಾಲ್ಲೂಕಿನಲ್ಲಿರುವ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ಅಧಿಕೃತ ಮಾರಾಟಗಾರರ ದಾಸ್ತಾನು ಕೇಂದ್ರಗಳಿಗೆ ಭೇಟಿ ನೀಡಿ, ತಪಾಸಣೆ ಕೈಗೊಂಡು, ಸರ್ಕಾರದ ನಿಯಮಗಳನ್ವಯ ಮಾರಾಟ ಮಾಡುತ್ತಿರುವುದನ್ನು ಮತ್ತು ರೈತರಿಗೆ ಯಾವುದೇ ರೀತಿ ತೊಂದರೆಯಾಗದಂತೆ ಸರ್ಕಾರದ ನಿಯಮಗಳನ್ನು ಪಾಲನೆಯಾಗುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶಿಸಿದ್ದಾರೆ.

ಜಾರಿದಳದ ಅಧಿಕಾರಿಗಳು, ಆದೇಶದಲ್ಲಿ ಸೂಚಿಸಿರುವ ಕಾರ್ಯದಲ್ಲಿ ಯಾವುದಾದರೂ ಲೋಪಗಳು ಕಂಡುಬಂದಲ್ಲಿ ಅವರ ವಿರುದ್ಧ ಶಿಸ್ತುಕ್ರಮಗಳನ್ನು ಜರುಗಿಸಲು ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಆದೇಶದಲ್ಲಿ ತಿಳಿಸಿದ್ದಾರೆ.

***

# ಶ್ರೀ ಮಹಾಲಕ್ಷ್ಮಿ ದೇವಿ - ದ್ಯಾಮವ್ವ ದೇವರಿಗೆ ವಿಶೇಷ ಪೂಜೆ



ಹಳ್ಳೂರ 01 ಹಳ್ಳೂರ ಗ್ರಾಮದಲ್ಲಿ ನೆಲೆ ಆಗಿ ನೆಲೆಸಿರುವ ಹಳ್ಳೂರ, ಕಪ್ಪಲಗುದ್ದಿ, ಶಿವಾಪೂರ ಮೂರೂರು ಗ್ರಾಮದ ಆರಾಧ್ಯ ದೇವರಾದ ಜಾಗೃತ ಶ್ರೀ ಮಹಾಲಕ್ಷ್ಮಿ ದೇವಿ ಹಾಗೂ ದ್ಯಾಮವ್ವ ದೇವರ ಕಡೇ ವಾರದ ನಿಮಿತ್ಯ ಹಳ್ಳೂರಲ್ಲಿ ಹೆಚ್ಚಾಗಿ ಭಕ್ತ ಸಮೂಹ ,ಅಂಗಡಿಗಳು ಕೂಡಿ ಹಬ್ಬದ ವಾತಾವರಣ ಕಂಡು ಬಂದಿತು.ಮುಂಜಾನೆ ಶ್ರೀ ಮಹಾಲಕ್ಷ್ಮಿ ದೇವಿ ಹಾಗೂ ದ್ಯಾಮವ್ವ ದೇವರಿಗೆ ವಿಶೇಷ ಪೂಜೆ ಅಭಿಷೇಕ,ಹಾಗೂ ಉಡಿ ತುಂಬುವ ಕಾರ್ಯಕ್ರಮ ನೆರವೇರಿತು.ಮೂರೂರು ಗ್ರಾಮದ ಬಕ್ತರು ಕೃಷ್ಣ ನದಿಯ ನೀರು,ಬಾವಿ ,ಬೋರಿನ ನೀರನ್ನು ತಂದು ಗ್ರಾಮದ ಎಲ್ಲ ದೇವರಿಗೆ ನೀರು ಅರ್ಪಿಸಿದರು. ಹೆಣ್ಣುಮಕ್ಕಳು ಗ್ರಾಮದ ಎಲ್ಲ ದೇವರಿಗೆ ತಣ ಗಡಬು, ಅನ್ನ, ಅಂಬಲಿ ನೈವೇದ್ಯ ಅರ್ಪಿಸಿದರು. ದೇವಸ್ಥಾನದಲ್ಲಿ ಬಕ್ತ ಸಾಗರವೇ ಹರಿದು ಬಂದಿತು. ಕಡೆ ವಾರದ ನಿಮಿತ್ಯ ಡೊಳ್ಳಿನ ಪದಗಳು ಭಕ್ತಿ ಗೀತೆಗಳು ನಡೆದವು ಸರ್ವರಿಗೂ ಮಹಾ ಪ್ರಸಾದ ವ್ಯವಸ್ಥೆ ನಡೆಯಿತು.ಹಳ್ಳೂರ, ಕಪ್ಪಲಗುದ್ದಿ, ಶಿವಾಪೂರ ಗ್ರಾಮದ ಗುರು ಹಿರಿಯರ ಸಮ್ಮುಖದಲ್ಲಿ ಕಡೇ ವಾರದ ಕಾರ್ಯಕ್ರಮ ನೆರವೇರಿತು.

# ರಜೆ ದಿನದಂದು ಉಪನೋಂದಣಿ ಕಛೇರಿ ಕಾರ್ಯನಿರ್ವಹಣೆ

ಬೆಳಗಾವಿ, : ಸಾರ್ವಜನಿಕ ಅನುಕೂಲಕ್ಕಾಗಿ ರಾಜ್ಯದಲ್ಲಿ ಈಗಾಗಲೇ 2 ನೇ ಮತ್ತು 4 ನೇ ಶನಿವಾರ, ಭಾನುವಾರಗಳ ರಜಾ ದಿನದಂದು ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಉಪನೋಂದಣಿ ಕಛೇ-ರಿಗಳು ಸದರಿ ಆಧಾರದ ಮೇಲೆ ಕಾರ್ಯನಿರ್ವಹಿಸಲು ಸರ್ಕಾರ ಆದೇಶ ಮಾಡಿದ್ದು, ಅದರಂತೆ ಬೆಳಗಾವಿ ಜಿಲ್ಲೆಯ ಕಾಗವಾಡ ತಾಲೂಕಿನ ಉಪನೋಂದಣಿ ಕಛೇರಿಯು ಜುಲೈ 6, 2025 ರಂದು ಕಾರ್ಯನಿರ್ವಹಿಸಲಿದ್ದು, ಎಂದಿನಂತೆ ಕಛೇರಿಯಲ್ಲಿ ಜಿಲ್ಲೆಯ ಯಾವುದೇ ಸ್ವತ್ತುಗಳ ನೋಂದಣಿ ಮಾಡಬಹುದಾಗಿದೆ. ಕಾರಣ ಸಾರ್ವಜನಿಕರಿಗೆ ಇದರ ಸದುಪಯೋಗ ಮಾಡಿಕೊಳ್ಳಬೇಕು. ಮುಂದುವರಿದು ಭಾನುವಾರ ಕಛೇರಿಯು ಕಾರ್ಯನಿರ್ವಹಿಸುವುದರಿಂದ ಬರುವ ಜುಲೈ 8, 2025 ರಂದು ಈ ಕಛೇ-ರಿಗೆ ರಜೆ ಇರುತ್ತದೆ ಎಂದು ಕಾಗವಾಡದ ಉಪನೋಂದಣಾಧಿಕಾರಿ ಆರ್.ವಾಯ್. ಮುಕ್ಕನ್ನವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

***

### ವಚನ ಪಿತಾಮಹ ಡಾ. ಫ.ಗು.ಹಳಕಟ್ಟಿಯವರ ಜನ್ಮದಿನ ಹಾಗೂ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ

# ಡಾ. ಫ.ಗು.ಹಳಕಟ್ಟಿ ವಚನ ಸಾಹಿತ್ಯದ ಮೌಲ್ಯಗಳನ್ನು ಜಗತ್ತಿಗೆ ನೀಡಿದ ಮಹಾನ ವ್ಯಕ್ತಿ: ಬಿ.ಎಸ್.ಗಂಗನಹಳ್ಳಿ

ಬೆಳಗಾವಿ, ನಶಿಸಿ ಹೊಗುತ್ತಿದ್ದಂತಹ ವಚನಗಳ ಕಟ್ಟುಗಳನ್ನು ಹುಡುಕಿ ಅವುಗಳನ್ನು ಮುದ್ರಿಸಿ ಪುಸ್ತಕದಲ್ಲಿ ಪ್ರಕಟಣೆ ಮಾಡುವದರ ಮೂಲಕ ವಚನ, ಸಾಹಿತ್ಯದ ಮೌಲ್ಯಗಳನ್ನು ಜಗತ್ತಿಗೆ ಕೊಟ್ಟಂತಹ ಮಹಾನ ವ್ಯಕ್ತಿ ಡಾ. ಫ. ಗು. ಹಳಕಟ್ಟಿಯವರು ಎಂದು ಬಿ.ಎಸ್. ಗಂಗನಹಳ್ಳಿ ಅವರು ನುಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಂ-ಯುಕ್ತ ಆಶ್ರಯದಲ್ಲಿ ಬುಧವಾರ (ಜು.02) ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಡಾ. ಫ.ಗು.ಹಳಕಟ್ಟಿಯವರ ಜನ್ಮ ದಿನ ಹಾಗೂ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಡಾ.ಫ. ಗು ಹಳಕಟ್ಟಿ ಅವರು ವಚನಗಳ ಮೌಲ್ಯವನ್ನು ಜಗತ್ತಿಗೆ ಸಾರಬೇಕು ಎಂಬ ಧ್ಯೇಯೊದ್ಧೇಶದೊಂದಿಗೆ ಬೆಳಗಾವಿಯ ಚೌಗಲೆ ಅವರ ಮುದ್ರಣಾಲಯದಲ್ಲಿ ತಮ್ಮ ಮೊದಲ ಗ್ರಂಥಗಳನ್ನು ಮುದ್ರಿಸಿ ಪ್ರಕಟಿಸಿ ಶ್ರೀಮಂತ ಶರಣ ಸಾಹಿತ್ಯವನ್ನು ಜಗತ್ತಿಗೆ ಪರಿಚಯಿಸುತ್ತಾರೆ. ವಕೀಲ ವೃತ್ತಿಯೊಂದಿಗೆ 1000 ಕಟ್ಟುಗಳನ್ನು ಸಂಗ್ರಹಿಸಿ, 250 ವಚನಕಾರರ ಬಗ್ಗೆ ತಿಳಿಸಿಕೊಟ್ಟಿದ್ದಾರೆ, 42 ರಗಳೆಗಳನ್ನು ಪ್ರಕಟಿಸಿಸುವದರ ಮೂಲಕ ವಚನಗಳನ್ನು ಜನ ಸಾಮಾನ್ಯರಿಗೆ ತಲುಪಿಸಿದ್ದಾರೆ. ವಿಜಯಪುರದಲ್ಲಿ ವಕೀಲ ವೃತ್ತಿ ಪ್ರಾರಂಭಿಸಿದ ಅವರು ಕನ್ನಡದ ಉಳಿವಿಗಾಗಿ ಬಹಳಷ್ಟು ಶ್ರಮ ವಹಿಸಿ ವಿವಿಧ ಸಂಘ- ಸಂಸ್ಥೆಗಳನ್ನು ಕಟ್ಟಿ ಹಲವಾರು ಜನರಿಗೆ ಉದ್ಯೋಗ ಕೊಟ್ಟಂತವರು. ವಚನ ಸಾಹಿತ್ಯದ ಸಂರಕ್ಷಣೆ ಸಲುವಾಗಿ ತಾವು ವಾಸವಿರುವ ಮನೆಯನ್ನು ಮಾರಿ, ಕಷ್ಟಕರ ಸಮಯದಲ್ಲಿ ಧೃತಿಗೆಡದೆ ವಚನ ಸಾಹಿತ್ಯವನ್ನು ಸಂರಕ್ಷಿಸಿದವರು. ಹಿತಚಿಂತಕ ಎಂಬ ಮುದ್ರಣಾಲಯವನ್ನು ಸ್ಥಾಪಿಸಿ ವಚನ ಸಾಹಿತ್ಯಗಳನ್ನು ಪುಸ್ತಕಗಳಲ್ಲಿ ಮುದ್ರಿಸಿ ವಚನ ಸಾಹಿತ್ಯಗಳನ್ನು ರಕ್ಷಿಸಿ ಜನ ಮನ್ನನೆ ಪಡೆಯುತ್ತಾರೆ. ಡಾ. ಫ. ಗು. ಹಳಕಟ್ಟಿಯವರಿಗೆ ಸಾಹಿತಿಗಳಾದ ಸಿಂಪಿ ಲಿಂಗಣ್ಣನವರು ಕರ್ನಾಟಕದ ಮ್ಯಾಕ್ಸಮುಲ್ಲರ ಎಂದು ಕರೆದಿದ್ದಾರೆ ಎಂದು ಗಂಗನಹಳ್ಳಿಯವರು ತಿಳಿಸಿದರು.

ವಚನ ಸಾಹಿತ್ಯಗಳನ್ನು ಮೊದಲಬಾರಿಗೆ ಇಂಗ್ಲಿಷ್‌ಗೆ ಭಾಷಾಂತರಿಸಿ ಮುದ್ರಿಸಿದವರು ಡಾ. ಫ.ಗು. ಹಳಕಟ್ಟಿಯವರು. ತಮ್ಮ ಮುದ್ರಣಾಲಯದ ನೌಕರರನ್ನು ಕೆಲಸಗಾರರೆಂದು ಗುರತಿಸದೆ, ತಮ್ಮ ಮಕ್ಕಳು, ಅಣ್ಣ-ತಮ್ಮಂದಿರ ಹಾಗೆ ನೋಡಿಕೊಳ್ಳುತ್ತಿದ್ದಂತಹ ಮಹಾನ ಮಾನವಿಯ ಗುಣವುಳ್ಳ ವ್ಯಕ್ತಿತ್ವ ಅವರದ್ದು. ತಮ್ಮ ಸೇವೆಯಿಂದ ಗುರುತಿಸಿಕೊಂಡ ಅವರ ಹೆಸರು ಇತಿಹಾಸದಲ್ಲಿ ಅಜರಾಮರವಾಗಿ ಉಳಿದಿದೆ ಎಂದು ಪ್ರಾಧ್ಯಾಪಕರಾದ ಡಾ. ಬಿ.ಎಸ್. ಗಂಗನಹಳ್ಳಿ ಅವರು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಆಗಮಿಸಿದ ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷರಾದ ಬಸವರಾಜ ರೊಟ್ಟಿ ಅವರು ಮಾತನಾಡಿ 12ನೇ ಶತಮಾನದಲ್ಲಿ ಬಸವಾದಿ ಶಿವ-ಶರಣರು ಕನ್ನಡದಲ್ಲಿ ವಚನ ಸಾಹಿತ್ಯವನ್ನು ಸಾಮಾನ್ಯ ಜನರಿಗೆ ತಲುಪಿಸಿದ್ದರು, ಕನ್ನಡ ಸಾಹಿತ್ಯ ಅತ್ಯಂತ ಶ್ರೀಮಂತ ವಚನ ಸಾಹಿತ್ಯವನ್ನು ಜನ-ರಿಗೆ ಕೊಟ್ಟವರು. ವಚನ ಸಾಹಿತ್ಯಗಳನ್ನು ತಿಳಿದುಕೊಂಡು ಜೀವನ ನಡೆಸಿದರೆ ನಮ್ಮ ಜೀವನ ಸಾರ್ಥಕವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಮಹಾನಗರ ಪಾಲಿಕೆ ಉಪ ಆಯುಕ್ತ ಉದಯಕುಮಾರ ತಳವಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ವಿದ್ಯಾವತಿ ಭಜಂತ್ರಿ, ನಗರ ಸೇವಕ ಮುಸ್ತಾಕ ಮುಲ್ಲಾ, ಗಣ್ಯರಾದ ಮುರಗೇಶ ಶಿವಪೂಜಿ, ಬಸವರಾಜ ರೊಟ್ಟಿ, ರಾಜಶೇಖರ ಖೋತ, ಆಶಾ ಚನ್ನನವರ, ಸಿ.ಎಮ್. ಬೂದಿಹಾಳ, ಎ.ವಾಯ್.ಬೆಂಡಿಗೇರಿ, ಮೋಹನ ಗುಂಡ್ಲೂರ ಹಾಗೂ ಮತ್ತಿತರು ಉಪಸ್ಥಿತರಿದ್ದರು.

# ಗ್ರಾಮದೇವತೆಯರ ಹೊನ್ನಾಟ ಕಾರ್ಯಕ್ರಮ



ಗೋಕಾಕ: ನಗರದ ಗ್ರಾಮದೇವತೆಯರ ಹೊನ್ನಾಟ ಕಾರ್ಯಕ್ರಮವು ಮಂಗಳವಾರ ರಾತ್ರಿ 11 ಘಂಟೆಗೆ ಪ್ರಾರಂಭಗೊಂಡು ಬುಧವಾರ ಮುಂಜಾನೆ 8 ಘಂಟೆಯವರೆಗೂ ಜರುಗಿತು.

ಅಂಬಿಗೇರ ಗಲ್ಲಿಯಿಂದ ಪ್ರಾರಂಭಗೊಂಡು ಉಭಯ ದೇವಿಯರು ಹೊನ್ನಾಟ ಆಡುತ್ತಾ ಕಿಲ್ಲಾ, ಬನಶಂಕರಿ ಗುಡಿಯ ಸಮೀಪ ಇರುವ ನಿಪ್ಪಾಣಿ, ದೇಶಪಾಂಡೆ, ಚವ್ಹಾಣ, ಮಾಲದಿನ್ನಿ, ಈಗವೆ, ಬಾಣಕರಿ, ವಾಳವಿ ಅವರ ಮನೆಗಳಲ್ಲಿ ಉಡಿ ತುಂಬಿಸಿಕೊಂಡು ಸೋಮವಾರ ಪೇಠೆಯ ಹಿಡಕಲ್ ರಾವಸಾಬ ಮನೆಯ ಅಂಗಳದಲ್ಲಿ ಆಸೀನರಾದರು.

ಹೊನ್ನಾಟದ ಹಿನ್ನೆಲೆ : ಗೋಕಾಕ ಜಾತ್ರೆಯ ಸಂದರ್ಭದಲ್ಲಿ ಗ್ರಾಮದೇವಿಯ ಹೊನ್ನಾಟ ವಿಶೇಷತೆಯನ್ನು ಪಡೆದುಕೊಂಡಿರುತ್ತದೆ. ಈ ಹೊನ್ನಾಟಕ್ಕೂ ಒಂದು ಹಿನ್ನಲೆಯಿದೆ. ತವರು ಮನೆ ಸೇರಿದ ದ್ಯಾಮವ್ವಳನ್ನು ಕರೆಯಲು ರಾಣಿಗ ಹೋದಾಗ ಆತ ಎಷ್ಟೇ ಕರೆದರೂ ದ್ಯಾಮವ್ವ ಆತನ ಜೊತೆಗೆ ಹೋಗಲು ಒಪ್ಪಿಕೊಳ್ಳುವುದಿಲ್ಲ. ಇದ-ರಿಂದಾಗಿ ಕೋಪಗೊಳ್ಳುವ ಆತ ಆಕೆಯ ಮೇಲೆ ಕೆಲವು ಅವಗುಣಗಳನ್ನು ಹೊರಿಸಿ ನಿಂದಿಸಲಾರಂಭಿಸುತ್ತಾನೆ. ಆಗ ಆತನಾಡುವ ಮಾತುಗಳನ್ನು ಕೇಳಿ ಕುಪಿತಳಾಗುವ ಶಾಂತಸ್ವರೂಪಿ ದ್ಯಾಮವ್ವ ಚಂಡಿ, ಚಾಮುಂಡಿ ಹಾಗೂ ದುರ್ಗೆಯ ರೂಪತಾಳಿ ರಾಣಿಗನನ್ನು ಬೆನ್ನಟ್ಟುತ್ತಾಳೆ. ಆಗ ಆಕೆಯಿಂದ ತಪ್ಪಿಸಿಕೊಳ್ಳಲು ರಾಣಿಗ ಹರಸಾಹಸ ಪಡುತ್ತಾನೆ. ಈ ರೀತಿ ದ್ಯಾಮವ್ವ ರಾಣಿಗನನ್ನು ಬೆನ್ನಟ್ಟುವುದೇ 'ಹೊನ್ನಾಟ' ಎಂಬ ಪ್ರತೀತಿ ಇದೆ.

10 ವರ್ಷಗಳ ನಂತರ ನಡೆಯುತ್ತಿರುವ ವಿಶೇಷ ಜಾತ್ರೆಯ ಸವಿಗಳಿಗೆಯಲ್ಲಿ ಅಬಾಲವೃದ್ಧರಾಗಿ ಎಲ್ಲರೂ ಮಿಂದೇಳುತ್ತಿದ್ದಾರೆ. ಅಲ್ಲದೇ ಗೋಕಾಕ ನಗರ ಸಂಪೂರ್ಣ ಶೃಂಗಾರಗೊಂಡಿದ್ದು, ಬೀಗರು, ಸಂಬಂಧಿಕರು, ಉದ್ಯೋಗ ಅರಿಸಿ ಹೋದವರು, ಮಿತ್ರರು ಪರಿಚಯಿಸ್ಥರು, ಎಲ್ಲರೂ ಮತ್ತೆ ಊರ ಕಡೆಗೆ ಮುಖ ಮಾಡಿದ್ದು ಪರಸ್ಪರ ಕುಶಲೋಪರಿ ಹಂಚಿಕೊಳ್ಳುತ್ತಿರುವ ದೃಶ್ಯ ನಗರದಲ್ಲಿ ಸಾಮಾನ್ಯವಾಗಿದೆ. ರಾತ್ರಿ 12ಗಂಟೆಗೆ ಪ್ರಾರಂಭವಾದ ದೇವಿಯರ ಹೊನ್ನಾಟದಲ್ಲಿ ಲಕ್ಷಾಂತರ ಸಂಖ್ಯೆಯಲ್ಲಿ ಜನತೆ ಭಾಗವಹಿಸಿತ್ತು. ಅದರಲ್ಲೂ ಮಹಿಳೆಯರೇ ಹೆಚ್ಚಾಗಿ ಗಮನ ಸೆಳೆದರು. ದೇವಿ ಹೊನ್ನಾಟವಾಡುತ್ತಾ ನಗರದ 50ಕ್ಕೂ ಹೆಚ್ಚು ಮನೆ ಮನೆಯಲ್ಲಿ ಉಡಿ ತುಂಬಿಸಿಕೊಳ್ಳುವ ಕಾರ್ಯಕ್ರಮ ಅದ್ದೂರಿಯಿಂದ ನಡೆಯುತ್ತಿರುವ ದೃಶ್ಯವನ್ನು ಜನ ಕಣ್ಣತುಂಬಿಕೊಂಡರು.

ಜಾತ್ರೆ ಆರಂಭವಾಗಿ 3 ದಿನಗಳು ಕಳೆದರೂ ಸಡಗರ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಭಕ್ತರ ದಂಡು ನಿತ್ಯ ಲಕ್ಷಾಂತರ ಸಂಖ್ಯೆಯಲ್ಲಿ ಬಂದು ದೇವಿಗೆ ಉಡಿ ತುಂಬಿ ಹರಕೆ ಹರಿಸುವಂತೆ ಬೇಡುತ್ತಿದ್ದಾರೆ. ಬೆಳಿಗ್ಗೆಯಿಂದ ಭಕ್ತರ ಸಂಖ್ಯೆ ಹೆಚ್ಚಾಗಿದ್ದು ದೇವಿಯರ ದರ್ಶನಕ್ಕೆ ಪೋಲಿಸ್ ಇಲಖೆ ಸೂಕ್ತ ವ್ಯವಸ್ಥೆ ಕಲ್ಪಿಸಿದೆ.



# ಜಾತ್ರೆ- ಭಜನೆ- ಹಬ್ಬಗಳು ಅರ್ಥಪೂರ್ಣ ಹಿನ್ನೆಲೆ ಹೊಂದಿವೆ:ವಿರೇಶ ಹಸಬಿ



ಬೈಲಹೊಂಗಲ- ನಮ್ಮ ಪೂರ್ವಜರು ಆಚರಿಸಿಕೊಂಡು ಬಂದಿರುವ ಜಾತ್ರೆ,ಭಜನೆ,ಹಬ್ಬ ಹರಿದಿನಗಳು ಅಥ-ರ್ಪೂರ್ಣವಾದ ಹಿನ್ನೆಲೆ ಹೊಂದಿವೆ ಎಂದು ಪುರಸಭೆ ಮುಖ್ಯಾಧಿಕಾರಿ ವಿರೇಶ ಹಸಬಿ ತಿಳಿಸಿದರು.

ಪಟ್ಟಣದ ಐತಿಹಾಸಿಕ ಶ್ರೀ ದೊಡ್ಡದೇವರ ಜಾತ್ರಾ ಮಹೋತ್ಸವದ ನಿಮಿತ್ಯ ಹಮ್ಮಿಕೊಳ್ಳಲಾಗಿದ್ದ ಒಂದು ದಿನ ನಿರಂತರ ನಿಂತು ಭಜನೆ ಮಾಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ವರುಣನ ಕೃಪೆಗಾಗಿ ಪ್ರತಿ ವರ್ಷ ನಡೆಸಲಾಗುವ ಭಜನೆ ಕಾರ್ಯಕ್ರಮ ಅತ್ಯಂತ ಅರ್ಥಪೂರ್ಣವಾಗಿದೆ.

ನಾಡಿನ ಅತಿವೃಷ್ಟಿಯಾಗದ ರೀತಿಯಲ್ಲಿ ವರುಣನ ಕೃಪೆಯಾಗಲಿ, ನಾಡು ಸಂಪದ್ಭ-ರಿತವಾಗಲಿ ಎಂದು ಪ್ರಾರ್ಥಿಸಿದರು. ವೇ. ಮೂ. ಮಹಾಂತಯ್ಯ ತೆಗ್ಗಿನಮಠ ಪೂಜಾ ಕೈಂಕರ್ಯ ನೆರವೇರಿಸಿ ಮಾತನಾಡಿ ನಿರಂತರ 24 ತಾಸು ನಿಂತುಕೊಂಡು ಭಜನೆ ಮಾಡಲಾಗುವುದು.ಜು.1 ರಂದು ಮುಂಜಾನೆ ದೊಡ್ಡಾದೇವ-ರಿಗೆ ರುದ್ರಾಭಿಷೇಕ, ಬಿಲ್ವಾರ್ಚನೆ,ವಿವಿಧ ಪುಷ್ಪಗಳಿಂದ ಅಲಂಕಾರ ನೆರವೇರಿಸಿ, ಮದ್ಯಾಹ್ನ 12 ಗಂಟೆಗೆ ಸದ್ಭಕ್ತರಿಗೆ ಮಹಾ ಪ್ರಸಾದ ಸೇವೆ ಜರುಗುವುದು ಎಂದು ತಿಳಿಸಿದರು.

ಮುಖಂಡರಾದ ಮಲ್ಲಿಕಾರ್ಜುನ ಬೋಳನ್ನವರ, ಪಾಂಡಪ್ಪ ಇಂಚಲ,ರಾಜು ಜನ್ಮಟ್ಟಿ, ಕುಮಾರಗೌಡ ಪಾಟೀಲ,ಉಳವಪ್ಪ ಬಡ್ಡಿಮನಿ,ಶಿವಪ್ಪ ಲಿಂಬೆನ್ನವರ, ಶ್ರೀಕಾಂತ ಮತ್ತಿಕೊಪ್ಪ,ಶಂಕರ ಬೋಳನ್ನವರ,ಮಲ್ಲೇಶ ಇಂಚಲ ಸೇರಿದಂತೆ ಶ್ರೀ ದೊಡ್ಡಾದೇವರ ಭಜನಾ ಮಂಡಳಿಯ ಸದಸ್ಯರು ಇದ್ದರು.

# ಪಟ್ಟಿಹಾಳ(ಕೆ.ಎಸ್)ದಲ್ಲಿ ನಮ್ಮೂರು ನಮ್ಮ ಕೆರೆ ಹಸ್ತಾಂತರ ಕಾರ್ಯಕ್ರಮ



ಬೈಲಹೊಂಗಲ- ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾ ಕಛೇರಿಯ ಹಿರೇಬಾಗೇವಾಡಿ ಹಾಗೂ ಕೆರೆ ಅಭಿವೃದ್ಧಿ ಸಮಿತಿ ಪಟ್ಟಿಹಾಳ(ಕೆ.ಎಸ್) ಇವರ ಸಂಂ-ಯುಕ್ತ ಆಶ್ರಯದಲ್ಲಿ ಪಟ್ಟಿಹಾಳದಲ್ಲಿ ನಮ್ಮೂರು ನಮ್ಮ ಕೆರೆ ಕಾರ್ಯಕ್ರಮದಡಿಯಲ್ಲಿ ಪುನಶ್ಚೇತನಗೊಳಿಸಿದ ದ್ಯಾಮವ್ವನ ಕಟ್ಟೆಯ 843 ನೇಯ ನಾಮಫಲಕ ಅನಾವರಣ ಮತ್ತು ಕೆರೆ ಹಸ್ತಾಂತರ ಕೆರೆ ಅಂಗಳದಲ್ಲಿ ಗಿಡ ನಾಟಿಯ ಕಾರ್ಯಕ್ರಮವು ಮಂಗಳವಾರ ನೆರವೇರಿತು.

ಮುಖ್ಯ ಅಥಿತಿಯಾದ ಸಂಸ್ಥೆಯ ಜಿಲ್ಲಾ ಂಚನಿರ್ದೇಶಕ ಸತೀಶ ನಾಯ್ಕ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳದ ಧಮಾಧಿಕಾರಿ ಅವರ ಕಲ್ಪನೆಯಂತೆ ಹಲವಾರು ಕಾರ್ಯಕ್ರಮಗಳಲ್ಲಿ, ಕೆರೆ ಅಂಗಳ ನಮ್ಮೂರು ನಮ್ಮ ಕೆರೆ ಕಾರ್ಯಕ್ರಮವು ಯಶಸ್ಸಿನತ್ತ ಸಾಗಿದ್ದು ಸಮುದಾಯವು ಕೂಡಾ ಸಹಕಾರ ನೀಡುತ್ತಿದೆ ಎಂದರು.

ಮರಡಿನಾಗಲಾಪೂರ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಸೌಮ್ಯ ನಾಮಫಲಕವನ್ನು ಅನಾವರಣಗೊಳಿಸಿದರು. ಒಕ್ಕೂಟದ ಅಧ್ಯಕ್ಷ್ಯೆ ಗಂಗವ್ವ ಪೂಜಾರ ಕೆರೆ ಅಂಗಳದಲ್ಲಿ ಗಿಡ ನಾಟಿ ಮಾಡಿದರು. ಧಾರವಾಡ ಪ್ರಾದೇಶಿಕ ಕೆರೆ ಅಭಿಯಂತರರಾದ ನಿಂಗರಾಜ, ಕೆರೆ ಸಮೀತಿ ಅಧ್ಯಕ್ಷ ಅಪ್ಪಣ್ಣ ಹತ್ತಿ, ಗೌಡಪ್ಪ ಪಾಟೀಲ, ಮಲ್ಲನಗೌಡ ಪಾಟೀಲ, ಬಸಯ್ಯ ಹಿರೇಮಠ, ದ್ಯಾಮಪ್ಪ ಹುದಲಿ, ದ್ಯಾಮಪ್ಪ ನೇಗಿನಾಳ, ಈರಪ್ಪ ತವಗದ, ಹಿರೇಬಾಗೇವಾಡಿ ವಲಯ ಯೋಜನಾಧಿಕಾರಿ ಯೋಗೇಶ್ ಕೆ. ಮರಡಿನಾಗಲಾಪೂರ ಗ್ರಾ.ಪಂ. ಸದಸ್ಯರು ಉಪಸ್ಥಿತರಿದ್ದರು.

ಮೇಲ್ವಿಚಾರಕ ಪ್ರಶಾಂತ, ಕೃಷಿ ಮೇಲ್ವಿಚಾರಕ ರಿಯಾಜಸಾಹೇಬ್ ದರಗಾದ, ಗ್ರಾ.ಪಂ. ಸದಸ್ಯರು, ಸಂಘದ ಸದಸ್ಯರು, ಸೇವಾ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

ಪೋಟೋ ಶೀರ್ಷಿಕೆ- ಬೈಲಹೊಂಗಲ ತಾಲೂಕಿನ ಪಟ್ಟಿಹಾಳ (ಕೆ.ಎಸ್.) ಗ್ರಾಮದಲ್ಲಿ ನಮ್ಮೂರು ನಮ್ಮ ಕೆರೆ ಹಸ್ತಾಂತರ ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು.


# ದ್ವಿಚಕ್ರ ವಾಹನ(ಬೈಕ್) ರಿಪೇರಿ -ಸೇವೆ ಉಚಿತ ತರಬೇತಿ

ಕಾರವಾರ, – ಕೆನರಾ ಬ್ಯಾಂಕ್‌ನ ಮತ್ತು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಸಹಯೋಗದಲ್ಲಿ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಆಯೋಜಿಸಲಾಗಿರುವ ದ್ವಿಚಕ್ರ ವಾಹನ ರಿಪೇರಿ ಮತ್ತು ಸೇವೆ ಕುರಿತ 30 ದಿನಗಳ ಉಚಿತ ತರಬೇತಿಯನ್ನು ಆಗಸ್ಟ್ 4 ರಿಂದ ಹಮ್ಮಿಕೊಳ್ಳಲಾಗಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್‌ನ್ನು ಕಡ್ಡಾಯವಾಗಿ ಹೊಂದಿರಬೇಕು. ಅರ್ಜಿ ಸಲ್ಲಿಸಲು ಜುಲೈ 23 ಕೊನೆಯ ದಿನವಾಗಿದೆ.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9740982585, 9241482541, 9113880324 ನ್ನು ಸಂಪರ್ಕಿಸುವಂತೆ ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಿಂಗಾಯಿತ ಧರ್ಮ ಹೋರಾಟದ ಮೂರನೇ ಘಟ್ಟ ಆರಂಭಿಸಿದ್ದೇ ಫ.ಗು.ಹಳಕಟ್ಟಿ; ಬಸವರಾಜ್ ರೊಟ್ಟಿ



ಬೆಳಗಾವಿ; ಲಿಂಗಾಯಿತ ಧರ್ಮದ ಹೋರಾಟ ನಡೆದಿದ್ದು ಮೂರು ಘಟ್ಟಗಳಲ್ಲಿ ಆ ಪೈಕಿ ಹೋರಾಟದ ಮೂರನೇ ಘಟ್ಟವನ್ನು ಆರಂಭಿಸಿದ್ದೆ ವಚನ ಪಿತಾಮಹ ಫ.ಗು. ಹಳಕಟ್ಟೆಯವರು ಎಂದು ಜಾಗತಿಕ ಲಿಂಗಾಯತ ಮಹಾಸಭೆಯ ಜಿಲ್ಲಾಧ್ಯಕ್ಷ ಬಸವರಾಜ ರೊಟ್ಟಿ ಪ್ರತಿಪಾದಿಸಿದರು. ಅವರಿಂದು ಜಾಗತಿಕ ಲಿಂಗಾಯಿತ ಮಹಾಸಭೆಯಲ್ಲಿ ನಡೆದ ಫ.ಗು. ಹಳಕಟ್ಟಿ ಅವರ 145 ಜನ್ಮದಿನೋತ್ಸವದ ಅಂಗವಾಗಿ ನಡೆದ ವಚನ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಮೊದಲ ಬಾರಿಗೆ ಬಸವಣ್ಣನವರಿಂದ ಆರಂಭವಾದ ಲಿಂಗಾಯಿತ ಧರ್ಮದ ಹೋರಾಟ ಕಲ್ಯಾಣ ಕ್ರಾಂತಿಯಲ್ಲಿ ಅಂತ್ಯಗೊಂಡಿತು. ನಂತರ 300 ವರ್ಷಗಳ ಕಾಲ ಅಜ್ಞಾತವಾಸದಲ್ಲಿದ್ದ ಹೋರಾಟ ಪುನಃ 15ನೇ ಶತಮಾನದಲ್ಲಿ ವಿಜಯನಗರದ ಅರಸು ಪ್ರೌಢ ದೇವರಾಯರು ವಚನ ಸಾಹಿತ್ಯಕ್ಕೆ ನೀಡಿದ ಮಹತ್ವದಿಂದ ಪುನರುತ್ಥಾನಗೊಂಡಿತು. ಇದಾದ ಮೇಲೆ ಫ.ಗು. ಹಳಕಟ್ಟಿಯವರು ಕೈಗೊಂಡ ವಚನ ಸಾಹಿತ್ಯದ ಸಂಗ್ರಹ, ವಚನ ಸಾಹಿತ್ಯದ ಮುದ್ರಣ ಮತ್ತು ವಚನ ಸಾಹಿತ್ಯದ ಸಂಶೋಧನೆಯೊಂದಿಗೆ ಲಿಂಗಾಯಿತ ಧರ್ಮದ ಮೂರನೇ ಹೋರಾಟ ಆರಂಭವಾಯಿತೆಂದು ಅವರು ಹೇಳಿದರಲ್ಲದೆ ಅತ್ಯಮೂಲ್ಯವಾದ ವಚನ ಸಾಹಿತ್ಯವನ್ನು ಜಗತ್ತಿಗೆ ನೀಡಿದ ಮಹನೀಯರನ್ನು ನೆನಪಿಸಿಕೊಳ್ಳುವುದು ನಮ್ಮ ಆದ್ಯ ಕರ್ತವ್ಯ ಎಂದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಚಿಕ್ಕೋಡಿ ಜಿಲ್ಲಾ ಜಾಗತೀಕ ಲಿಂಗಾಯತ ಮಹಾಸಭೆಯ ಜಿಲ್ಲಾಧ್ಯಕ್ಷ ಚಂದ್ರಶೇಖರ ಗುಡಶಿ ಅವರು ಮಾತನಾಡಿ ವಚನ ಸಾಹಿತ್ಯವನ್ನು ಕಲೆ ಹಾಕಲು ಮತ್ತು ಅವುಗಳನ್ನು ಜತನವಾಗಿರಿಸಲು ಅವನ್ನು ಮುದ್ರಿಸಿ ಕಾಪಾಡಲು ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಹಾಗೂ ಬಸವಾದಿ ಶರಣರ ವಚನಗಳನ್ನು ಜಗತ್ತಿಗೆ ಮುಟ್ಟಿಸುವ ಕಾರ್ಯಕ್ಕಾಗಿ ತಮ್ಮ ಮನೆಮಠಗಳನ್ನು ಮಾರಿಕೊಂಡರು ಇಂಥ ಮಹಾನ್ ಶರಣರನ್ನು 770 ಅಮರ ಗಣಂಗಳ ಜೊತೆ 771ನೇ ಅಮರ ಗಣಂಗಳು ಎನ್ನಬಹುದು ಎಂದರು.

ನೈನಾ ಗಿರಿಗೌಡರ ಪ್ರಾರ್ಥನೆಯೊಂದಿಗೆ ಆರಂಭವಾದ ಕಾರ್ಯಕ್ರಮದಲ್ಲಿ ಲಿಂಗಾಯಿತ ಮಹಾಸಭೆಯ ಪ್ರಧಾನ ಕಾರ್ಯದರ್ಶಿ ಅಶೋಕ್ ಮಳಗಲಿ ಸ್ವಾಗತಿಸಿದರು, ಉಪಾಧ್ಯಕ್ಷ ಮುರುಗೇಶ್ ಶಿವಪೂಜಿ ವಂದಿಸಿದರು, ಸಿ. ಎಮ್.ಬೂದಿಹಾಳ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಹಿರಿಯ ಉಪಾಧ್ಯಕ್ಷ ಅಡಿವೆಪ್ಪ ಬೆಂಡಿಗೇರಿ, ಹಳಕಟ್ಟಿ ಅವರ ವಂಶಜರಾದ ರಾಜಶೇಖರ ಭೋಜ, ಇತರ ಪದಾಧಿಕಾರಿಗಳಾದ ಮುರುಗೆಪ್ಪ ಬಾಳಿ, ಮೋಹನ್ ಗುಂಡ್ಲುರ ಮುಂತಾದವರು ಉಪಸ್ಥಿತರಿದ್ದರು.

# ಎಲ್ಲ ಇಲಾಖೆಗಳ ಮಾತೃ ಕಂದಾಯ ಇಲಾಖೆ




ರಬಕವಿ-ಬನಹಟ್ಟಿ,ಜೂ1: ಕಂದಾಯ ಇಲಾಖೆ ಪ್ರತಿಯೊಂದು ಇಲಾಖೆಯ ಮಾತೃ ಇಲಾಖೆಯಾಗಿದೆ. ಕಂದಾಯ ಇಲಾಖೆಯಲ್ಲಿ ಸೇವೆ ಸಲ್ಲಿಸುವ ಪ್ರತಿಯೊಬ್ಬರ ಜವಾಬ್ದಾರಿಗಳು ಬಹಳಷ್ಟು ಮಹತ್ವವಾಗಿವೆ. ಸಾರ್ವಜನಿಕ-ರಿಗೆ ಅತ್ಯಂತ ಸಮೀಪದಲ್ಲಿ ಮತ್ತು ನೇರವಾಗಿ ಕಂದಾಯ ಇಲಾಖೆ ಸೇವೆ ಸಲ್ಲಿಸುತ್ತದೆ ಎಂದು ರಬಕವಿ ಬನಹಟ್ಟಿ ತಹಶೀಲ್ದಾರ್ ಗಿರೀಶ ಸ್ವಾದಿ ತಿಳಿಸಿದರು.

ಅವರು ಮಂಗಳವಾರ ಇಲ್ಲಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ ಕಂದಾಯ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಮಾತನಾಡಿದರು. ಸಾರ್ವಜನಿಕರೂ ಕೂಡಾ ಕಂದಾಯ ಇಲಾಖೆಯ ಅಧಿಕಾರಿಗಳ ಜೊತೆಗೆ ಸಹಕಾರ-ರಿಂದ ವರ್ತಿಸಬೇಕು. ಕಂದಾಯ ಇಲಾಖೆಯ ಅ ಧಿಕಾರಿಗಳಿಂದ ಸರ್ಕಾರದ ಸೌಲಭ್ಯಗಳ ಮಾಹಿತಿಗಳನ್ನು ಪಡೆದುಕೊಂಡು ಅವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಕೋವಿಡ್ ಸಂದರ್ಭದಲ್ಲಿ ಕಂದಾಯ ಇಲಾಖೆಯ ನೌಕರರು ಸಲ್ಲಿಸಿದ ಸೇವೆ ಶ್ರೇಷ್ಠವಾದುದು. ತಮ್ಮ ಪ್ರಾಣವನ್ನು ಲೆಕ್ಕಿಸದೆ ಅವರು ಸೇವೆಯನ್ನು ಸಲ್ಲಿಸಿದ್ದಾರೆ. ಪ್ರವಾಹ, ಬರಗಾಲ, ಮಳೆ, ಬಿಸಿಲು ಎನ್ನದೆ ಸೇವೆ ಸಲ್ಲಿಸುತ್ತಾರೆ. ಕಂದಾಯ ಇಲಾಖೆಯ ಸೇವೆಯು ಅತ್ಯಂತ ಅಮೂಲ್ಯವಾಗಿದೆ ಎಂದು ತಹಶೀಲ್ದಾರ್ ಸ್ವಾದಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪಟಾಪ್ ಗಳನ್ನು ವಿತರಣೆ ಮಾಡಿದರು. ತೇರದಾಳ ತಹಶೀಲ್ದಾರ್ ವಿಜಯಕುಮಾರ ಕಡಕೋಳ, ಗ್ರೇಡ್ 2 ತಹಶೀಲ್ದಾರ್ ಸತೀಷಕುಮಾರ ಗೌಡ, ಶಿರಸ್ತೆದಾರ ರಾಜಶೇಖರ ಸಾತಿಹಾಳ, ಎಸ್. ಎಂ.ಕೂಗಾಟೆ, ಕಂದಾಯ ನಿರೀಕ್ಷಕ ಪ್ರಕಾಶ ಮಠಪತಿ, ಮಲ್ಲಿಕಾರ್ಜುನ ಖವಟಕೊಪ್ಪ, ಸದಾಶಿವ ಕುಂಬಾರ ಸೇರಿದಂತೆ ಗ್ರಾಮ ಆಡಳಿತಾಧಿಕಾರಿಗಳು ಮತ್ತು ಕಾರ್ಯಾಲಯದ ಸಿಬ್ಬಂದಿ ವರ್ಗದವರು ಇದ್ದರು.

# ಜಿಲ್ಲಾ ಮಟ್ಟದ ಶ್ರೇಷ್ಠ ಕೃಷಿಕ ಮತ್ತು ಶ್ರೇಷ್ಠ ಕೃಷಿ ಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಳಗಾವಿ, ಧಾರವಾಡ ಕೃಷಿ ವಿಶ್ವವಿದ್ಯಾಲಯದ "ಜಿಲ್ಲಾ ಮಟ್ಟದ ಶ್ರೇಷ್ಠ ಕೃಷಿಕ ಮತ್ತು ಶ್ರೇಷ್ಠ ಕೃಷಿ ಮಹಿಳೆ" ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಕೃಷಿ ವಿಶ್ವವಿದ್ಯಾಲಯ, ಧಾರವಾಡದ ವತಿಯಿಂದ ಕೃಷಿಯಲ್ಲಿ ವಿಶೇಷ ಸಾಧನೆ ಮಾಡಿದ ರೈತರನ್ನು ಗುರುತಿಸಿ ಪ್ರಶಸ್ತಿ ನೀಡಿ ಗೌರವಿಸಲು ನಿರ್ಧರಿಸಲಾಗಿದ್ದು, ಅದರಂತೆ ಪ್ರತಿ ಜಿಲ್ಲೆಗೆ ಒಬ್ಬರಂತೆ ಅತ್ಯುತ್ತಮ ರೈತ ಹಾಗೂ ರೈತ ಮಹಿಳೆಯನ್ನು ಗುರುತಿಸಿ ಸೆಪ್ಟೆಂಬರ್‌ನಲ್ಲಿ ಜರುಗುವ 2025ರ ಕೃಷಿ ಮೇಳದಲ್ಲಿ "ಶ್ರೇಷ್ಠ ಕೃಷಿಕ ಹಾಗೂ ಶ್ರೇಷ್ಠ ಕೃಷಿ ಮಹಿಳೆ" ಪ್ರಶಸ್ತಿ ನೀಡಿ ಗೌರವಿಸಲಾಗುವುದು.

ಆಸಕ್ತ ಬೆಳಗಾವಿ ಜಿಲ್ಲೆಯ ರೈತ ಹಾಗೂ ರೈತ ಮಹಿಳೆಯರು ನಿಗದಿತ ಅರ್ಜಿ ನಮೂನೆಯನ್ನು ಜುಲೈ, 31, 2025 ರ ಒಳಗಾಗಿ ಕೃಷಿ ವಿಸ್ತರಣಾ ಮುಂದಾಳು, ಕೃಷಿ ಸಂಶೋಧನೆ ಮತ್ತು ವಿಸ್ತರಣಾ ಶಿಕ್ಷಣ ಕೇಂದ್ರ, ಸಂಕೇಶ್ವರ, ತಾ. ಹುಕ್ಕೇರಿ ಜಿ. ಬೆಳಗಾವಿ ಅಥ-ವಾ, ಐ.ಸಿ.ಎ.ಆರ್ ಕೃಷಿ ವಿಜ್ಞಾನ ಕೇಂದ್ರ ಮುಖ್ಯಸ್ಥರು, ತುಕ್ಕಾನಟ್ಟಿ ತಾ. ಮೂಡಲಗಿ ಜಿ. ಬೆಳಗಾವಿ ಅಥವಾ ಐ.ಸಿ.ಎ.ಆರ್ ಕೃಷಿ ವಿಜ್ಞಾನ ಕೇಂದ್ರ, ಮತ್ತಿಕೊಪ್ಪ ತಾ. ಬೈಲಹೊಂಗಲ ಜಿ. ಬೆಳಗಾವಿ ಇವರನ್ನು ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಛೇ-ರಿಯ ದೂರವಾಣಿ ಸಂಖ್ಯೆ : 94488 74097 / 82772 08199 ಗೆ ಅಥ-ವಾ ಕೃಷಿ ವಿಸ್ತರಣಾ ಮುಂದಾಳು, ಕೃಷಿ ಸಂಶೋಧನೆ ಮತ್ತು ವಿಸ್ತರಣಾ ಶಿಕ್ಷಣ ಕೇಂದ್ರ, ಸಂಕೇಶ್ವರ, ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಬಿ. ಅರುಣಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :127, Postal Reg No. PMG/KA/NK/BM/135/25-27 / POST AT Vantamury Colony Post Office